ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 80

11-9-2025 ಗುರುವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 80

## ಬೀದರ್ ಪಶು ವೈದ್ಯಕೀಯ ವಿವಿ ಭ್ರಷ್ಟಾಚಾರ ಆರೋಪ

# ರಾಜ್ಯದ 69 ಕಡೆ ದಾಳಿ

**ಬೆಂಗಳೂರು:** ರಾಜ್ಯದ ವಿವಿಧ ಕಡೆ ಭ್ರಷ್ಟ ಅಧಿಕಾರಿಗಳ ವಿರುದ್ಧ ಲೋಕಾಯುಕ್ತ ದಾಳಿ ಮುಂದುವರಿದಿದೆ. ಬೀದರ್‌ನ ಪಶುವೈದ್ಯಕೀಯ ಮೀನುಗಾರಿಕೆ ವಿಜ್ಞಾನಿಗಳ ವಿವಿಯಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರ ಆರೋಪ ಸಂಬಂಧ ಲೋಕಾಯುಕ್ತ ಅಧಿಕಾರಿಗಳು ಇಂದು ಬೆಳಗ್ಗೆ ಏಕಕಾಲದಲ್ಲಿ ಕರ್ನಾಟಕದ 69 ಕಡೆಗಳಲ್ಲಿ ಏಕಕಾಲಕ್ಕೆ ದಾಳಿ ನಡೆಸಿದ್ದಾರೆ.




ಭ್ರಷ್ಟಾಚಾರ ಆರೋಪ ಸಂಬಂಧ ಬೀದರ್ ಲೋಕಾಯುಕ್ತ ಕಚೇರಿಯಲ್ಲಿ ದೂರು ದಾಖಲಾಗಿತ್ತು. ಬೆಂಗಳೂರು ಮೂಲದ ವೆಂಕಟ್ ರೆಡ್ಡಿ ಎಂಬುವರು ದೂರು ನೀಡಿದ್ದರು. 2021ರಲ್ಲಿ ವಿವಿ ವ್ಯಾಪ್ತಿಯಲ್ಲಿ ಕೆಲಸ ನಿರ್ವಹಿಸಿದ ಅಧಿಕಾರಿಗಳು, ಸಿಬ್ಬಂದಿ ಮನೆಗಳು, ಕಚೇರಿಗಳಲ್ಲಿ ದಾಖಲೆಗಳ ಪರಿಶೀಲನೆ ನಡೆಸಲಾಗುತ್ತಿದೆ. ಲೋಕಾಯುಕ್ತ ಎಡಿಜಿಪಿ ಮನೀಶ್ ಕರ್ಬಿಕರ್, ಐಜಿ ಮಾರ್ಗದರ್ಶನದಲ್ಲಿ ದಾಳಿ ನಡೆದಿದೆ.

**ಬೀದರ್‌ನಲ್ಲಿ ಒಟ್ಟು 25 ಕಡೆ ದಾಳಿ:** ಬೀದರ್‌ನಲ್ಲಿ ಒಟ್ಟು 25 ಕಡೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ನಡೆಸಲಾಗಿದೆ. ವಿಶ್ವವಿದ್ಯಾಲಯದ ಪ್ರೊಫೆಸರ್, ಇಂಜಿನಿಯರ್ಸ್ ಸೇರಿ ಸಿಬ್ಬಂದಿಗಳ ಮನೆ ಮೇಲೆ ದಾಳಿ ನಡೆದಿದೆ ಎನ್ನಲಾಗಿದೆ.

**ಲೋಕಾಯುಕ್ತ ದಾಳಿ :** ಬೀದರ್ ಜಿಲ್ಲೆಯ 24 ಕಡೆ, ಬೆಂಗಳೂರಿನ 31 ಕಡೆ, ಕೊಪ್ಪಳ 2 ಕಡೆ, ಚಿಕ್ಕಮಗಳೂರು ಜಿಲ್ಲೆಯ 2 ಕಡೆ, ಹಾಸನ, ರಾಮನಗರ, ಕೋಲಾರ, ಉಡುಪಿ ಸೇರಿದಂತೆ ರಾಜ್ಯಾದ್ಯಂತ 69 ಕಡೆ ದಾಳಿ ನಡೆಸಿ ಶೋಧ ಕಾರ್ಯ ಕೈಗೊಳ್ಳಲಾಗಿದೆ.

**28 ಕೋಟಿ ಅವ್ಯವಹಾರ ಬಯಲು :** ವಿಶ್ವವಿದ್ಯಾಲಯದಲ್ಲಿ 2017–19ರವರೆಗೆ ಕೋಟ್ಯಂತರ ರೂಪಾಯಿ ಅವ್ಯವಹಾರ ನಡೆದಿದೆ ಎನ್ನುವ ಆರೋಪ ಇದೆ. 2021ರಲ್ಲಿ ಲೋಕಾಯುಕ್ತಕ್ಕೆ ದೂರು ನೀಡಿದ್ದು, ತನಿಖೆ ವೇಳೆ ಸುಮಾರು 28 ಕೋಟಿ ಅವ್ಯವಹಾರ ಬಯಲಿಗೆ ಬಂದಿದೆ ಎಂದು ಹೇಳಲಾಗಿದೆ.

ವಿಶ್ವವಿದ್ಯಾಲಯದ ಅಧಿಕಾರಿಗಳು ಮತ್ತು ಸಿಬ್ಬಂದಿ ಎಂಟರ್‌ಪ್ರೈಸ್ ಜೊತೆ ಶಾಮೀಲಾಗಿ ಪೀಠೋಪಕರಣ, ಸ್ಟೇಷನರಿ ಖರೀದಿಯಲ್ಲಿ ಅಕ್ರಮ ಎಸಗಿದ್ದಾರೆ ಎನ್ನಲಾಗಿದೆ.

# ಅಕ್ರಮ ಗಣಿಗಾರಿಕೆ ತಡೆ, ಆಸ್ತಿ ಜಪ್ತಿ ಕಾನೂನಿಗೆ ಅಧಿಕೃತ ಮುದ್ರೆ : ರಾಜ್ಯ ಗೆಜೆಟ್‌ನಲ್ಲಿ ಪ್ರಕಟ

**ಬೆಂಗಳೂರು:** ಅಕ್ರಮ ಗಣಿಗಾರಿಕೆ ವಿರುದ್ಧದ ಕ್ರಮಗಳನ್ನು ಬಲಪಡಿಸುವ ಮತ್ತು ಕಾನೂನುಬಾಹಿರ ವಿಧಾನಗಳ ಮೂಲಕ ಸಂಗ್ರಹಿಸಲಾದ ಆಸ್ತಿಗಳನ್ನು ವಶಪಡಿಸಿಕೊಳ್ಳಲು ರಾಜ್ಯ ಸರ್ಕಾರ ಹೊಸ ಕಾನೂನು ಜಾರಿಗೊಳಿಸಿದೆ.



ಸೆಪ್ಟೆಂಬರ್ 9 ರಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಕರ್ನಾಟಕ ಅಕ್ರಮ ಗಣಿಗಾರಿಕೆ ಮತ್ತು ಕಾನೂನುಬಾಹಿರ ಸ್ವತ್ತನ್ನು ವಶಪಡಿಸಿಕೊಳ್ಳುವುದಕ್ಕಾಗಿ ಮತ್ತು ಜಪ್ತಿಗಾಗಿ ವಸೂಲಾತಿ ಆಯುಕ್ತರ ನೇಮಕಾತಿ ಅಧಿನಿಯಮ, 2025 ಕ್ಕೆ ಸಹಿ ಹಾಕಿದ್ದು, ಬುಧವಾರ ಅದನ್ನು ರಾಜ್ಯ ಗೆಜೆಟ್‌ನಲ್ಲಿ ಪ್ರಕಟಿಸಲಾಗಿದೆ.

ರಾಜ್ಯಾದ್ಯಂತ ಜಪ್ತಿ ಮತ್ತು ಮುಟ್ಟುಗೋಲು ಪ್ರಕ್ರಿಯೆಗಳನ್ನು ಮೇಲ್ವಿಚಾರಣೆ ಮಾಡಲು ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಹುದ್ದೆಗಿಂತ ಕಡಿಮೆಯಿಲ್ಲದ ಹಿರಿಯ ಅಧಿಕಾರಿಯನ್ನು ವಸೂಲಾತಿ ಆಯುಕ್ತರಾಗಿ ನೇಮಕ ಮಾಡುವುದಕ್ಕೆ ಈ ಕಾಯ್ದೆ ಅವಕಾಶ ನೀಡುತ್ತದೆ. ಕಾಯ್ದೆಯಡಿಯಲ್ಲಿ, ವಸೂಲಾತಿ ಆಯುಕ್ತರು ಅಕ್ರಮ ಗಣಿಗಾರಿಕೆಯಿಂದ ಸಂಪಾದಿಸಿದ ಚರ ಮತ್ತು ಸ್ಥಿರ ಆಸ್ತಿಗಳನ್ನು ವಶಪಡಿಸಿಕೊಳ್ಳುವ, ಅಧೀನ ಅಧಿಕಾರಿಗಳನ್ನು ಮೇಲ್ವಿಚಾರಣೆ ಮಾಡುವ ಮತ್ತು ಸಿವಿಲ್ ನ್ಯಾಯಾಲಯಕ್ಕೆ ಸಮಾನವಾದ ಅಧಿಕಾರವನ್ನು ಚಲಾಯಿಸುವ ಅಧಿಕಾರ ಹೊಂದಿರುತ್ತಾರೆ.

ರಾಜ್ಯದಲ್ಲಿ ಲೆಕ್ಕವಿಲ್ಲದಷ್ಟು ಸಂಖ್ಯೆಯ ಗುತ್ತಿಗೆದಾರರು, ಸಾಗಾಣಿಕೆದಾರರು, ರಫ್ತು ದಾರರು, ದಾಸ್ತಾನುಧಾರಕರು, ಖರೀದಿದಾರರು ಮತ್ತು ಇತರ ಮಧ್ಯವರ್ತಿಗಳು ಸೇರಿದಂತೆ ಬಹುವಹಿವಾಟುಗಳನ್ನು ಒಳಗೊಂಡ ಅಕ್ರಮ ಗಣಿಗಾರಿಕೆ ಚಟುವಟಿಕೆಗಳಿಂದ ಸಂಘಟಿತ ಅಪರಾಧ, ವ್ಯವಸ್ಥಿತ ಒಳಸಂಚು ಮತ್ತು ಅಪರಾಧ ಉತ್ಪತ್ತಿಗಳಿಂದಾದ ಸ್ವತ್ತುಗಳನ್ನು ವಶಪಡಿಸಿಕೊಳ್ಳಲು, ಜಪ್ತಿಮಾಡಲು, ಮುಟ್ಟುಗೋಲು ಹಾಕಿಕೊಳ್ಳುವುದಕ್ಕೆ ವಸೂಲಿ ಆಯುಕ್ತರೊಬ್ಬರ ನೇಮಕಾತಿಯ ಅವಶ್ಯಕತೆಯನ್ನು ಸರ್ಕಾರ ಮನಗಂಡು ಈ ಅಧಿನಿಯಮವನ್ನು ವಿಧಾನ ಮಂಡಲದ ಉಭಯ ಸದನಗಳಲ್ಲಿ ಮಂಡಿಸಿ, ಒಪ್ಪಿಗೆ ಪಡೆದು ಇಂದು ಅಧಿಸೂಚಿಸಿದೆ.

# ನಾಯಿ ಕಡಿತದ ಲಸಿಕೆಗೆ ಸಹಾಯವಾಣಿ ಸ್ಥಾಪನೆಗೆ ಸೂಚನೆ : ಗಂಗಾಧರಸ್ವಾಮಿ



**ದಾವಣಗೆರೆ:** ನಾಯಿಗಳು ಮಹಿಳೆ ಮತ್ತು ಮಕ್ಕಳ ಮೇಲೆ ದಾಳಿ ಮಾಡುವುದನ್ನು ಕಾಣಲಾಗಿದೆ. ಇದರ ನಿಯಂತ್ರಣಕ್ಕಾಗಿ ನಾಯಿಗಳು ಹೆಚ್ಚಾಗದಂತೆ ಸಂತಾನಹರಣ ಚಿಕಿತ್ಸೆ ಮತ್ತು ಸಂತತಿ ಹೆಚ್ಚಳವಾಗಂತೆ ಲಸಿಕೆ ಹಾಕುವಂತೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸೂಚಿಸಿದರು.

ಬುಧವಾರ(ಸೆ.10) ರಂದು ಜಿಲ್ಲಾಧಿಕಾರಿ ಕಚೇರಿಯ ಸಭಾಂಗದಲ್ಲಿ ನಡೆದ ಜಿಲ್ಲಾ ಮಟ್ಟದ ಪ್ರಾಣಿ ಜನನ ನಿಯಂತ್ರಣ ಅನುಷ್ಠಾನ ಮತ್ತು ಮೇಲ್ವಿಚಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯವರು ನಾಯಿ ಕಚ್ಚಿದಾಗ ಲಸಿಕೆ ನೀಡಲು ಸಾರ್ವಜನಿಕರಿಗೆ ಸಹಾಯವಾಗುವಂತೆ 108 ಇಲ್ಲವೇ 1098 ಸಹಾಯವಾಣಿ ರಚನೆ ಮಾಡಿ, ಕರೆ ಬಂದ ಕೂಡಲೇ ಅವರ ಮನೆಗೆ ತೆರಳಿ ಚಿಕಿತ್ಸೆ ನೀಡಬೇಕು. ಜಿಲ್ಲೆಯಲ್ಲಿರುವ ಎಲ್ಲಾ ಬೀದಿನಾಯಿ, ಸಾಕು ನಾಯಿಗಳಿಗೆ ಎಆರ್‌ಯು ಲಸಿಕೆ ನೀಡಲು ಕ್ರಮಕೈಗೊಳ್ಳುವಂತೆ ತಿಳಿಸಿದರು. ಮನೆ ಮನೆಗೆ ತೆರಳಿ ಸಾಕು ಪ್ರಾಣಿಗಳಿಗೆ ವ್ಯಾಕ್ಸಿನ್ ನೀಡಬೇಕು. ಎಬಿಸಿ ಕಾರ್ಯಕ್ರಮ ಮಾಡಲು ನಗರಾಭಿವೃದ್ಧಿ ಕೋಶ, ಮಹಾನಗರಪಾಲಿಕೆ ಸಂಬಂಧಿಸಿದ ಟೆಂಡರ್ ಮೂಲಕ ಸಂಸ್ಥೆಗಳನ್ನು ಗುರುತಿಸಿ ಎಲ್ಲಾ ನಾಯಿಗಳಿಗೆ ಪಶುಪಾಲನಾ ಸಹಯೋಗದೊಂದಿಗೆ ಸಂತಾನ ಹರಣ ಚಿಕಿತ್ಸೆ ನೀಡುವಂತೆ ತಿಳಿಸಿದರು.

ಪ್ರಕರಣದ ಆಧಾರದ ಮೇರೆಗೆ ಗಂಭೀರ ಅನಾರೋಗ್ಯ ಅಥವಾ ಮಾರಣಾಂತಿಕವಾಗಿ ಗಾಯಗೊಂಡ ಅಥವಾ ಹುಚ್ಚುರೋಗ ಪೀಡಿತ ನಾಯಿಗಳನ್ನು ಸೋಡಿಯಂ ಪೆಂಟಾಥಾಲ್ ಬಳಸಿ ನೋವುರಹಿತ ವಿಧಾನದಲ್ಲಿ ದಯಾಮರಣ ನೀಡಬೇಕು. ಬೇರೆ ಯಾವುದೇ ವಿಧಾನವನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಪ್ರತಿ ಪ್ರಾಣಿಯನ್ನು ದಯಾಮರಣಕ್ಕೆ ಒಳಪಡಿಸಲು ಲಿಖಿತವಾಗಿ ಕಾರಣಗಳನ್ನು ದಾಖಲಿಸಬೇಕು. ಪ್ರಾಣಿ ಜನನ ನಿಯಂತ್ರಣ ಕಾರ್ಯಕ್ರಮವನ್ನು ಕಾರ್ಯಗತಗೊಳಿಸಲು ನಾಯಿಗಳ ಸಂಖ್ಯೆಗೆ ಅನುಗುಣವಾಗಿ ಅವಶ್ಯಕ ಮೂಲಸೌಕರ್ಯಗಳು ಇರಬೇಕು. ಹೊಸ ಪ್ರದೇಶದಲ್ಲಿ ಕಾರ್ಯಕ್ರಮವನ್ನು ಕೈಗೆತ್ತಿಕೊಳ್ಳುವ ಮೊದಲು ಉದ್ದೇಶಿತ ಪ್ರದೇಶದಲ್ಲಿ ನಾಯಿಗಳ ಜನನ ನಿಯಂತ್ರಣವನ್ನು ಹಂತ ಹಂತವಾಗಿ ಕೈಗೊಳ್ಳಲು ಮೂಲಸೌಕರ್ಯವನ್ನು ವಿನ್ಯಾಸಗೊಳಿಸಬೇಕು ಎಂದರು.

ಜಿಲ್ಲೆಯಲ್ಲಿರುವ ಎಲ್ಲಾ ನಾಯಿಗಳಿಗೆ ಉಚಿತ ಲಸಿಕೆ ಹಾಕಲು ಲಸಿಕಾ ಅಭಿಯಾನವನ್ನು ಸೆ.28 ರಿಂದ ಅ.27 ರವರೆಗೆ ಹಮ್ಮಿಕೊಳ್ಳಲಾಗಿದೆ. ಹಾಗೂ ಶಾಲೆಗಳಲ್ಲಿ ಪಶುಪಾಲನಾ ಇಲಾಖೆಯಿಂದ ರೇಬಿಸ್ ಅರಿವು ಕಾರ್ಯಕ್ರಮವನ್ನು ಆಯೋಜಿಸಬೇಕು ಎಂದರು.

ಜಿ.ಪಂ ಸಿಇಓ ಗಿತ್ತೆ ಮಾಧವ್ ವಿಠ್ಠಲ್ ರಾವ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹಾಂತೇಶ್, ಪಶುಪಾಲನಾ ಇಲಾಖೆ ಡಿಡಿ. ಡಾ;ಮಹೇಶ್.ಹೆಚ್.ಎಂ, ಡಿಹೆಚ್‌ಓ ಡಾ;ಷಣ್ಮುಖಪ್ಪ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ರಾಮಭೋವಿ ಉಪಸ್ಥಿತರಿದ್ದರು.

# ರಾಜ್ಯದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಎನ್‌ಆರ್‌ಐ ಕೋಟಾ ರದ್ದುಪಡಿಸುವಂತೆ ಎಐಡಿಎಸ್‌ಓ ಪ್ರತಿಭಟನೆ

**ದಾವಣಗೆರೆ.ಸೆ.10:** ರಾಜ್ಯದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಎನ್.ಆರ್.ಐ ಕೋಟಾ ರದ್ದು ಪಡಿಸುವಂತೆ ಆಗ್ರಹಿಸಿ ಆಲ್ ಇಂಡಿಯಾ ಡೆಮಾಕ್ರೆಟಿಕ್ ಸ್ಟೂಡೆಂಟ್ಸ್ ಆರ್ಗನೈಜೇಷನ್ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ನಗರದ ಜಯದೇವ ವೃತ್ತದಲ್ಲಿ ಪ್ರತಿಭಟನೆ ನಡೆಸಿದ ಕಾರ್ಯಕರ್ತರು ರಾಜ್ಯ ಸರ್ಕಾರ ವಿರುದ್ಧ ಘೋಷಣೆ ಕೂಗಿ ಉಪವಿಭಾಗಾಧಿಕಾರಿ ಮುಖಾಂತರ ವೈದ್ಯಕೀಯ ಶಿಕ್ಷಣ ಸಚಿವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಎಐಡಿಎಸ್‌ಓ ಜಿಲ್ಲಾಧ್ಯಕ್ಷೆ ಪೂಜಾ ನಂದಿಹಳ್ಳಿ ಮಾತನಾಡಿ, 2025–26ನೇ ಸಾಲಿನಿಂದ ರಾಜ್ಯದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಶೇ.15 ರಷ್ಟು ಎನ್.ಆರ್.ಐ ಕೋಟಾವನ್ನು ಆರಂಭಿಸಲು ರಾಜ್ಯ ಸರ್ಕಾರ ನಿರ್ಧಾರಿಸಿದೆ. ಸರ್ಕಾರದ ಈ ನಿರ್ಧಾರದಿಂದ ಬಡ ವಿದ್ಯಾರ್ಥಿಗಳನ್ನು ಆತಂಕಕ್ಕೆ ತಳ್ಳಿದೆ ಎಂದ ಅವರು, ಈಗಾಗಲೇ ಅಖಿಲ ಭಾರತ ಕೋಟಾದಡಿ ಶೇ.15 ರಷ್ಟು ಸೀಟುಗಳನ್ನು ನೀಡಲಾಗಿದೆ. ಈಗ ಇನ್ನೂ ಶೇ.15 ರಷ್ಟು ಸೀಟುಗಳನ್ನು ಎನ್.ಆರ್.ಐ ಕೋಟಾಗೆ ನೀಡಿದರೆ 200 ವಿದ್ಯಾರ್ಥಿಗಳ ಒಂದು ಬ್ಯಾಚಿನಲ್ಲಿ 140 ಸೀಟುಗಳು ಮಾತ್ರ ರಾಜ್ಯದ ವಿದ್ಯಾರ್ಥಿಗಳಿಗೆ ಉಳಿದಂತಾಗುತ್ತದೆ. ಈ ಹಿನ್ನೆಲೆ ಸರ್ಕಾರ ಎನ್.ಆರ್.ಐ ಕೋಟಾ ರದ್ದುಗೊಳಿಸುವ ಮೂಲಕ ಅರ್ಹ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಬೇಕೆಂದು ಒತ್ತಾಯಿಸಿದರು.

ಸರ್ಕಾರಿ ವೈದ್ಯಕೀಯ ಕಾಲೇಜುಗಳು ಆರ್ಥಿಕ ಹಿನ್ನೆಲೆಯನ್ನು ಲೆಕ್ಕಿಸದೆ ಅರ್ಹ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗುಣಮಟ್ಟದ ಉನ್ನತ ಶಿಕ್ಷಣವನ್ನು ಒದಗಿಸಲು ಸ್ಥಾಪಿಸಲಾಗಿದೆ. ಶ್ರೀಮಂತ ಎನ್‌ಆರ್‌ಐ ವಿದ್ಯಾರ್ಥಿಗಳಿಗೆ ಸೀಟುಗಳನ್ನು ಮೀಸಲಿಡುವ ಮೂಲಕ, ವೈದ್ಯರಾಗಿ ಸಮಾಜಕ್ಕೆ ಸೇವೆ ಸಲ್ಲಿಸಲು ಬಯಸುವ ನೂರಾರು ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ಪ್ರತಿಭಾವಂತ ವಿದ್ಯಾರ್ಥಿಗಳ ಅವಕಾಶವನ್ನು ಕಡಿತಗೊಳಿಸಿದಂತಾಗಿದೆ ಎಂದರು.

# ನಾಳೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಭದ್ರಾ ಜಲಾಶಯಕ್ಕೆ ಬಾಗಿನ ಸಮರ್ಪಣೆ




**ದಾವಣಗೆರೆ.ಸೆ.10:** ರೈತರ ಜೀವನಾಡಿ ಭದ್ರಾ ಜಲಾಶಯ ಭರ್ತಿಯಾದ ಪ್ರಯುಕ್ತ ಇದೇ ಸೆ.12 ರಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಭದ್ರಾ ಜಲಾಶಯಕ್ಕೆ ಬಾಗಿನ ಅರ್ಪಣೆ ಮಾಡಲಿದ್ದಾರೆ ಎಂದು ಕಾಂಗ್ರೆಸ್ ಪಕ್ಷದ ಜಿಲ್ಲಾಧ್ಯಕ್ಷ ಹೆಚ್.ಬಿ.ಮಂಜಪ್ಪ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಮಧ್ಯಾಹ್ನ 1 ಗಂಟೆ–ಗೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲೆಯ ಶಾಸಕರುಗಳಾದ ಶಾಮನೂರು ಶಿವಶಂಕರಪ್ಪ, ಕೆ.ದೇವೇಂದ್ರಪ್ಪ, ಕೆ.ಎಸ್.ಬಸವಂತಪ್ಪ, ಬಸವರಾಜ್ ಶಿವಗಂಗಾ, ಡಿ.ಕೆ.ಶಾಂತನಗೌಡ ಮತ್ತು ಹರಪನಹಳ್ಳಿ ಶಾಸಕಿ ಲತಾ ಮಲ್ಲಿಕಾರ್ಜುನ್, ಜಿಲ್ಲೆಯ ಕಾಂಗ್ರೆಸ್ ಮುಖಂಡರು, ಚುನಾಯಿತ ಪ್ರತಿನಿಧಿಗಳು, ಕಾರ್ಯಕರ್ತರು ಹಾಗೂ ಭದ್ರಾವತಿ, ತರೀಕೆರೆ, ಶಿವಮೊಗ್ಗ ಶಾಸಕರು, ಮುಖಂಡರು ಸೇರಿದಂತೆ ಸುಮಾರು 10 ಸಾವಿರ ಜನ ಈ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ಅಂದು ಬೆಳಿಗ್ಗೆ 10 ಗಂಟೆಗೆ ನಗರದಿಂದ ಉಚಿತ 135 ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ ಎಂದರು.

ಹಿಂದಿನ ಬಿಜೆಪಿ ಸರ್ಕಾರದಲ್ಲಿ ಭದ್ರಾ ಜಲಾಶಯದಿಂದ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗೆ ಡಿ.ಪಿ.ಆರ್ ಮಾಡಲಾಗಿತ್ತು ಅದರಿಂದಲೇ ಭದ್ರಾ ನಾಲೆಯ ಬಲದಂಡೆ ನಾಲೆ ಸೀಳಿ ಪೈಪ್ ಲೈನ್ ಹಾಕಲಾಗಿದೆ. ಇದರಿಂದ ಭದ್ರಾ ಅಚ್ಚುಕಟ್ಟು ಪ್ರದೇಶದ ರೈತರಿಗೆ ಅನ್ಯಾಯವಾಗುತ್ತದೆ ಎಂದು ನಾವುಗಳು ಸಚಿವ ಮಲ್ಲಿಕಾರ್ಜುನ್ ಜೊತೆ ನಿಯೋಗ ತೆರಳಿ ಈ ಬಗ್ಗೆ ಡಿ.ಸಿ.ಎಂ. ಅವರ ಗಮನಕ್ಕೆ ತಂದಿದ್ದೇವು. ನಾನೇ ಸ್ವತಹ ಭೇಟಿ ನೀಡಿ ಶಾಶ್ವತ ಪರಿಹಾರ ನೀಡುವುದಾಗಿ ಅವರೂ ಹೇಳಿದ್ದರು ಎಂದರು.

ಡಿಸಿಎಂ ಅವರಿಗೆ ಭದ್ರಾ ಅಚ್ಚುಕಟ್ಟು ಪ್ರದೇಶದ ರೈತರ ಹಿತಕಾಯುವಂತೆ ಮತ್ತು ಕುಡಿಯುವ ನೀರಿಗೆ ಜಲಾಶಯದ ಬೇರೆ ಕಡೆಯಿಂದ ನೀರು ಕೊಂಡೊಯ್ಯಲು ಒತ್ತಡ ಹಾಕುತ್ತೇವೆ. ಬಿಜೆಪಿಗರಂತೆ ನಾವು ಈ ವಿಚಾರದಲ್ಲಿ ರಾಜಕೀಯ ಮಾಡುವುದಿಲ್ಲ. ನಮ್ಮ ಜಿಲ್ಲೆಯ ರೈತರ ಪರವಾಗಿ ನಾವಿದ್ದೇವೆ ಎಂದು ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ಮುಖಂಡರಾದ ದಿನೇಶ್ ಕೆ.ಶೆಟ್ಟಿ, ಮುದೇಗೌಡ್ರು ಗಿರೀಶ್, ಆಯೂಬ್ ಪೈಲ್ವಾನ್, ಕೆ.ಜಿ.ಶಿವಕುಮಾರ್, ಬೂದಾಳ್ ಬಾಬು, ಬಿ.ಕೆ.ಪರುಶುರಾಮ್ ಇತರರು ಇದ್ದರು.

## ಸೆಪ್ಟೆಂಬರ್ 13 ರಂದು ರಾಷ್ಟ್ರೀಯ ಲೋಕ ಅದಾಲತ್ । ಶೀಘ್ರ ನ್ಯಾಯ ಅದಾಲತ್‌ನಿಂದ ಸಾಧ್ಯ

# ರಾಜಿಯಾಗಬಲ್ಲ 9916 ಪ್ರಕರಣಗಳ ಇತ್ಯರ್ಥಕ್ಕೆ ಗುರಿ

**ದಾವಣಗೆರೆ:** ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರದ ನಿರ್ದೇಶನದನ್ವಯ ಸೆಪ್ಟೆಂಬರ್ 13 ರಂದು ಎಲ್ಲಾ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ ಅದಾಲತ್ ನಡೆಯಲಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಡಿ.ಕೆ.ವೇಲಾ ತಿಳಿಸಿದರು.



ಅವರು ಬುಧವಾರ ಜಿಲ್ಲಾ ನ್ಯಾಯಾಲಯದಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಕುರಿತಂತೆ ಮಾಹಿತಿ ನೀಡಲು ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಕಡಿಮೆ ವೆಚ್ಚದಲ್ಲಿ ತ್ವರಿತವಾಗಿ ಇಬ್ಬರೂ ಕಕ್ಷಿದಾರರ ಒಪ್ಪಿಗೆಯಂತೆ ಸಮಾಧಾನ ತರುವಂತಹ ತೀರ್ಪು ನೀಡಲು ಜನತಾ ನ್ಯಾಯಾಲಯ ಜನರಿಗೆ ಬಹಳಷ್ಟು ಅನುಕೂಲಕರವಾಗಿದೆ. ಲೋಕ ಅದಾಲತ್‌ನಲ್ಲಿ ರಾಜಿಯಾಗುವ ಪ್ರಕರಣಗಳ ಮೇಲೆ ಯಾವುದೇ ಮೇಲ್ಮನವಿ ಹೋಗಲು ಅವಕಾಶ ಇರುವುದಿಲ್ಲ ಮತ್ತು ನ್ಯಾಯಾಲಯದ ತೀರ್ಪಿನಷ್ಟೆ ಮಹತ್ವತೆ ಇರುತ್ತದೆ. ರಾಜಿಯಾಗಬಲ್ಲ ಪ್ರಕರಣಗಳನ್ನು ಲೋಕ ಅದಾಲತ್‌ನಲ್ಲಿ ಬಗೆಹರಿಸಿಕೊಳ್ಳುವುದರಿಂದ ಸಮಯದ ಜೊತೆ ಹಣದ ಉಳಿತಾಯವಾಗಲಿದೆ ಎಂದರು.

ಜಿಲ್ಲೆಯಲ್ಲಿ ಎಲ್ಲಾ 25 ನ್ಯಾಯಾಲಯಗಳಿಂದ ಒಟ್ಟು 42701 ಪ್ರಕರಣಗಳು ಬಾಕಿ ಇರುತ್ತವೆ. ಇದರಲ್ಲಿ ರಾಜಿಯಾಗಬಲ್ಲ ಪ್ರಕರಣಗಳನ್ನು ಇತ್ಯರ್ಥ ಮಾಡಲು ಸೆಪ್ಟೆಂಬರ್ 13 ರಂದು ನಡೆಯುವ ಲೋಕ ಅದಾಲತ್‌ನಲ್ಲಿ 9916 ಪ್ರಕರಣಗಳನ್ನು ಇತ್ಯರ್ಥ ಮಾಡಲು ಗುರಿ ಹೊಂದಲಾಗಿದೆ. ಇದರಲ್ಲಿ ಈಗಾಗಲೇ 2863 ಪ್ರಕರಣಗಳನ್ನು ರಾಜೀ ಮೂಲಕ ಇತ್ಯರ್ಥ ಮಾಡಿದ್ದು ಅಂತಿಮ ತೀರ್ಪಿನ ವರದಿ ಮಾಡಬೇಕಾಗಿದೆ ಎಂದರು.

ಲೋಕ ಅದಾಲತ್‌ನಲ್ಲಿ ಭಾಗವಹಿಸಿ ಪ್ರಕರಣ ಇತ್ಯರ್ಥ ಮಾಡಿಕೊಳ್ಳಲು ಆಸಕ್ತಿ ಇರುವ ಕಕ್ಷಿದಾರರು ಇದರಲ್ಲಿ ಭಾಗವಹಿಸಲು ಮುಕ್ತ ಅವಕಾಶ ಇದೆ.

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಡಿ.ಕೆ.ವೇಲಾ**

ಲೋಕ ಅದಾಲತ್‌ಗೆ ರಾಜಿಯಾಗಬಲ್ಲ ಕ್ರಿಮಿನಲ್ ಪ್ರಕರಣ, ಬ್ಯಾಂಕ್ ಪ್ರಕರಣ, ಹಣ ವಸೂಲಾತಿ, ಸಿಬ್ಬಂದಿಗಳ ವೇತನ, ಕಾರ್ಮಿಕರ ವಿವಾದ, ವಿದ್ಯುತ್ ಬಿಲ್, ನೀರಿನ ಶುಲ್ಕ, ವೈವಾಹಿಕ ವಿವಾದ, ಭೂ ಸ್ವಾಧೀನ, ಕಂದಾಯ ಪ್ರಕರಣ, ಪಾಲು ವಿಭಾಗ, ಸಂಚಾರಿ ನಿಯಮಗಳ ಉಲ್ಲಂಘನೆ, ಜನನ ಮತ್ತು ಮರಣ ಸೇರಿದಂತೆ ರಾಜಿಯಾಗಬಲ್ಲ ಪ್ರಕರಣಗಳನ್ನು ಇತ್ಯರ್ಥ ಮಾಡಲಾಗುತ್ತದೆ.

ಲೋಕ ಅದಾಲತ್ ಯಶಸ್ಸಿಗೆ ವಕೀಲರ ಸಂಘ, ವಕೀಲರು, ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಸಹಕಾರ ನೀಡುತ್ತಿದ್ದು ಸಾರ್ವಜನಿಕರು ಇದರ ಸದುಪಯೋಗ ಮಾಡಿಕೊಳ್ಳಬೇಕೆಂದರು.

ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಮಾತನಾಡಿ ಕಂದಾಯ ಇಲಾಖೆಯ ನ್ಯಾಯಾಲಯದಲ್ಲಿ ಬಾಕಿ ಇದ್ದ ಪ್ರಕರಣಗಳನ್ನು 90 ದಿನಗಳಲ್ಲಿ ಇತ್ಯರ್ಥ–ಕ್ಕೆ ಕ್ರಮ ಕೈಗೊಳ್ಳಲಾಗಿದೆ ಎಂದರು.

# ಸೆ.12 ಮತ್ತು 13 ರಂದು 'ಪದವಿ ಪೂರ್ವ ಶಿಕ್ಷಣ ಸಮಾವೇಶ 2025'

**ದಾವಣಗೆರೆ.ಸೆ.10:** ಕರ್ನಾಟಕ ಅನುದಾನರಹಿತ ಪದವಿಪೂರ್ವ ಕಾಲೇಜು ಆಡಳಿತ ಮಂಡಳಿಗಳ ಸಂಘದ ಆಶ್ರಯದಲ್ಲಿ ಇದೇ ಸೆ.12 ಮತ್ತು 13 ರಂದು ನಗರದ ಬಿಐಇಟಿ ಕಾಲೇಜಿನ ಎಸ್.ಎಸ್.ಮಲ್ಲಿಕಾರ್ಜುನ ಕಲ್ಚರಲ್ ಸೆಂಟರ್‌ನಲ್ಲಿ ರಾಜ್ಯಮಟ್ಟದ 2ನೇ 'ಪದವಿ ಪೂರ್ವ ಶಿಕ್ಷಣ ಸಮಾವೇಶ 2025' ನ್ನು ಹಮ್ಮಿಕೊಳ್ಳಲಾಗಿದೆ.

ಸುದ್ದಿಗೋಷ್ಠಿಯಲ್ಲಿ ಕುಪ್ಮಾ ಅಧ್ಯಕ್ಷ ಎಂ.ವಿ.ಶ್ರೀಧರ್ ಮಾತನಾಡಿ, ರಾಜ್ಯದಲ್ಲಿ 3 ಸಾವಿರ ಅನುದಾನ ರಹಿತ ಕಾಲೇಜುಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ದೃಷ್ಠಿಯಿಂದ ಕಳೆದ 2022 ರಲ್ಲಿ ಕು?್ಮ ಸಂಘವು ಪ್ರಾರಂಭವಾಯಿತು. ಶಿಕ್ಷಣ ಕ್ಷೇತ್ರದ ಹಲವಾರು ಸಮಸ್ಯೆಗಳು, ಮಾರ್ಪಾಡುಗಳು ಮತ್ತು ಬದಲಾವಣೆಗಳ ಬಗ್ಗೆ ಸರ್ಕಾರದೊಂದಿಗೆ ಚರ್ಚಿಸಿ ಬಗೆಹರಿಸುವಲ್ಲಿ ಕು?್ಮ ಕಾರ್ಯಪ್ರವೃತ್ತವಾಗಿದೆ. ಕರ್ನಾಟಕ ರಾಜ್ಯದ ಬೇರೆ ಬೇರೆ ಜಿಲ್ಲೆಗಳಿಂದ ಸುಮಾರು 200ಕ್ಕೂ ಹೆಚ್ಚು ಖಾಸಗಿ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳು ತಮ್ಮ ನೊಂದಣಿಯ ಮೂಲಕ ಸದಸ್ಯತ್ವವನ್ನು ಪಡೆದಿರುತ್ತಾರೆ ಎಂದರು. ಸೆ.12 ರಂದು ಮಧ್ಯಾಹ್ನ 2 ಗಂಟೆಗೆ ಜಿಲ್ಲಾಮಂತ್ರಿ ಎಸ್.ಎಸ್. ಮಲ್ಲಿಕಾರ್ಜುನ್ ಸಮಾವೇಶ ಉದ್ಘಾಟಿಸಲಿದ್ದಾರೆ. ಗೌರವ ಅತಿಥಿಗಳಾಗಿ ಶಿಕ್ಷಣ ಸಚಿವ ಮಧು ಬಂಗಾರಪ್ಪ, ಅತಿಥಿಗಳಾಗಿ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಸೇರಿದಂತೆ ಕುಪ್ಮಾದ ಗೌರವ ಅಧ್ಯಕ್ಷರು, ಅಧ್ಯಕ್ಷರು, ಕಾರ್ಯದರ್ಶಿಗಳು, ಕಾರ್ಯಕಾರಿಣಿ ಸಮಿತಿಯ ಸದಸ್ಯರು, ರಾಜ್ಯದ ಬೇರೆ ಬೇರೆ ಅಧ್ಯಕ್ಷರು/ಕಾರ್ಯದರ್ಶಿ/ಸದಸ್ಯರು ಭಾಗವಹಿಸಲಿದ್ದಾರೆ ಎಂದರು.

ನಂತರ ಕುಪ್ಮಾ ಸಂಘದ ಬಲವರ್ಧನೆ, ಪದವಿ ಪೂರ್ವ ಬೋಧನೆಯಲ್ಲಿ ಗುಣಮಟ್ಟದ ಉನ್ನತೀಕರಣ, ಖಾಸಗಿ ಪದವಿ ಪೂರ್ವ ಕಾಲೇಜುಗಳ ನಿರ್ವಹಣೆಯ ಸವಾಲುಗಳು, ಶಿಕ್ಷಣ ಮತ್ತು ಶಿಕ್ಷಣಾ ಸಂಸ್ಥೆಯ ನಿರ್ವಹಣೆಯಲ್ಲಿ ತಂತ್ರಜ್ಞಾನ ಕೃತಕ ಬುದ್ಧಿಮತ್ತೆಯ ಪಾತ್ರದ ಬಗ್ಗೆ ಸಂಪನ್ಮೂಲ ವ್ಯಕ್ತಿಗಳಿಂದ ಸಂವಾದ, ಹಾಗೂ ಹಲವು ವಿಷಯಗಳ ಬಗ್ಗೆ ಚರ್ಚೆ ನಡೆಯಲಿದೆ. ಸೆ.13 ರಂದು ಮಧ್ಯಾಹ್ನ 1.30ಕ್ಕೆ ಸಮಾರೋಪ ಸಮಾರಂಭ ನಡೆಯಲಿದೆ ಎಂದು ತಿಳಿಸಿದರು.

# ಈ ವರ್ಷ ರಾಜ್ಯದಲ್ಲಿ ಕಿರು ಆಹಾರ ಸಂಸ್ಕರಣೆಯ 5000 ಘಟಕಗಳ ಗುರಿ : ಚೆಲುವರಾಯಸ್ವಾಮಿ



**ಚಿಕ್ಕಮಗಳೂರು, ಸೆ. 10:** ಈ ವರ್ಷ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ಐದು ಸಾವಿರ ಘಟಕಗಳು ರಾಜ್ಯದಲ್ಲಿ ರೂಪುಗೊಳ್ಳಬೇಕೆಂಬ ಗುರಿಯನ್ನು ಹೊಂದಿರುವುದಾಗಿ ಮಾನ್ಯ ಕೃಷಿ ಸಚಿವರಾದ ಎನ್.ಚೆಲುವರಾಯಸ್ವಾಮಿ ತಿಳಿಸಿದರು.

ಕೇಂದ್ರದ ಆಹಾರ ಸಂಸ್ಕರಣಾ ಸಚಿವಾಲಯ, ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ರಫ್ತು ನಿಗಮ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕೃಷಿ ಇಲಾಖೆಯ ಆಶ್ರಯದಲ್ಲಿ ನಗರದ ಜಿಲ್ಲಾ ಪಂಚಾಯಿತಿಯ ಅಬ್ದುಲ್ ನಜೀರ್‌ಸಾಬ್ ಸಭಾಂಗಣದಲ್ಲಿ ಇಂದು ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಳೆದ ಐದು ವರ್ಷಗಳಲ್ಲಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ಆರು ಸಾವಿರ ಘಟಕಗಳು ಈಗಾಗಲೇ ಕಾರ್ಯ ನಿರ್ವಹಿಸುತ್ತಿವೆ. ಆದರೆ ರಾಜ್ಯ ಸರ್ಕಾರ ಈ ಒಂದೇ ವರ್ಷದಲ್ಲಿ ಹೆಚ್ಚುವರಿಯಾಗಿ 5 ಸಾವಿರ ಘಟಕಗಳ ಗುರಿಯನ್ನು ಹೊಂದಿದೆ. ನಮ್ಮದು ಶೇ. 60 ರಿಂದ 70 ರಷ್ಟು ಕೃಷಿ ಪ್ರಧಾನವಾದ ರಾಷ್ಟ್ರ. ಈ ಕಾರಣಕ್ಕಾಗಿಯೇ ಈ ಘಟಕಗಳ ಆರಂಭಕ್ಕೆ ರಾಜ್ಯ ಸರ್ಕಾರ ಹೆಚ್ಚು ಒತ್ತು ನೀಡುತ್ತಿದೆ. ಈ ಯೋಜನೆಗೆ ಇಡೀ ರಾಷ್ಟ್ರದಲ್ಲಿ ಕೇಂದ್ರದಿಂದ ಶೇ.60 ಹಾಗೂ ರಾಜ್ಯದಿಂದ ಶೇ.40 ರಷ್ಟು ಪಾಲನ್ನು ನೀಡುತ್ತಿದ್ದರೆ, ನಮ್ಮ ರಾಜ್ಯದಲ್ಲಿ ಮಾತ್ರ ಕೇಂದ್ರ ಸರ್ಕಾರದಿಂದ ಶೇ.40 ಹಾಗೂ ರಾಜ್ಯ ಸರ್ಕಾರದಿಂದ ಶೇ.60 ರಷ್ಟು ಪಾಲನ್ನು ನೀಡಲಾಗುತ್ತಿದೆ. ಕೃಷಿಕರಿಗೆ ಈ ಸರ್ಕಾರ ಎಷ್ಟು ಮನ್ನಣೆ ನೀಡುತ್ತಿದೆ ಎಂಬುದನ್ನು ಇದರಿಂದ ಅರ್ಥಮಾಡಿಕೊಳ್ಳಬಹುದು ಎಂದರು.

ರಾಜ್ಯದಲ್ಲಿ ಘಟಕ ಆರಂಭಿಸಲು ಈಗಾಗಲೇ 5 ಸಾವಿರ ಅರ್ಜಿಗಳು ಬಂದಿದ್ದರೆ, ಈ ಜಿಲ್ಲೆಯಲ್ಲಿ 356 ಅರ್ಜಿಗಳು ಬಂದಿವೆ. ಹೊಸ ಘಟಕಗಳನ್ನು ಸ್ಥಾಪಿಸಲು ನೀಡುವ ಸಾಲಕ್ಕೆ ಸಿಬಿಲ್ ಸ್ಕೋರ್ ಅನ್ವಯಿಸುವುದಿಲ್ಲ. ಬ್ಯಾಂಕ್‌ಗಳು ಜಾಮೀನು ರಹಿತವಾಗಿ ಹೊಸ ಉದ್ದಿಮೆ ಸ್ಥಾಪಿಸುವ ಕೃಷಿಕರಿಗೆ ಸಾಲ ಒದಗಿಸಬೇಕು. ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳು ಬ್ಯಾಂಕರ್ಸ್‌ಗಳ ಸಭೆ ಕರೆದು ಸೂಕ್ತ ಸೂಚನೆ ನೀಡುವಂತೆ ತಿಳಿಸುವುದಾಗಿ ಹೇಳಿದರು. ಬದುಕಿಗೋಸ್ಕರ ಶಿಕ್ಷಣ ಪಡೆಯುವುದಾಗಬಾರದು. ಶಿಕ್ಷಣ ಜ್ಞಾನ ಸಂಪಾದನೆಗಾಗಿ ಮತ್ತು ಇಂದಿನ ವಿದ್ಯಮಾನಗಳನ್ನರಿತು ವಿಚಾರ ವಿನಿಮಯ ಮಾಡಲು, ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಶಿಕ್ಷಣ ಪಡೆಯಬೇಕು ಎಂದರು.

# ಶಾಸಕ ಸಂಗಮೇಶ್ ಈ ಜನ್ಮದಲ್ಲೇ ಮುಸ್ಲಿಂ ಧರ್ಮಕ್ಕೆ ಮತಾಂತರ ಆಗಲಿ: ಡಿ.ಎಸ್.ಅರುಣ್

**ದಾವಣಗೆರೆ.ಸೆ.10:** ಭದ್ರಾವತಿ ಶಾಸಕ ಡಿ.ಕೆ.ಸಂಗಮೇಶ್ ಅಲ್ಪಸಂಖ್ಯಾತರ ಓಲೈಕೆಗಾಗಿ ನಾನು ಮುಂದಿನ ಜನ್ಮದಲ್ಲಿ ಮುಸ್ಲಿಂ ಧರ್ಮದಲ್ಲಿ ಹುಟ್ಟುತ್ತೇನೆ ಎಂದು ಹೇಳಿಕೆ ನೀಡುವ ಮೂಲಕ ಹಿಂದೂ ಧರ್ಮಕ್ಕೆ ಅಪಮಾನ ಮಾಡಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಡಿ.ಎಸ್.ಅರುಣ್ ಕಿಡಿಕಾರಿದರು.




ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿರಿಯಕ್ಕನ ಚಾಳಿ ಮನೆಮಂದಿಗೆಲ್ಲ ಎನ್ನುವಂತೆ ಅಧಿಕಾರಕ್ಕಾಗಿ ರಾಜ್ಯದ ಕಾಂಗ್ರೆಸ್ ನಾಯಕರು ರಾಹುಲ್ ಗಾಂಧಿ ಹಾಗೂ ಸೋನಿಯ ಗಾಂಧಿ ಅವರನ್ನು ಓಲೈಸುವಂತೆ ಶಾಸಕರುಗಳು ವೋಟ್ ಬ್ಯಾಂಕ್‌ಗಾಗಿ ಅಲ್ಪಸಂಖ್ಯಾತರನ್ನು ಓಲೈಕೆ ಮಾಡುತ್ತಿದ್ದಾರೆ. ಬಹುಸಂಖ್ಯಾತ ಹಿಂದೂಗಳ ಪರ ಕಾಂಗ್ರೆಸ್‌ನ ಯಾವೊಬ್ಬ ನಾಯಕರು ಮಾತನಾಡುತ್ತಿಲ್ಲ. ಭದ್ರಾವತಿ ಶಾಸಕ ಸಂಗಮೇಶ್ ನಾನು ಮುಂದಿನ ಜನ್ಮದಲ್ಲಿ ಮುಸ್ಲಿಂ ಧರ್ಮದಲ್ಲಿ ಹುಟ್ಟುತ್ತೇನೆ ಎಂದು ಹೇಳಿ ಹಿಂದೂ ಧರ್ಮಕ್ಕೆ ಅಪಮಾನ ಮಾಡಿದ್ದಾರೆ. ಮುಸ್ಲಿಂ ಸಮುದಾಯದಲ್ಲಿ ಪುನರ್ ಜನ್ಮ ಇಲ್ಲ. ಆದ್ದರಿಂದ ಶಾಸಕ ಸಂಗಮೇಶ್ ಈ ಜನ್ಮದಲ್ಲೇ ಮುಸ್ಲಿಂ ಧರ್ಮಕ್ಕೆ ಮತಾಂತರ ಆಗಲಿ ಎಂದು ಸಲಹೆ ನೀಡಿದರು.

ಕಾಂಗ್ರೆಸ್‌ನ ಜೀನ್ಸ್ ಸಿಎಂ ಸಿದ್ದರಾಮಯ್ಯಗೂ ಬಂದಿದೆ. ಯಾವುದಾದರು ವಿಷಯದಲ್ಲಿ ತಪ್ಪು ನಡೆದರೆ ಅದನ್ನು ಬಹು ಬೇಗನೆ ಬೇರೆ ಕಡೆ ವಿಷಯಾಂತರ ಮಾಡುತ್ತಿದ್ದಾರೆ. ಧರ್ಮಸ್ಥಳದ ವಿಚಾರ ಅವರ ಕುತ್ತಿಗೆಗೆ ಬರುತ್ತದೆ ಎಂದು, ಚಾಮುಂಡಿ ದೇವಸ್ಥಾನ ಹಿಂದುಗಳದ್ದಲ್ಲ, ದಸರಾ ಮಹೋತ್ಸವ ಉದ್ಘಾಟನೆ ವಿಚಾರ, ಗಣಪತಿ ಗಲಾಟೆ ವಿಚಾರ ಹೀಗೆ ವಿಷಯಗಳನ್ನು ಬೇರೆ ಕಡೆ ತಿರುಗಿಸುತ್ತಿದ್ದಾರೆ ಎಂದು ಆರೋಪಿಸಿದರು.

ಪೊಲೀಸ್ ಠಾಣೆಗೆ ಕಲ್ಲು ತೂರಿದವರು, ಬೆಂಕಿ ಹಚ್ಚಿದವರು, ವಿಧಾನಸೌಧದಲ್ಲಿ ಪಾಕಿಸ್ಥಾನ ಜಿಂದಾಬಾದ್ ಎಂದವರ ಮೇಲಿನ ಕೇಸ್‌ಗಳನ್ನು ಸಚಿವ ಸಂಪುಟ ಸಭೆಯಲ್ಲಿ ವಜಾ ಮಾಡಿ ಅವರನ್ನು ರಕ್ಷಣೆ ಮಾಡಲಾಗಿದೆ. ರಾಜ್ಯದ ಗೃಹಮಂತ್ರಿಗಳು ವರ್ಕ್ ಫ್ರಮ್ ಹೋಂ ರೀತಿಯಲ್ಲಿ ಕೆಲಸ ಮಾಡುತ್ತಿದ್ದಾರೆ. ಒಟ್ಟಿನಲ್ಲಿ ರಾಜ್ಯ ಸರ್ಕಾರ ಹಿಂದುಗಳ ವಿರೋಧಿಯಾಗಿ ಹಿಂದೂಗಳ ಧಾರ್ಮಿಕ ಚಟುವಟಿಕೆಗಳ್ನು ತಡೆಹಿಡಿಯುವ ಹಂತಕ್ಕೆ ಬಂದಿದೆ ಎಂದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಎಲ್ಲರಿಗೂ ಸಹಾಯ ಮಾಡುವ ನಿಮ್ಮನ್ನು ದಣಿಸುತ್ತದೆ. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ. ಹಿರಿಯರ ಬಳಿ ನಿಮ್ಮ ಮಹತ್ವಾಕಾಂಕ್ಷೆಗಳನ್ನು ವ್ಯಕ್ತಪಡಿಸಿ ಹಾಗೂ ಅವರು ನಿಮಗೆ ಸಹಾಯ ಮಾಡಲು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಾರೆ. ಪ್ರೀತಿಪಾತ್ರರು ಇಂದು ನಿಮ್ಮ ಯಾವುದೇ ಮಾತಿನಿಂದ ಕೋಪಗೊಳ್ಳಬಹುದು. ಅವರು ನಿಮ್ಮಿಂದ ಕೋಪಗೊಳ್ಳುವುದಕ್ಕಿಂತ ಮೊದಲೇ ನಿಮ್ಮ ತಪ್ಪನ್ನು ಅನುಭವಿಸಿ ಮತ್ತು ಅವರನ್ನು ಮನವರಿಕೆ ಮಾಡಿಕೊಳ್ಳಿ.

### ವೃಷಭ ರಾಶಿ

ಯೋಗ ಮತ್ತು ಧ್ಯಾನ ನೀವು ಒಳ್ಳೆಯ ದೇಹರಚನೆ ಕಾಯ್ದುಕೊಳ್ಳಲು ಮತ್ತು ಮಾನಸಿಕವಾಗಿ ಸಧೃಢವಾಗಿರಲು ಸಹಾಯ ಮಾಡುತ್ತದೆ. ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯ ಕಾರಣದಿಂದ ತೊಂದರೆಗೊಳಗಾಗಬಹುದು. ಇದಕ್ಕಾಗಿ ನೀವು ನಿಮ್ಮ ಯಾವುದೇ ವಿಶ್ವಾಸಾರ್ಹರಿಂದ ಸಲಹೆಯನ್ನು ತೆಗೆದುಕೊಳ್ಳಬೇಕು. ಸಂಬಂಧಿಕರ ಜೊತೆ ಕಳೆದ ಸಮಯ ನಿಮಗೆ ಅನುಕೂಲಕರವಾಗಿರುತ್ತದೆ. ಪ್ರೇಮ ಜೀವನ ಭರವಸೆ ತರುತ್ತದೆ ಕೆಲಸದಲ್ಲಿ ಇಂದು ಎಲ್ಲವೂ ನಿಮ್ಮ ಪರವಾಗಿರುತ್ತವೆ.

### ಮಿಥುನ ರಾಶಿ

ನೀವು ಪ್ರಯಾಣಿಸಲು ತುಂಬಾ ದುರ್ಬಲರಾಗಿದ್ದರಿಂದ ದೀರ್ಘ ಪ್ರಯಾಣವನ್ನು ತಪ್ಪಿಸಲು ಪ್ರಯತ್ನಿಸಿ. ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯ ಕಾರಣದಿಂದ ತೊಂದರೆಗೊಳಗಾಗಬಹುದು. ಇದಕ್ಕಾಗಿ ನೀವು ನಿಮ್ಮ ಯಾವುದೇ ವಿಶ್ವಾಸಾರ್ಹರಿಂದ ಸಲಹೆಯನ್ನು ತೆಗೆದುಕೊಳ್ಳಬೇಕು. ನಿಮ್ಮ ಸಂಗಾತಿಯೊಡನೆ ಒಂದು ಉತ್ತಮ ತಿಳುವಳಿಕೆ ಮನೆಯಲ್ಲಿ ಸಂತೋಷ-ಶಾಂತಿ ಮತ್ತು ಸಮೃದ್ಧಿಯನ್ನು ತರುತ್ತದೆ.

### ಕರ್ಕ ರಾಶಿ

ಫಿಟ್ ನೆಸ್ ಮತ್ತು ತೂಕ ನಷ್ಟ ಕಾರ್ಯಕ್ರಮಗಳು ನೀವು ಒಳ್ಳೆಯ ದೇಹರಚನೆ ಹೊಂದಲು ಸಹಾಯ ಮಾಡುತ್ತದೆ. ಇಂದು ಸಾಲಗಾರನು ನಿಮ್ಮ ಮನೆ ಬಾಗಿಲಿಗೆ ಬರಬಹುದು ಮತ್ತು ನಿಮ್ಮ ಹತ್ತಿರ ಸಾಲ ಕೇಳಬಹುದು.ಅವರಿಗೆ ಹಣವನ್ನು ಹಿಂದಿರುಗಿಸಿ ನೀವು ಆರ್ಥಿಕ ಬಿಕ್ಕಟ್ಟಿಗೆ ಸಿಲುಕಬಹುದು. ಸಾಲ ಪಡೆಯುವುದನ್ನು ತಪ್ಪಿಸಲು ನಿಮಗೆ ಸೂಚಿಸಲಾಗಿದೆ. ಸ್ನೇಹಿತರು ಮತ್ತು ಕುಟುಂಬದ ಸದಸ್ಯರು ನಿಮಗೆ ನೆರವು ಮತ್ತು ಪ್ರೀತಿ ಒದಗಿಸುತ್ತಾರೆ.

### ಸಿಂಹ ರಾಶಿ

ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ಅದು ನಿಮ್ಮ ಕೈಯಿಂದ ಜಾರಿಹೋಗದಿರಲು ಪ್ರಯತ್ನಿಸಿ. ನೀವು ಅಪರೂಪಕ್ಕೆ ಭೇಟಿ ಮಾಡುವ ಜನರನ್ನು ಸಂಪರ್ಕಿಸಲು ಒಳ್ಳೆಯ ದಿನ. ಪ್ರೇಮಪ್ರಯಾಣ ಮಧುರವಾಗಿದ್ದರೂ ಅಲ್ಪಾವಧಿಯದ್ದಾಗಿರುತ್ತದೆ. ನೀವು ಬಹಳಷ್ಟು ಸಾಧಿಸುವ ಸಾಮರ್ಥ್ಯ ಹೊಂದಿದ್ದೀರಿ ಆದ್ದರಿಂದ ನಿಮಗೆ ದೊರಕುವ ಅವಕಾಶಗಳನ್ನು ಉಪಯೋಗಿಸಿಕೊಳ್ಳಿ

### ಕನ್ಯಾ ರಾಶಿ

ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ಕುಟುಂಬದ ಯಾವುದೇ ಸದಸ್ಯರ ಕಾಯಿಲೆ ಬೀಳುವ ಕಾರಣದಿಂದಾಗಿ ನೀವು ಆರ್ಥಿಕ ತೊಂದರೆಗೊಳಗಾಗಬಹುದು. ಆದಾಗ್ಯೂ ಈ ಸಮಯದಲ್ಲಿ ನೀವು ಹಣಕ್ಕಿಂತ ಹೆಚ್ಚಾಗಿ ಅವರ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು. ಸಂಬಂಧಿಗಳು / ಸ್ನೇಹಿತರು ಒಂದು ಅದ್ಭುತ ಸಂಜೆಗಾಗಿ ಬರುತ್ತಾರೆ.

### ತುಲಾ ರಾಶಿ

ಇತ್ತೀಚಿಗೆ ನಿಮಗೆ ಹತಾಶೆಯೆನಿಸುತ್ತಿದ್ದಲ್ಲಿ ಇಂದು ಸರಿಯಾದ ಆಲೋಚನೆಗಳು ಹಾಗೂ ಕಾರ್ಯಗಳು ನಿಮಗೆ ಅಗತ್ಯವಿರುವ ಸಮಾಧಾನವನ್ನು ತರುತ್ತವೆ ಎಂದು ನೀವು ನೆನಪಿಡಬೇಕು. ಇಂದು ಹೂಡಿಕೆಗಳನ್ನು ಮಾಡಬಾರದು. ನಿಮ್ಮ ಕುಟುಂಬ ನಿಮ್ಮ ಸಹಯಕ್ಕೆ ಬರುತ್ತದೆ ಹಾಗೂ ಬಿಕ್ಕಟ್ಟಿನ ಸಮಯದಲ್ಲಿ ನಿಮಗೆ ಮಾರ್ಗದರ್ಶನ ನೀಡುತ್ತದೆ. ನೀವು ಒಂದು ಅಭ್ಯಾಸವನ್ನು ಕರಗತ ಮಾಡಿಕೊಂಡವರನ್ನು ಗಮನಿಸುವುದರ ಮೂಲಕ ಕೆಲವು ಪಾಠಗಳನ್ನು ಕಲಿಯಬಹುದು.

### ವೃಶ್ಚಿಕ ರಾಶಿ

ಹೊರಾಂಗಣ ಚಟುವಟಿಕೆಗಳು ನಿಮಗೆ ಉಪಯುಕ್ತವಾಗುತ್ತವೆ. ಜೀವನ ಶೈಲಿ ಮತ್ತು ಯಾವಾಗಲೂ ಭದ್ರತೆಯ ಬಗ್ಗ ಯೋಚಿಸುವುದು ನಿಮ್ಮ ದೈಹಿಕ ಹಾಗೂ ನಿಮ್ಮ ಮಾನಸಿಕ ಬೆಳವಣಿಗೆಯನ್ನು ಕುಂಠಿತಗೊಳಿಸುತ್ತವೆ. ಇದು ನಿಮ್ಮನ್ನು ಒಬ್ಬ ಗಾಬರಿಯ ವ್ಯಕ್ತಿಯನ್ನಾಗಿಯೂ ಮಾಡುತ್ತದೆ. ಇಂದು ಹೂಡಿಕೆಗಳನ್ನು ಮಾಡಬಾರದು. ನಿಮ್ಮ ಮಕ್ಕಳು ನಿಮ್ಮ ಉದಾರ ವರ್ತನೆಯ ದುರುಪಯೋಗ ಮಾಡಲು ಬಿಡಬೇಡಿ.

### ಧನು ರಾಶಿ

ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸಗಳನ್ನು ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ. ನಿಮ್ಮ ಹಳೆಯ ಯಾವುದೇ ರೋಗ ಇಂದು ನಿಮ್ಮನ್ನು ಕಾಡಬಹುದು. ಇದರ ಕಾರಣದಿಂದ ನೀವು ಆಸ್ಪತ್ರೆಗೂ ಹೋಗಬೇಕಾಗಬಹುದು ಮತ್ತು ನಿಮ್ಮ ಸಾಕಷ್ಟು ಹಣವು ಸಹ ಖರ್ಚು ಆಗಬಹುದು. ಸಂಗಾತಿಯು ಸಂತೋಷ ನೀಡಲು ಪ್ರಯತ್ನ ಮಾಡಿದಾಗಿನ ಪೂರ್ಣ ಸಂತೋಷದ ಒಂದು ದಿನ.

### ಮಕರ ರಾಶಿ

ನೀವು ಕೆಲವು ಉನ್ನತ ವ್ಯಕ್ತಿಗಳನ್ನು ಭೇಟಿಯಾಗಬಹುದಾದ್ದರಿಂದ ಗಾಬರಿಯಾಗಬೇಡಿ ಮತ್ತು ವಿಶ್ವಾಸ ಕಳೆದುಕೊಳ್ಳದಿರಿ. ಇದು ವ್ಯಾಪಾರಕ್ಕೆ ಬಂಡವಾಳದಂತೆ ಉತ್ತಮ ಆರೋಗ್ಯಕ್ಕೆ ಅಗತ್ಯವಾಗಿದೆ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ಸಂಬಂಧಿಕರು ಮತ್ತು ಸ್ನೇಹಿತರಿಂದ ಅನಿರೀಕ್ಷಿತ ಉಡುಗೊರೆಗಳು. ಪ್ರೀತಿಯ ಭಾವಪರವಶತೆಯನ್ನು ಅನುಭವಿಸಲು ಯಾರಾದರೂ ದೊರಕಬಹುದು.

### ಕುಂಭ ರಾಶಿ

ನಿಮ್ಮ ಕೋಪ ಕಡ್ಡಿಯನ್ನು ಗುಡ್ಡ ಮಾಡಬಹುದು–ಇದು ನಿಮ್ಮ ಕುಟುಂಬದ ಸದಸ್ಯರ ಅಸಮಾಧಾನಕ್ಕೆ ಕಾರಣವಾಗುತ್ತದೆ. ಕೋಪವನ್ನು ನಿಯಂತ್ರಣದಲ್ಲಿಡುವುದನ್ನು ಕಲಿತ ಆ ಮಹಾನ್ ಆತ್ಮಗಳೇ ಅದೃಷ್ಟಶಾಲಿಗಳು. ನಿಮ್ಮ ಕೋಪ ನಿಮ್ಮನ್ನು ಸುಡುವ ಮೊದಲು ನೀವೇ ಅದನ್ನು ಸುಟ್ಟುಬಿಡಿ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ.

### ಮೀನ ರಾಶಿ

ನಿಮ್ಮ ಅಹಾರ ಕ್ರಮದ ಬಗ್ಗೆ, ವಿಶೇಷವಾಗಿ ಮೈಗ್ರನ್ ರೋಗಿಗಳು ಸೂಕ್ತ ಎಚ್ಚರ ತೆಗೆದುಕೊಳ್ಳಬೇಕು. ಅವರು ತಮ್ಮ ಊಟ ತಪ್ಪಿಸಿಕೊಂಡಲ್ಲಿ ಅದು ಅವರಿಗೆ ಅನಗತ್ಯ ಭಾವನಾತ್ಮಕ ಒತ್ತಡವನ್ನು ಉಂಟುಮಾಡಬಹುದು. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ.

## ಗ್ಯಾರಂಟಿ ಅನುಷ್ಠಾನ ಸಮಿತಿ ಸಭೆಯಲ್ಲಿ ಶಾಮನೂರು ಟಿ. ಬಸವರಾಜ್

# ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಅಡೆತಡೆ ನಿವಾರಣೆಗೆ ಅಧಿಕಾರಿಗಳಿಗೆ ಸೂಚನೆ




**ದಾವಣಗೆರೆ:** ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಪಂಚ ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗಿ ಅನುಷ್ಠಾನವಾಗುತ್ತಿದ್ದು ಫಲಾನುಭವಿಗಳು ಪಡೆಯಲು ಇರುವ ಅಡೆತಡೆ, ತಾಂತ್ರಿಕ ದೋಷಗಳನ್ನು ಸರಿಪಡಿಸಿ ಸಮರ್ಪಕವಾಗಿ ಅನುಷ್ಠಾನಗೊಳಿಸಲು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಶಾಮನೂರು ಟಿ ಬಸವರಾಜ್ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ಗ್ಯಾರಂಟಿ ಯೋಜನೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪಂಚ ಗ್ಯಾರಂಟಿ ಯೋಜನೆಗಳನ್ನು ಜಿಲ್ಲೆಯಲ್ಲಿ ಸಮರ್ಪಕವಾಗಿ ಅನುಷ್ಠಾನಕ್ಕೆ ತರಬೇಕಾದರೆ, ಹಲವು ತಾಂತ್ರಿಕ ದೋಷ, ಅಡೆತಡೆ ಸಹಜ. ಅವುಗಳನ್ನು ತ್ವರಿತವಾಗಿ ಸರಿಪಡಿಸಿ ಅರ್ಹ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿದರು. ಮುಖ್ಯವಾಗಿ ಗೃಹಲಕ್ಷ್ಮೀ, ಗೃಹಜ್ಯೋತಿ ಮತ್ತು ಅನ್ನಭಾಗ್ಯ ಯೋಜನೆ ಬಗ್ಗೆ ದೂರು ಕೇಳಿಬರುವುದರ ಜೊತೆಗೆ ಕೆಲವು ತಾಂತ್ರಿಕ ಲೋಪದೋಷಗಳು ಕಂಡು ಬರುತ್ತಿವೆ. ಈ ಬಗ್ಗೆ ಗ್ರಾಮ ಮಟ್ಟದಲ್ಲಿ ಜಾಗೃತಿ ಮೂಡಿಸಿ ಸಂಬಂಧಪಟ್ಟ ಅಧಿಕಾರಿಗಳು ಪರಿಹಾರ ಕಂಡುಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವ ವಿಠ್ಠಲರಾವ್ ಮಾತನಾಡಿ, ಜಿಲ್ಲೆಯಲ್ಲಿ ಅನಧಿಕೃತ ಪಡಿತರ ಪ್ರದೇಶದ ಕಾರ್ಡ್, ಆಧ್ಯತಾ , ಅಂತ್ಯೋದಯ ಪಡಿತರ ಚೀಟಿ ಪಡೆಯಲು ಅರ್ಹತೆ ಇಲ್ಲದ ಪಡಿತರ ಚೀಟಿ, ಕುಟುಂಬಗಳನ್ನು ಗುರುತಿಸಿ ಅಗತ್ಯ ಕ್ರಮಕೈಗೊಳ್ಳಬೇಕು. ಅಂತಹವರ ಪಡಿತರ ಚೀಟಿಗಳನ್ನು ರದ್ದುಪಡಿಸಿ ಅರ್ಹ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳನ್ನು ಒದಗಿಸುವಂತೆ ಸೂಚನೆ ನೀಡದ ಅವರು, ಜಿಲ್ಲಾ ವ್ಯಾಪ್ತಿಯಲ್ಲಿ ಪಡಿತರ ವಿತರಣೆ ವೇಳೆ ತೂಕದಲ್ಲಿ ವ್ಯತ್ಯಾಸ, ಹಣ ಪಡೆದು ಪಡಿತರ ವಿತರಣೆ ಕುರಿತು ದೂರುಗಳು ಕೇಳಿ ಬರುತ್ತಿವೆ. ಅಂತಹ ಪ್ರಕರಣಗಳ ಬಗ್ಗೆ ನಿಖರ ಮಾಹಿತಿ ನೀಡಿ. ಸಂಬಂಧಿಸಿದ ನ್ಯಾಯಬೆಲೆ ಅಂಗಡಿ ಪರವಾನಗಿ ರದ್ದುಪಡಿಸುವುದಾಗಿ ತಿಳಿಸಿದರು.

ಇದೇ ಸಂದರ್ಭದಲ್ಲಿ ಜಗಳೂರು ತಾಲ್ಲೂಕು ವ್ಯಾಪ್ತಿಯ ಹಲವು ಗ್ರಾಮೀಣ ಭಾಗದ ರಸ್ತೆಗಳು ತಗ್ಗು ಗುಂಡಿಗಳಿಂದ ಆವೃತವಾಗಿ ರಸ್ತೆಯ ಇಕ್ಕೆಲಗಳಲ್ಲಿ ಜಂಗಲ್ ಬೆಳದು ನಿಂತು ಸಾರಿಗೆ ವ್ಯವಸ್ಥೆಯೇ ಇಲ್ಲದಂತಾಗಿದೆ ಎಂದು ಸದಸ್ಯರೊಬ್ಬರು ಸಭೆಗೆ ಮಾಹಿತಿ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾ ಪಂಚಾಯತ್ ಸಿಇಓ ಸ್ಥಳದಲ್ಲಿಯೇ ಸಂಬಂಧಿಸಿದ ಅಧಿಕಾರಿಗಳಿಗೆ ಕರೆ ಮಾಡಿ ತ್ವರಿತವಾಗಿ ಸಮಸ್ಯೆ ಪರಿಹರಿಸಲು ಸೂಚಿಸಿದರು.

ಪ್ರಮುಖವಾಗಿ ಅರಳಿಪುರ, ಕೂಲಂಬಿ, ಕುಂದೂರು ಮಾರ್ಗವಾಗಿ ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಹಾಗೂ ಶಿವಮೊಗ್ಗ, ನ್ಯಾಮತಿ, ಹೊನ್ನಾಳಿ ಮಾರ್ಗದಲ್ಲಿ ರೈಲ್ವೆ ಸಂಚಾರಕ್ಕೆ ಅನುಗುಣವಾಗಿ ರಾತ್ರಿವೇಳೆ ಬಸ್ ವ್ಯವಸ್ಥೆ ಕಲ್ಪಿಸಲು ಸದಸ್ಯರು ಆಗ್ರಹಿಸಿದರು. ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳು ಪ್ರತಿಕ್ರಿಯಿಸಿ ಆದ್ಯತೆಯ ಮೇರೆಗೆ ಪರಿಶೀಲಿಸಿ ತ್ವರಿತವಾಗಿ ಕ್ರಮವಹಿಸಲಾಗುವುದು ಎಂದರು.

**ಶಕ್ತಿ ಯೋಜನೆ:** ಸರ್ಕಾರ ಮಹತ್ವಾಕಾಂಕ್ಷಿ ಯೋಜನೆಯಾದ ಶಕ್ತಿ ಯೋಜನೆಯಡಿ 2023ರ ಜೂನ್ ನಿಂದ 2025ರ ಆಗುವರೆಗೆ 10.34 ಕೋಟಿ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದು, ಇದರ ವೆಚ್ಚವಾಗಿ 301.22 ಕೋಟಿ ಪ್ರಯಾಣ ವೆಚ್ಚ ಮಾಡಲಾಗಿದೆ.

**ಅನ್ನಭಾಗ್ಯ ಯೋಜನೆಯಡಿ;** ಜುಲೈ 2023 ರಿಂದ ಡಿಸೆಂಬರ್ 2024ರ ವರೆಗೆ ಜಿಲ್ಲೆಯ 2.17 ಕೋಟಿ ಫಲಾನುಭವಿಗಳಿಗೆ ರೂ.346.33 ಕೋಟಿ ಹಣವನ್ನು ನೇರವಾಗಿ ಫಲಾನುಭವಿಗಳ ಖಾತೆಗೆ ಡಿಬಿಟಿ ಮೂಲಕ ಪಾವತಿಸಲಾಗಿದೆ. 2025ರ ಫೆಬ್ರುವರಿಯಿಂದ ಆಗುವರೆಗೆ ಹಣದ ಬದಲಾಗಿ ಜಿಲ್ಲೆಯ 391370 ಪಡಿತರ ಚೀಟಗಳಿಗೆ 4,22,092 ಕ್ವಿಂಟಾಲ್ ಅಕ್ಕಿ ವಿತರಿಸಲಾಗಿದೆ ಎಂದು ಇಲಾಖೆಯ ಜಂಟಿ ನಿರ್ದೇಶಕ ಕೆ.ಪಿ.ಮಧುಸೂಧನ್ ಸಭೆಗೆ ಮಾಹಿತಿ ನೀಡಿದರು.

**ಗೃಹಜ್ಯೋತಿಯಡಿ;** ಜುಲೈ ತಿಂಗಳಲ್ಲಿ ಜಿಲ್ಲೆಯಲ್ಲಿ ಒಟ್ಟು ವಿದ್ಯುತ್ ಸಂಪರ್ಕ ಪಡೆದಿರುವ 562478 ಗ್ರಾಹಕರಲ್ಲಿ 504574 ಗ್ರಾಹಕರು ಗೃಹಜ್ಯೋತಿ ಯೋಜನೆಯಡಿ ನೊಂದಣಿ ಮಾಡಿಸಿದ್ದು ಈ ಗ್ರಾಹಕರ ವಿದ್ಯುತ್ ವೆಚ್ಚವಾಗಿ ರೂ. 23.88 ಕೋಟಿ ಹೊಂದಾಣಿಕೆ ಮಾಡಲಾಗಿದೆ. ಈ ಗ್ರಾಹಕರು ಒಟ್ಟು ರೂ.32.04 ಕೋಟಿ ವೆಚ್ಚದ ವಿದ್ಯುತ್ ಬಳಕೆ ಮಾಡಿದ್ದು ಇದರಲ್ಲಿ 23.88 ಕೋಟಿ ಸರ್ಕಾರ ಭರಿಸಿದೆ.

**ಗೃಹಲಕ್ಷ್ಮಿ ಯೋಜನೆಯಡಿ;** 2023ರ ಆಗಸ್ಟ್ ನಿಂದ 2025ರ ಜೂನ್‌ವರೆಗೆ ಜಿಲ್ಲೆಯಲ್ಲಿ ನೊಂದಣಿಯಾದ ಗೃಹಲಕ್ಷ್ಮಿ ಫಲಾನುಭವಿಗಳಿಗೆ ರೂ.1472.60 ಕೋಟಿ ಪಾವತಿ ಮಾಡಲಾಗಿದೆ. ಯೋಜನೆ ಆರಂಭವಾದ ಆಗಸ್ಟ್‌ನಲ್ಲಿ 316903 ಪಲಾನುಭವಿಗಳಿದ್ದು 2025 ರ ಜೂನ್ ತಿಂಗಳಲ್ಲಿ 362498 ಯಜಮಾನಿಯರು ಗೃಹಲಕ್ಷ್ಮಿ ಗ್ಯಾರಂಟಿ ಯೋಜನೆಯಡಿ ಮಾಸಿಕ ರೂ.2000 ಪಡೆದಿರುವರು.

ಹಾಗೆಯೇ 2023ನೇ ಸಾಲಿನಲ್ಲಿ ನೊಂದಣಿಯಾಗಿ ಮರಣ ಹೊಂದಿದ 205 ಫಲಾನುಭವಿಗಳಿಗೆ ಜಮೆಯಾದ ರೂ.25 ಲಕ್ಷ ಮೊತ್ತವನ್ನು ಸರ್ಕಾರಕ್ಕೆ ಮರುಪಾವತಿ ಮಾಡಲಾಗಿದೆ.

**ಯುವನಿಧಿ ಯೋಜನೆಯಡಿ;** ಜಿಲ್ಲೆಯಾದ್ಯಂತ 8536 ಪದವಿ ಮತ್ತು 168 ಡಿಪ್ಲೊಮಾ ಪಾಸಾದ ನಿರುದ್ಯೋಗಿ ಫಲಾನುಭವಿಗಳು ಸೇರಿ ಒಟ್ಟು 8704 ವಿದ್ಯಾವಂತ ಯುವ ಜನರಿಗೆ ನಿರುದ್ಯೋಗ ಭತ್ಯೆಯಾಗಿ 2025ರ ಮೇ ಅಂತ್ಯಕ್ಕೆ 19.58 ಕೋಟಿ ಮೊತ್ತ ನೇರವಾಗಿ ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗಿದೆ. ಇತ್ತೀಚೆಗೆ ಜಿಲ್ಲೆಯಲ್ಲಿ ಹೊಸದಾಗಿ 1711 ವಿದ್ಯಾರ್ಥಿಗಳು ಯುವನಿಧಿ ಯೋಜನೆಗೆ ನೊಂದಾಯಿಸಿದ್ದಾರೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಸಭೆಗೆ ಮಾಹಿತಿ ನೀಡಿದರು.

ಸಭಯಲ್ಲಿ ಗ್ಯಾರಂಟಿ ಸಮಿತಿ ಉಪಾಧ್ಯಕ್ಷರಾದ ಕೆ.ಎನ್.ಮಂಜುನಾಥ, ಅನಿಶ್ ಪಾಷಾ, ನಂಜಾನಾಯ್ಕ, ರಾಜೇಶ್ವರಿ ಸೇರಿದಂತೆ ಸಮಿತಿ ಸದಸ್ಯರು ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳು



**ದಾವಣಗೆರೆ:** ಉಪನಿರ್ದೇಶರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), ದಾವಣಗೆರೆ. ಹಾಗೂ ಎಸ್, ವಿ, ಎಸ್, ಪದವಿ ಪೂರ್ವ ಕಾಲೇಜು, ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ದಿನಾಂಕ: 29/08/2024 ರಂದು ನಡೆದ 2025–26ನೇ ಸಾಲಿನ ದಾವಣಗೆರೆ ತಾಲ್ಲೂಕು ಮಟ್ಟದ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ಖೋ–ಖೋ ಕ್ರೀಡಾಕೂಟದಲ್ಲಿ ನಮ್ಮ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ, ಹಾಗೂ ದಸರಾ ಕ್ರೀಡಾ ಕೂಟದಲ್ಲಿ ಭಾಗವಹಿಸಿ ತಾಲ್ಲೂಕು ಮತ್ತು ಜಿಲ್ಲಾಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ವಿಭಾಗ ಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ. ಈ ವಿದ್ಯಾರ್ಥಿಗಳಿಗೆ ಸೇಂಟ್ ಪಾಲ್ಸ್ ಕಾನ್ವೆಂಟ್‌ನ ಸ್ಥಳೀಯ ವ್ಯವಸ್ಥಾಪಕರು ಹಾಗೂ ಆಡಳಿತಾಧಿಕಾರಿಗಳಾದ ಸಿಸ್ಟರ್ ಸ್ಟೆಲಾ ಮಾರೀಸ್, ಕಾಲೇಜಿನ ಕಾರೆಸ್ಪಾಂಡೆಂಟ್‌ರಾದ ಸಿಸ್ಟರ್ ರಶ್ಮಿ, ಪ್ರಾಚಾರ್ಯರಾದ ಮೇಘನಾಥ್ ಕೆ.ಟಿ, ದೈಹಿಕ ಶಿಕ್ಷಕರಾದ ಸಿದ್ದೇಶ್ ಎ.ಬಿ, ಹಾಗೂ ಬೋಧಕ ಮತ್ತು ಬೋಧಕೇತರ ವರ್ಗದವರಿಂದ ಹೃತ್ಪೂರ್ವಕ ಅಭಿನಂಧನೆಗಳನ್ನು ಸಲ್ಲಿಸಲಾಯಿತು.

# ಅಂತಾರಾಷ್ಟ್ರೀಯ ಸಾಕ್ಷರತಾ ದಿನಾಚರಣೆ



**ಗದಗ :** 59ನೇ ಅಂತಾರಾಷ್ಟ್ರೀಯ ಸಾಕ್ಷರತಾ ದಿನಾಚರಣೆ ಅಂಗವಾಗಿ ಗದಗ ಜಿಲ್ಲಾ ಮಟ್ಟದ ಸಾಕ್ಷರತಾ ದಿನಾಚರಣೆಯನ್ನು ಗದಗ ಜಿಲ್ಲಾಡಳಿತ ಕಚೇರಿ ಆವರಣದಲ್ಲಿ ಸೋಮವಾರ ನೆರವೇರಿಸಲಾಯಿತು. ಜಿ.ಪಂ. ಯೋಜನಾ ನಿರ್ದೇಶಕ ಎಮ್.ವಿ.ಚಳಗೇರಿ ಸಾಕ್ಷರತಾ ಧ್ವಜಾರೋಹಣ ನೆರವೇರಿಸಿದರು.

ನಂತರ ಮಾತನಾಡಿದ ಅವರು ಜಿಲ್ಲೆಯಲ್ಲಿ ಸಂಪೂರ್ಣ ಸಾಕ್ಷರಗೊಳಿಸಲು ಅನುಷ್ಠಾನದಲ್ಲಿರುವ ಸಾಕ್ಷರತಾ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಮಾಡಬೇಕು. ಹಾಗೂ 2022 ರಂದ 2027 ರವರೆಗಿನ 5 ವರ್ಷಗಳ ಅವಧಿಯಲ್ಲಿ ಕರ್ನಾಟಕ ರಾಜ್ಯವನ್ನು ಸಂಪೂರ್ಣ ಸಾಕ್ಷರ ನಾಡನ್ನಾಗಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಎಸ್. ಎಸ್. ಕುರಿಯವರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತಾನಾಡುತ್ತಾ ಜಿಲ್ಲೆಯಲ್ಲಿ ರಾಜ್ಯ ಮಟ್ಟದ ಸಂಪೂರ್ಣ ಸಾಕ್ಷರ ಗ್ರಾಮ ಪಂಚಾಯತ ಸಾಕ್ಷರತಾ ಕಾರ್ಯಕ್ರಮ, ಜಿಲ್ಲಾ ಮಟ್ಟದ ಲಿಂಕ್ ಡಾಕ್ಯೂಮೆಂಟ್ ಜನಶಿಕ್ಷಣ ನಿಲಯ ಯೋಜನೆಯಡಿಯ ಮೂಲ ಸಾಕ್ಷರತಾ ಕಾರ್ಯಕ್ರಮ ಮತ್ತು ರಾಷ್ಟ್ರ ಮಟ್ಟದ ನವಭಾರತ ಸಾಕ್ಷರತಾ ಕಾರ್ಯಕ್ರಮಗಳನ್ನು ಜಿಲ್ಲೆಯ ಶಿಕ್ಷಣ ಅಧಿಕಾರಿಗಳು ತಮ್ಮ ಸಹಯೋಗದೊಂದಿಗೆ ಯಶಸ್ವಿಗೊಳಿಸಬೇಕೆಂದು ಹೇಳಿದರು.

ಡಯಟ್‌ದ ಪ್ರಾಚಾರ್ಯರಾದ ಶ್ರೀಮತಿ ಮಂಗಳಾ. ಬಿ. ತಾಪಸ್ಕರ ಸಾಕ್ಷರತಾ ಪ್ರಮಾಣ ವಚನವನ್ನು ಬೋಧಿಸಿದರು.

ಡಿ.ವೈ.ಪಿ.ಸಿ. ಸರ್ವ ಶಿಕ್ಷಣ ಅಭಿಯಾನ, ಎಮ್. ಹೆಚ್. ಕಂಬಳಿ ಮಾತನಾಡಿ ವಿದ್ಯಾವಂತರು ಅನಕ್ಷರಸ್ಥರಿಗೆ ಅಕ್ಷರ ಜ್ಞಾನ ನೀಡಲು ಮುಂದಾಗಬೇಕು. ಜನರು ಸ್ವಾವಲಂಬಿಯಾಗಿ ಬದುಕಲು ಸಾಕ್ಷರತೆ ಒಂದು ಊರುಗೋಲು ಇದ್ದಂತೆ ಎಂದು ಹೇಳಿದರು. ಶಿಕ್ಷಣದ ಮಹತ್ವ ಸಾರುವ ಈ ದಿನ ನಾವು ಯಾವುದೇ ರಂಗದಲ್ಲಿ ಯಶಸ್ಸನ್ನು ಸಾಧಿಸಬೇಕಾದರೆ ಸಾಕ್ಷರತೆ ಅತೀ ಅವಶ್ಯಕ, ಎಲ್ಲರೂ ಸಾಕ್ಷರರಾಗಬೇಕು. ಹಾಗೂ 15 ವರ್ಷ ಮೇಲ್ಪಟ್ಟ ವಯಸ್ಕರಿಗೆ ಓದು, ಬರಹ, ಸರಳ ಲೆಕ್ಕಾಚಾರಗಳೊಂದಿಗೆ ಜೀವನ ಕೌಶಲಗಳನ್ನು ಅಭಿವೃದ್ಧಿಪಡಿಸುವುದು. ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ಪುರುಷ ಮಹಿಳೆಯರ ನಡುವಿನ ಸಾಕ್ಷರತಾ ಪ್ರಮಾಣದ ಅಂತರವನ್ನು ಕಡಿಮೆ ಮಾಡಲು ಈ ಸಾಕ್ಷರತಾ ಕಾರ್ಯಕ್ರಮವು ಬಹಳ ಉಪಯುಕ್ತವಾಗಿದೆ ಎಂದು ಹೇಳಿದರು.

ಜಿ. ಎಮ್. ಮುಂದಿನಮನಿ, ಹಿರಿಯ ಉಪನ್ಯಾಸಕರು, ಬಿ.ಎಫ್. ಅರವಟಗಿ, ಹಿರಿಯ ಉಪನ್ಯಾಸಕರು ಜೆ.ಎ. ಬಾವಿಕಟ್ಟಿ, ಕ್ಷೇತ್ರ ಸಮನ್ವಯಾಧಿಕಾರಿಗಳು, ಗದಗ ಗ್ರಾಮೀಣ, ಹಾಗೂ ಎಸ್.ಪಿ. ಪ್ರಭಯ್ಯನಮಠ, ಕ್ಷೇತ್ರ ಸಮನ್ವಯಾಧಿಕಾರಿಗಳು, ಗದಗ ಶಹರ, ಎಸ್. ಆರ್. ನದಾಫ, ಶ್ರೀಮತಿ. ಎಸ್. ಬಿ. ಬನ್ನಿಕಲ್,

ಶ್ರೀಮತಿ. ಜೆ. ಹುಲಗೇರಿ, ಜಿ.ಡಿ. ದಾಸರ, ಮತ್ತು ಗದಗ ಗ್ರಾಮೀಣ ವಿಭಾಗದ ಕ್ಷೇತ್ರ ಸಂಪನ್ಮೂಲ ವ್ಯಕ್ತಿಗಳು ಮತ್ತು ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿಗಳು ಹಾಗೂ ಜಿಲ್ಲಾ ವಯಸ್ಕರ ಶಿಕ್ಷಣ ಇಲಾಖೆಯ ಸಿಬ್ಬಂದಿ ವರ್ಗದವರು, ಸಾಕ್ಷರತಾ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ದೈಹಿಕ ಶಿಕ್ಷಕರಾದ ಎಸ್. ವ್ ು ು ಳ್ ಗ್ ು ಂ ದ್ , ಧ್ ್ವ ಜಾ ರ್ ೋ ಹ್ ಣ ಕಾರ್ಯಕ್ರಮವನ್ನು ನೆರವೇರಿಸಿಕೊಟ್ಟರು. ಕ್ಷೇತ್ರ ಸಂಪನ್ಮೂಲ ವ್ಯಕಿ ಪಿ.ಡಿ. ಮಂಗಳೂರ ವಂದಿಸಿದರು. ಅಶೋಕ ಹಾದಿ ಕಾರ್ಯಕ್ರಮ ನಿರೂಪಿಸಿದರು.

# ಇಂಡಿಯಾ ಸ್ಕಿಲ್ಸ್–2025 ಸ್ಪರ್ಧೆಯಲ್ಲಿ ಭಾಗವಹಿಸಲು ಅರ್ಜಿ ಆಹ್ವಾನ

**ಶಿವಮೊಗ್ಗ;** ಕರ್ನಾಟಕ ರಾಜ್ಯದ ಯುವ ಜನತೆಯ ಜ್ಞಾನಾರ್ಜನೆಗೆ ಸೂಕ್ತ ವೇದಿಕೆ ಕಲ್ಪಿಸಲು ಹಾಗೂ ಮಾದರಿ ಕೌಶಲ್ಯಾಭರಿತ ರಾಜ್ಯವನ್ನಾಗಿಸಲು 2025–26ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಕೌಶಲ್ಯ ಒಲಂಪಿಕ್ಸ್ (ಇಂಡಿಯಾ ಸ್ಕಿಲ್ಸ್ ಕರ್ನಾಟಕ–2025) ಸ್ಪರ್ಧಾ ಕಾರ್ಯಕ್ರಮವನ್ನು ಜಿಲ್ಲಾ, ವಲಯ ಹಾಗೂ ರಾಜ್ಯ ಮಟ್ಟಗಳಲ್ಲಿ ಕೈಗೊಳ್ಳಲು ಆಯೋಜಿಸಲಾಗಿದ್ದು, ಆಸಕ್ತರಿಂದ ನೋಂದಣಿ ಮಾಡಿಕೊಳ್ಳಲು ಆಹ್ವಾನಿಸಿದೆ.

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವತಿಯಿಂದ ಎರಡು ವರ್ಷಗಳಿಗೊಮ್ಮೆ ನಡೆಯುವ

ಇಂಡಿಯಾ ಸ್ಕಿಲ್ಸ್–2025 ಸ್ಪರ್ಧೆಯಲ್ಲಿ 16 ರಿಂದ 25 ವರ್ಷದೊಳಗಿನ ಯುವಜನತೆ 63 ಕ್ಕೂ ಹೆಚ್ಚು ಕೌಶಲ್ಯದ ವಿವಿಧ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳುವ ಅತಿದೊಡ್ಡ ವೃತ್ತಿಪರ ಶಿಕ್ಷಣ ಮತ್ತು ಕೌಶಲ್ಯ ಕಾರ್ಯಕ್ರಮವಾಗಿದ್ದು, 2026 ನೇ ಸಾಲಿಗೆ ವಿಶ್ವ ಕೌಶಲ್ಯ ಸ್ಪರ್ಧೆಯು ಚೀನಾದ ಶಾಂಘೈನಲ್ಲಿ ನಡೆಯಲಿದೆ.

ಸ್ಪರ್ಧೆಯಲ್ಲಿ ಭಾಗವಹಿಸುವವರು https://www.skillindiadigital.gov.in/home ಲಿಂಕ್ ಬಳಸುವ ಮೂಲಕ ಸೆ, 30 ರೊಳಗೆ ಸ್ಪರ್ಧೆಗೆ ನೋಂದಾಯಿಸಿಕೊಳ್ಳಬಹುದು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಜಿ ಸಲ್ಲಿಸುವ ಪ್ರಕ್ರಿಯೆ ಹಾಗೂ ಹೆಚ್ಚಿನ ಮಾಹಿತಿಗೆ +919606492216 ನ್ನು ಸಂಪರ್ಕಿಸುವುದು.

## ಭಾರತೀಯ ವಿದ್ಯಾ ಗ್ರಂಥಾಲಯಕ್ಕೆ ಪುಸ್ತಕಗಳಿಗೆ ಆಹ್ವಾನ

**ದಾವಣಗೆರೆ:** ಹಾವೇರಿ ಜಿಲ್ಲೆಯ ರಾಣೇಬೆನ್ನೂರು ನಗರದಲ್ಲಿ ಭಾರತೀಯ ವಿದ್ಯಾ ಕನ್ನಡ ಹಿರಿಯ ಪ್ರಾಥಮಿಕ ಶಾಲೆ ವತಿಯಿಂದ ಭಾರತೀಯ ವಿದ್ಯಾ ಗ್ರಂಥಾಲಯವನ್ನು ಅತಿ ಶೀಘ್ರದಲ್ಲಿ ಸ್ಥಾಪನೆ ಮಾಡಲಾಗುತ್ತದೆ ಈ ಗ್ರಂಥಾಲಯಕ್ಕೆ ಬರುವ ಮಕ್ಕಳಿಗೆ ಹಾಗೂ ಪುಸ್ತಕ ಓದುಗರಿಗೆ ಪುಸ್ತಕಗಳು ಬೇಕಾಗುತ್ತದೆ, ಆದರಿಂದ ಪುಸ್ತಕ ಓದುಗರು ಪುಸ್ತಕ ಪ್ರೇಮಿಗಳು ತಮ್ಮಲ್ಲಿ ಕಥೆ, ಕವನ, ಪ್ರಬಂಧ, ನಾಟಕ, ಕ್ರೀಡೆ, ವಾಣಿಜ್ಯ, ಇನ್ನೂ ಮುಂತಾದ ಶೈಕ್ಷಣಿಕ ಸಂಬಂಧಿಸಿದ ಯಾವುದೇ ಪುಸ್ತಕಗಳನ್ನು ಕಳಿಸಿಕೊಟ್ಟರೆ ಗ್ರಂಥಾಲಯಕ್ಕೆ ಓದಲು ಬರುವ ಓದುಗರಿಗೆ ಅನುಕೂಲ ಆಗುತ್ತದೆ, ಪುಸ್ತಕ ದಾನಿಗಳು ಪುಸ್ತಕ ಕಳುಹಿಸಿ ಕೊಡಬಹುದು ಮಾಹಿತಿಗಾಗಿ ಭಾರತೀಯ ವಿದ್ಯಾ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ಕಾರ್ಯದರ್ಶಿ ಶ್ರೀಮತಿ ಅರ್ಚನಾ ಮಠದ ಇವರ ಮೊ ಮತ್ತು ವಾಟ್ಸಪ್ ನಂ: 9731081444 ಸಂಪರ್ಕ ಮಾಡಬಹುದು ಎಂದು ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಸಂಸ್ಥಾಪಕರಾದ ಶ್ರೀ ಸಾಲಿಗ್ರಾಮ ಗಣೇಶ್ ಶೆಣೈ ವಿನಂತಿಸಿದ್ದಾರೆ

## ಅರಸೀಕೆರೆ ತಾಲ್ಲೂಕಿನ ಅಪರ ಸರ್ಕಾರಿ ವಕೀಲರ ಹುದ್ದೆಗೆ ಅರ್ಜಿಆಹ್ವಾನ

**ಹಾಸನ :** ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕಿನ ಹಿರಿಯ ಶ್ರೇಣಿ ನ್ಯಾಯಾಲಯದಅಪರ ಸರ್ಕಾರಿ ವಕೀಲರ ಹುದ್ದೆಯಅವಧಿ ಮುಕ್ತಾಯವಾಗಿರುವ ಹಿನ್ನೆಲೆಯಲ್ಲಿ ಸದರಿ ಹುದ್ದೆಯನ್ನು ಹೊಸದಾಗಿ ಭರ್ತಿ ಮಾಡುವ ಸಂಬಂಧವಾಗಿಕರ್ನಾಟಕ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳು, 1977 ರ ನಿಯಮ 5 ಮತ್ತು 26(2) ಹಾಗೂ 12 (ಎ) (ಬಿ) ಮತ್ತು (ಸಿ) ರನ್ವಯ 07 ವರ್ಷಗಳ ಕಾಲ ವಕೀಲ ವೃತ್ತಿಯನ್ನು ಪೂರೈಸಿದ ಅರ್ಹ ವಕೀಲರುಗಳಿಗೆ ಅರಸೀಕೆರೆ ತಾಲ್ಲೂಕಿನ ಹಿರಿಯ ಶ್ರೇಣಿ ನ್ಯಾಯಾಲಯದಅಪರ ಸರ್ಕಾರಿ ವಕೀಲರ ಹುದ್ದೆಗೆಅರ್ಜಿಯನ್ನುಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲುಕೊನೆಯ ದಿನಾಂಕ: 15–09–2025 ರ ಸಂಜೆ 5.30 ಗಂಟೆಆಗಿರುತ್ತದೆ. ಭರ್ತಿ ಮಾಡಿದಅರ್ಜಿಯನ್ನುಅಗತ್ಯಎಲ್ಲಾ ದಾಖಲಾತಿಗಳೊಂದಿಗೆ ಜಿಲ್ಲಾಧಿಕಾರಿ, ಕಚೇರಿ, ಹಾಸನ ಜಿಲ್ಲೆ, ಹಾಸನ. ಇಲ್ಲಿಗೆಕೊನೆಯ ದಿನಾಂಕದೊಳಗೆ ಸಲ್ಲಿಸಲು ತಿಳಿಸಿದೆ. ಕೊನೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲದೂರವಾಣಿ ಸಂಖ್ಯೆ:08172–253345

ದಾಖಲಾತಿಗಳು:–ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಪ್ರತಿ,ಎಲ್.ಎಲ್.ಬಿ. ಅಂಕಪಟ್ಟಿಗಳು.ವಕೀಲ ವೃತ್ತಿಯ ನೋಂದಣಿ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ವಕೀಲ ವೃತ್ತಿ ನಡೆಸಿದ ಅನುಭವದಕುರಿತು ಸಂಕ್ಷಿಪ್ತ ವಿವರಗಳು,ಅರ್ಜಿದಾರರುಗಣಕ ಯಂತ್ರದ ಪರಿಣಿತಿ/ ಜ್ಞಾನವುಳ್ಳವರೇ, ಹೌದಾದಲ್ಲಿ ಈ ಬಗ್ಗೆ ಸಂಕ್ಷಿಪ್ತ ಮಾಹಿತಿ,(ಪ್ರಮಾಣ ಪತ್ರ).ಅರ್ಜಿದಾರರ ಭಾವಚಿತ್ರ,ಈ ದಾಖಲೆಗಳನ್ನು ಕಡ್ಡಾಯವಾಗಿ ಪತ್ರಾಂಕಿತಅಧಿಕಾರಿರವರಿಂದ ಧೃಢೀಕರಿಸಿ ಸಲ್ಲಿಸುವಂತೆಜಿಲ್ಲಾಧಿಕಾರಿ ತಿಳಿಸಿದ್ದಾರೆ.

## ಶ್ರೀ ಮಹರ್ಷಿ ವಾಲ್ಮೀಕಿಯವರ ಜೀವನ ಮತ್ತು ಸಾಧನೆ ಕುರಿತು ಕಿರು ಕಥೆ ಸಲ್ಲಿಸಲು ಸೆಪ್ಟೆಂಬರ್ 18 ಕೊನೆಯ ದಿನ

**ಗದಗ :** ಅಕ್ಟೋಬರ್ 7 ರಂದು ಶ್ರೀ ಮಹರ್ಷಿ ವಾಲ್ಮೀಕಿಯವರ ಜಯಂತಿ ದಿನಾಚರಣೆಯ ಹಿನ್ನೆಲೆಯಲ್ಲಿ ಮಾನ್ಯ ಜಿಲ್ಲಾಧಿಕಾರಿಗಳ ಆದೇಶದಂತೆ ಶ್ರೀ ಮಹರ್ಷಿ ವಾಲ್ಮೀಕಿಯವರ " ಜೀವನ ಮತ್ತು ಸಾಧನೆ " ಕುರಿತು ಕಥಾ ಸಂಕಲನ ಬಿಡುಗಡೆ ಮಾಡಬೇಕಾಗಿದೆ. ಆಸಕ್ತರು

ಶ್ರೀ ಮಹರ್ಷಿ ವಾಲ್ಮೀಕಿರವರ ಜೀವನ ಮತ್ತು ಸಾಧನೆ ಕುರಿತು 2 ಪುಟಗಳಿಗೆ ಮೀರದಂತೆ ಕಿರು ಕಥೆಗಳನ್ನು ರಚಿಸಿ ಸೆಪ್ಟೆಂಬರ್ 18 ರೊಳಗಾಗಿ ಉಪನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಗದಗ ರೂ.ನಂ.107 ಇಲ್ಲಿಗೆ ಕಳುಹಿಸಿಕೊಡಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಾರತದ 15ನೇ ಉಪ ರಾಷ್ಟ್ರ ಪತಿಯಾಗಿ ಸಿ.ಪಿ.ರಾಧಾಕೃಷ್ಣನ್ ಆಯ್ಕೆ



**ನವದೆಹಲಿ** : ನಿರೀಕ್ಷೆಯಂತೆ ದೇಶದ 17ನೇ ಉಪರಾಷ್ಟ್ರಪತಿಯಾಗಿ ಬಿಜೆಪಿ ಬೆಂಬಲಿತ ಎನ್.ಡಿ.ಎ ಅಭ್ಯರ್ಥಿ ಹಾಗೂ ಮಹಾರಾಷ್ಟ್ರದ ರಾಜ್ಯಪಾಲ ಸಿಪಿ ರಾಧಾಕೃಷ್ಣನ್ ಅವರು ವಿಜೇತರಾಗಿದ್ದಾರೆ.

ಕೇವಲ ನಾಮಕಾವಸ್ಥೆಗೆ ಎಂಬಂತೆ ನಡೆದ ಉಪರಾಷ್ಟ್ರಪತಿ ಚುನಾವಣೆಯಲ್ಲಿ ಸಿಪಿ ರಾಧಾಕೃಷ್ಣನ್ ಅವರು 452 ಮತಗಳನ್ನು ಪಡೆದರೆ ಕಾಂಗ್ರೆಸ್ ನೇತೃತ್ವದ ಇಂಡಿಯಾ ಮೈತ್ರಿಕೂಟದ ಅಭ್ಯರ್ಥಿ ಹಾಗೂ ಸುಪ್ರೀಂಕೋರ್ಟ್ ನಿವೃತ್ತ ನ್ಯಾಯಮೂರ್ತಿ ಸುದರ್ಶನ್ ರೆಡ್ಡಿ ಅವರು 300 ಮತಗಳನ್ನು ಪಡೆದಿದ್ದಾರೆ. ಚಲಾವಣೆಯಾದ ಒಟ್ಟು 767 ಮತಗಳಲ್ಲಿ ಸಿಪಿ ರಾಧಾಕೃಷ್ಣನ್ ಬರೋಬ್ಬರಿ 452 ಮತಗಳನ್ನು ಪಡೆದು ಗೆಲುವಿನ ನಗೆ ಬೀರಿದ್ದಾರೆ.

14;ಮಂದಿ ಸಂಸದರು ಅಡ್ಡ ಮತದಾನ ಮಾಡಿದ್ದಾರೆ. ಇನ್ನು ಬಿ ಆರ್ ಎಸ್, ಬಿಜೆಡಿ, ಹಾಗೂ ಪಕ್ಷೇತರರು ಸೇರಿದಂತೆ 15 ಮಂದಿ ಸಂಸದರುಮತದಾನದಿಂದ ದೂರ ಉಳಿದು ಯಾವುದೇ ಅಭ್ಯರ್ಥಿಗೆ ಮತ ಚಲಾಯಿಸಿಲ್ಲ. ಮಾಜಿ ಉಪರಾಷ್ಟ್ರಪತಿ ಜಗದೀಶ್ ಧನಕರ್ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಚುನಾವಣೆ ನಡೆದಿತ್ತು. ಇಂಡಿಯ ಅಭ್ಯರ್ಥಿ ಗೆಲುವು ಗೊತ್ತಿದ್ದರೂ, ಕಾಂಗ್ರೆಸ್ ಅಭ್ಯರ್ಥಿಯನ್ನು ಕಣಕ್ಕಿಳಿಸುವ ಮೂಲಕ ಒಗ್ಗಟ್ಟು ಪ್ರದರ್ಶನ ಮಾಡಿರುವುದು ಈ ಚುನಾವಣೆಯ ವಿಶೇಷವಾಗಿದೆ.

ವಿಜೇತರ ಇರುವ ರಾಧಾಕೃಷ್ಣನ್ ಅವರ ಅಧಿಕಾರವಧಿ 5 ವರ್ಷವಿರುತ್ತದೆ. ರಾಜ್ಯಸಭೆಯ ಸಭಾಪತಿಯವಾಗಲಿರುವ ರಾಧಾಕೃಷ್ಣನ್ ಮೂಲತಃ ತಮಿಳುನಾಡಿನವರು. ಭಾರತೀಯ ಜನಸಂಘದಿಂದ ತಮ್ಮ ಸಾರ್ವಜನಿಕ ಜೀವನ ಆರಂಭಿಸಿದ ಅವರು ಆರ್ ಎಸ್ ಎಸ್ ನ ಓರ್ವ ಸಾಮಾನ್ಯ ಕಾರ್ಯಕರ್ತ ರಾಗಿ ಸೇವೆ ಸಲ್ಲಿಸಿದ್ದರು. ಸರಳತೆ, ರಾಷ್ಟ್ರೀಯತೆ ಭ್ರಷ್ಟಾಚಾರ ರಹಿತ ಆಡಳಿತ ಸಿದ್ಧಾಂತದ ಬಗ್ಗೆ ಇದ್ದ ಒಲವು ಅವರನ್ನು ಇಂದು ದೇಶದ ಎರಡನೇ ಅತ್ಯುನ್ನತ ನಾಗರಿಕ ಹುದ್ದೆನಿಸಿದ ಉಪರಾಷ್ಟ್ರಪತಿ ಸ್ಥಾನಕ್ಕೆ ಕೊಂಡುಯ್ಯುದಿದೆ.

ತಮಿಳುನಾಡಿನಿಂದ ಎರಡು ಬಾರಿ ಸಂಸದರಾಗಿದ್ದ ರಾಧಾಕೃಷ್ಣನ್ ಈ ಹಿಂದೆ ತಮಗೆ ವಹಿಸಿದ ಜವಾಬ್ದಾರಿಗಳನ್ನು ಅತ್ಯಂತ ಯಶಸ್ವಿಯಾಗಿ ನಿಭಾಯಿಸಿದ ಕೀರ್ತಿಯು ಭಾಜನರಾಗಿದ್ದರು.

ಸದಾ ವಿವಾದಗಳಿಂದ ದೂರ ಇರುತ್ತಿದ್ದ ಅವರು ಪಕ್ಷದಲ್ಲಿ ಸಜ್ಜನ ಹಾಗೂ ಅಜಾತಶತ್ರು ಎಂದೆ ರಾಜಕೀಯ ವಲಯದಲ್ಲಿ ಗುರುತಿಸಿಕೊಂಡವರು. ಒಂದೇ ಒಂದು ವಿವಾದವನ್ನು ಮೈಮೇಲೆ ಎಳೆದುಕೊಂಡಿರುವ ನಿದರ್ಶನಗಳಿಲ್ಲ.

ಸದಾ ಪಕ್ಷದ ಸಿದ್ಧಾಂತಕ್ಕೆ ಬದ್ಧರಾಗಿ ಇರುತ್ತಿದ್ದ ರಾಧಾಕೃಷ್ಣನ್ ಮಹಾರಾಷ್ಟ್ರದ ರಾಜ್ಯಪಾಲರಾಗಿ ಶಿವಸೇನೆ ನ್ಸಿಪಿ ಕಾಂಗ್ರೆಸ್ ಸೇರಿದಂತೆ ಎಲ್ಲಾ ರಾಜಕೀಯ ಪಕ್ಷಗಳ ಒಲವು ಗಳಿಸಿದ್ದರು.ಬುಧವಾರ ಬೆಳಿಗ್ಗೆ 10:00 ಗಂಟೆಯಿಂದ ಆರಂಭವಾದ ಮತದಾನ ಸಂಜೆ 6:00ಗೆ ಮುಕ್ತಾಯವಾಯಿತು. ಲೋಕಸಭೆಯ 542 ಹಾಗೂ ರಾಜ್ಯಸಭೆಯ 239 ಮತಗಳು ಸೇರಿದಂತೆ ಒಟ್ಟು 752;ಮತಗಳು ಚಕಾವಣೆಯಾದವು. ಅಭ್ಯರ್ಥಿ ಗೆಲುವಿಗೆ 364 ಮತಗಳ ಅಗತ್ಯವಿತ್ತು. ಆದರೆ, ರಾಧಾಕೃಷ್ಣನ್ ಅದಕ್ಕಿಂತಲೂ ಹೆಚ್ಚಿನ ಮತ ಪಡೆಯುವಲ್ಲಿ ಯಶಸ್ವಿಯಾದರು.ಪ್ರಧಾನಿ ನರೇಂದ್ರ ಮೋದಿ, ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡ, ಕೇಂದ್ರ ಸಚಿವರಾದ ಅಮಿತ್ ಶಾ, ರಾಜ್ ನಾಥ್ ಸಿಂಗ್, ಜೆ ಪಿ ನಡ್ಡಾ, ಎಚ್ ಡಿ ಕುಮಾರಸ್ವಾಮಿ, ನಿರ್ಮಲ ಸೀತಾರಾಮನ್, ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ, ಸಚಿವರಾದ ಪ್ರಹ್ಲಾದ್ ಜೋಶಿ , ವಿ ಸೋಮಣ್ಣ,, ರಾಜ್ಯಸಭೆಯ ಪ್ರತಿಪಕ್ಷ ನಾಯಕ ಎಂ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಲೋಕಸಭೆ ಸದಸ್ಯರು ಹಾಗೂ ರಾಜ್ಯಸಭೆ ಸದಸ್ಯರು ಮತ್ತು 12 ಮಂದಿ ನಾಮ ನಿರ್ದೇಶನ ಸದಸ್ಯರು ತಮ್ಮ ಹಕ್ಕು ಚಲಾಯಿಸಿದರು.

### ಒಟ್ಟು ಮತಗಳು– 767

**ಚಲಾವಣೆಯಾದ ಮತಗಳು– 752**
**NDA– 452**
**INDIA– 300**
**ಅಡ್ಡಮತದಾನ– 14**
**ದೂರ ಉಳಿದವರು– 15**

ಮತದಾನ ಮುಗಿದ ನಂತರ ಚುನಾವಣಾ ಕಾರ್ಯದರ್ಶಿ ಅವರು,, ಮತ ಎಣಿಕೆ ಕಾರ್ಯವನ್ನು ನಡೆಸಿ ಹೆಚ್ಚಿನ ಮತ ಪಡೆದ ರಾಧಾಕೃಷ್ಣನ್ ಅವರನ್ನು ವಿಜೇತ ಅಭ್ಯರ್ಥಿ ಎಂದು ಘೋಷಣೆ ಮಾಡಿದರು.

**ಅಭಿನಂದನೆ :**

ಇನ್ನು ಉಪರಾಷ್ಟ್ರಪತಿ ಚುನಾವಣೆಯಲ್ಲಿ ಗೆಲುವು ನಗೆ ಬೀರಿದ ರಾಧಾಕೃಷ್ಣನ್ ಅವರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರಧಾನಿ ನರೇಂದ್ರ ಮೋದಿ, ಮಾಜಿ ಪ್ರಧಾನಿ ಎಚ್.ಡಿ ದೇವೇಗೌಡ, ಕೇಂದ್ರ ಸಚಿವರಾದ ಅಮಿತ್ ಷಾ, ರಾಜ್ ನಾಥ್ ಸಿಂಗ್, ಜೆ ಪಿ ನೆಡ್ಡ, ಮಲ್ಲಿಕಾರ್ಜುನ ಖರ್ಗೆ ರಾಹುಲ್ ಗಾಂಧಿ ಸೇರಿದಂತೆ ಅನೇಕ ಗಣ್ಯರು ಶುಭ ಕೋರಿದರು. ಪ್ರಜಾಪ್ರಭುತ್ವದ ಮೌಲ್ಯಗಳನ್ನು

ಎತ್ತಿ ಹಿಡಿದು ಒಕ್ಕೂಟ ವ್ಯವಸ್ಥೆಯನ್ನು ಬಲಪಡಿಸಿ ಆಡಳಿತ ಮತ್ತು ವಿರೋಧ ಪಕ್ಷ ಇಲ್ಲದೆ ಎಲ್ಲರನ್ನೂ ಸರಿಸಮನಾಗಿ ಕಾಣುತ್ತಿವೆ ಎಂಬ ವಿಶ್ವಾಸವನ್ನು ಅನೇಕರು ವ್ಯಕ್ತಪಡಿಸಿದ್ದಾರೆ.

ಸಿರಿಗೇರಿ: ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಕಾರ್ಯಕ್ರಮ ಪರಿಶೀಲನೆ

# ಗಂಡಾಂತರ ಗರ್ಭಿಣಿ ಮಹಿಳೆಯರ ತಪಾಸಣೆ ನಿರಂತರವಾಗಿರಲಿ: ಡಿಹೆಚ್ಒ ಡಾ.ಯಲ್ಲಾ ರಮೇಶ್ ಬಾಬು



**ಬಳ್ಳಾರಿ:** ಜಿಲ್ಲೆಯಾದ್ಯಂತ ಪ್ರತಿ ತಿಂಗಳು 09 ಮತ್ತು 24ನೇ ತಾರೀಖಿನಂದು ಗಂಡಾಂತರ ಗರ್ಭಿಣಿ ಮಹಿಳೆಯರ ಆರೋಗ್ಯ ತಪಾಸಣೆ ಕೈಗೊಳ್ಳುವ ಕಾರ್ಯ ಜರುಗುತ್ತಿದ್ದು, ಇದು ನಿರಂತರವಾಗಿರಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಮಂಗಳವಾರ, ಸಿರುಗುಪ್ಪ ತಾಲ್ಲೂಕಿನ ಸಿರಿಗೇರಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಕಾರ್ಯಕ್ರಮ ಕುರಿತು ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ಗಂಡಾಂತರ ಗರ್ಭಿಣಿ ಮಹಿಳೆಯರು ಎಂದು ಗುರುತಿಸಿಕೊಳ್ಳುವ ಚೊಚ್ಚಲು ಗರ್ಭಿಣಿ, ಎತ್ತರ ಕಡಿಮೆ, ಅಧಿಕ ರಕ್ತದೊತ್ತಡ, ರಕ್ತದಲ್ಲಿ ಕಬ್ಬಿಣಾಂಶ ಕೊರತೆ, ಅವಳಿ-ಜವಳಿ ಗರ್ಭಿಣಿ,

ತೀವ್ರ ರಕ್ತಹೀನತೆಯ ಸನ್ನಿವೇಶದಲ್ಲಿ ಸ್ಥಳೀಯವಾಗಿ ನೀಡುವ ಐಎಫ್ಎ ಮಾತ್ರೆ, ಐರನ್ ಸುಕ್ರೋಸ್, ರಕ್ತ ಹಾಕಿಸುವಿಕೆ ವಿಧಾನ ಕೈಗೊಳ್ಳಬೇಕು. ಅಗತ್ಯವಿದ್ದಲ್ಲಿ ಸ್ಕಾನ್ ಮಾಡಿಸಲು ತಿಳಿಸಬೇಕು. ಮೊದಲ ಹೆರಿಗೆ ಶಸ್ತ್ರಚಿಕಿತ್ಸೆ ಮೂಲಕವಾದಲ್ಲಿ ಪುನಃ ಗರ್ಭಿಣಿಯಾಗುವ ಅವಧಿಯನ್ನು ಕನಿಷ್ಟ 3 ವರ್ಷಕ್ಕೆ ಕಡ್ಡಾಯವಾಗಿ ಮುಂದೂಡುವುದು, ಇದಕ್ಕಾಗಿ ಅಂತರ ಚುಚ್ಚುಮದ್ದು, ಕಾಪರ-ಟಿ, ನೀರೊಧ ಬಳಸುವಂತೆ ಜಾಗೃತಿ ಮೂಡಿಸಬೇಕು ಎಂದರು.

ಗರ್ಭಿಣಿ ಮಹಿಳೆಯರು ಗುಣಮಟ್ಟದ ಪೌಷ್ಠಿಕ ಆಹಾರ ಸೇವಿಸುವುದರ ಜೊತೆಗೆ ವೈದ್ಯರ ಸಲಹೆಯಂತೆ ಉಚಿತವಾಗಿ ನೀಡುವ ಕಬ್ಬಿಣಾಂಶ ಮಾತ್ರೆಗಳನ್ನು ಪ್ರತಿದಿನ ಒಂದರಂತೆ ಕನಿಷ್ಟ 180 ಮತ್ತು ಒಂದು ವೇಳೆ ರಕ್ತಹೀನತೆಯ ಪ್ರಮಾಣ ತೀವ್ರವಾಗಿದ್ದಲ್ಲಿ ದಿನಕ್ಕೆ 2 ರಂತೆ 360 ಮಾತ್ರೆಗಳನ್ನು 6 ತಿಂಗಳ ಅವಧಿಯಲ್ಲಿ ಸೇವಿಸಬೇಕು. ಜೊತೆಗೆ ದೈಹಿಕವಾಗಿ ಸದೃಢರಾಗಿರಲು ಕ್ಯಾಲ್ಸಿಯಂ ಮಾತ್ರೆಗಳನ್ನು ಸಹ ನುಂಗಬೇಕು ಎಂದು ವಿನಂತಿಸಿದರು.

ಬಳಿಕ ಡಿಹೆಚ್ಒ ಡಾ.ಯಲ್ಲಾ ರಮೇಶ್ ಬಾಬು ಅವರು ಗರ್ಭಿಣಿ ಮಹಿಳೆಯರ ಸಾಮಾನ್ಯ ಆರೋಗ್ಯ ತಪಾಸಣೆ ಕೈಗೊಂಡರು.

ಈ ಸಂದರ್ಭದಲ್ಲಿ ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ, ವೈದ್ಯಾಧಿಕಾರಿಗಳಾದ ಡಾ.ತಿಪ್ಪಾರೆಡ್ಡಿ, ಡಿವಿಬಿಡಿಸಿಪಿ ಜಿಲ್ಲಾ ಸಲಹೆಗಾರ ಪ್ರತಾಪ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಚಿದಾನಂದ, ಪಿಹೆಚ್‌ಸಿಒ ಗಂಗಮ್ಮ, ನರ್ಸಿಂಗ್ ಅಧಿಕಾರಿ ಈರಮ್ಮ ಸೇರಿದಂತೆ ಆಶಾ ಕಾರ್ಯಕರ್ತೆಯರು, ತಾಯಂದಿರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ವಾಣಿಜ್ಯ ಮತ್ತು ನಿರ್ವಹಣಾ ಶಾಸ್ತ್ರ ಅಧ್ಯಾಪಕರ ವೇದಿಕೆಗೆ ಪದಾಧಿಕಾರಿಗಳ ಆಯ್ಕೆ



**ದಾವಣಗೆರೆ :** ವಿಶ್ವವಿದ್ಯಾನಿಲಯ ವಾಣಿಜ್ಯ ಮತ್ತು ನಿರ್ವಹಣಾ ಶಾಸ್ತ್ರ ಅಧ್ಯಾಪಕರ ವೇದಿಕೆಯ 2025 ರಿಂದ 2027ನೇ ಸಾಲಿನ ಅವಧಿಗೆ ಹೊಸ ಕಾರ್ಯಕಾರಿ ಸಮಿತಿ ಆಯ್ಕೆಯಾಗಿದೆ.

ಅಧ್ಯಕ್ಷರಾಗಿ ದಾವಣಗೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕರಾದ ಡಾ. ವೆಂಕಟೇಶ್ ಬಾಬು ಅವರು ಆಯ್ಕೆಯಾಗಿದ್ದಾರೆ. ಕಾರ್ಯದರ್ಶಿಯಾಗಿ ದೇವರಾಜ್ ಅರಸ್ ಪ್ರಥಮ ದರ್ಜೆ ಕಾಲೇಜಿನ ಪ್ರೊ ದೇವೇಂದ್ರಪ್ಪ ಜಿ ಒ, ಖಜಾಂಚಿಯಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ದಾವಣಗೆರೆಯ ಸಹ ಪ್ರಾಧ್ಯಾಪಕಿ ಪ್ರೊ ಸುನಿತಾ ಕೆ.ಬಿ., ಉಪಾಧ್ಯಕ್ಷರಾಗಿ ಹರಿಹರ ಸರ್ಕಾರಿ ಕಾಲೇಜಿನ ಪ್ರೊ ಬಾಬು ಕೆ. ಎ ಹಾಗೂ ಹಿರಿಯೂರಿನ ವೇದಾವತಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರೊ ಅಣ್ಣಪ್ಪ ಡಿ ಅವರು ಆಯ್ಕೆಯಾಗಿದ್ದಾರೆ.

ಇವರುಗಳು ಮುಂದಿನ ಎರಡು ವರ್ಷಗಳ ಕಾಲ (2025-27) ವೇದಿಕೆಯನ್ನು ಮುನ್ನಡೆಸಲಿದ್ದಾರೆ.ಅಧ್ಯಕ್ಷರಾಗಿ ಆಯ್ಕೆಯಾದ ನಂತರ ಮಾತನಾಡಿದ ಡಾ. ವೆಂಕಟೇಶ್ ಬಾಬು ಅವರು, "ದಾವಣಗೆರೆ ವಿಶ್ವವಿದ್ಯಾನಿಲಯದ ವಾಣಿಜ್ಯ ಮತ್ತು ನಿರ್ವಹಣಾ ಶಾಸ್ತ್ರ ಅಧ್ಯಾಪಕರನ್ನೂ ಹಾಗೂ ವಾಣಿಜ್ಯ ಶಾಸ್ತ್ರ ವಿಷಯವನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯುವ ಕಾರ್ಯಗಳನ್ನು ಈ ವೇದಿಕೆಯ ಮೂಲಕ ಕೈಗೊಳ್ಳುವುದೇ ನಮ್ಮ ಮುಖ್ಯ ಗುರಿಯಾಗಿದೆ. ಉತ್ತಮ ಶೈಕ್ಷಣಿಕ ಚಟುವಟಿಕೆ ಹಾಗೂ ಗುಣಮಟ್ಟದ ಕಾರ್ಯಕ್ರಮಗಳನ್ನು ರೂಪಿಸುವ ಯೋಜನೆ ಹೊಂದಿದ್ದೇವೆ" ಎಂದು ಹೇಳಿದರು.ಈ ಮೂಲಕ ದಾವಣಗೆರೆ ವಿಶ್ವವಿದ್ಯಾನಿಲಯ ವಾಣಿಜ್ಯ ಮತ್ತು ನಿರ್ವಹಣಾ ಶಾಸ್ತ್ರ ಅಧ್ಯಾಪಕರ ವೇದಿಕೆಯು ನವ ಚೈತನ್ಯದೊಂದಿಗೆ ಮುಂದಿನ ಅಧ್ಯಾಯವನ್ನು ಆರಂಭಿಸಿದೆ.

# ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಹಿಂದೂಸ್ಥಾನ್ ಏರೋನಾಟಿಕ್ಸ್ ಲಿಮಿಟೆಡ್ (ಹೆಚ್‌ಎಎಲ್) ಬೆಂಗಳೂರು ಇಲ್ಲಿ ಐಟಿಐ ತೇರ್ಗಡೆ ಹೊಂದಿದ ಅಭ್ಯರ್ಥಿಗಳಿಗೆ ಒಂದು ವರ್ಷದ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.ಎಸ್‌ಎಸ್‌ಎಲ್‌ಸಿ + ಐಟಿಐ ಪಾಸಾದವರು ಫಿಟ್ಟರ್, ಟರ್ನರ್, ಮಷಿನಿಸ್ಟ್, ಎಲೆಕ್ಟ್ರೀಷಿಯನ್, ವೆಲ್ಡರ್, ಸಿಒಪಿಎ (ಅಔಕಂ), ಕಾರ್ಪೆಂಟರ್, ಫೌಂಡ್ರಿಮನ್, ಶೀಟ್ ಮೆಟಲ್ ವರ್ಕರ್, ಟೂಲ್ ಆಂಡ್ ಡೈಮೇಕರ್, ಸಿಎನ್‌ಸಿ ಪ್ರೋಗ್ರಾಮರ್ ಕಂ ಆಪರೇಟರ್ ತರಬೇತಿ ಪಡೆಯಲು ಅರ್ಜಿ ಸಲ್ಲಿಸಬಹುದು.

ಆಸಕ್ತರು ತಮ್ಮ ಎಸ್‌ಎಸ್‌ಎಲ್‌ಸಿ+ ಐಟಿಐ ಅಂಕಪಟ್ಟಿ, ಜಾತಿ /ಪಿಡಬ್ಲ್ಯೂಡಿಪ್ರಮಾಣ ಪತ್ರ, ನ್ಯಾಷನಲ್ ಟ್ರೇಡ್ ಸರ್ಟಿಫಿಕೇಟ್, ಆಧಾರ್ ಕಾರ್ಡ್ ಮತ್ತು ಪಾನ್ ಕಾರ್ಡ್ ಈ ಎಲ್ಲಾ ದಾಖಲೆಗಳ ಮೂಲ ಪ್ರತಿ ಹಾಗೂ 2 ಸೆಟ್ ಜೆರಾಕ್ಸ್ ಪ್ರತಿಯನ್ನು ತೆಗೆದುಕೊಂಡು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಶಿವಮೊಗ್ಗ, ಗುತ್ಯಪ್ಪ ಕಾಲೋನಿ, ಪಂಪಾ ನಗರ, 2ನೇ ಕ್ರಾಸ್, ಸಾಗರ ರಸ್ತೆ, ಶಿವಮೊಗ್ಗ ಇಲ್ಲಿಗೆ ದಿ:26/09/2025 ರೊಳಗಾಗಿ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿ ಮತ್ತು ಅರ್ಜಿ ನಮೂನೆಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಶಿವಮೊಗ್ಗ, ದೂ.ಸಂ: 08182-255293, 9380663606/ 9901914601 ನ್ನು ಸಂಪರ್ಕಿಸುವಂತೆ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

**ಶಿವಮೊಗ್ಗ:** ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮವು 2025-26ನೇ ಸಾಲಿನ ಪರಿಶಿಷ್ಟ ಜಾತಿಗೆ ಸೇರಿದ ಚರ್ಮ ಕೈಗಾರಿಕೆಯಲ್ಲಿ ತೊಡಗಿರುವ ಕುಶಲಕರ್ಮಿಗಳಿಗೆ ಕಿರು ನೇರ ಸಾಲ ಯೋಜನೆ, ಚರ್ಮಕಾರರ ವಸತಿ ಯೋಜನೆ ಮತ್ತು ಚರ್ಮ ಕುಶಲಕರ್ಮಿಗಳ ಕುಟುಂಬಗಳ ಯುವಜನರಿಗೆ ಹೊಸ ತಂತ್ರಜ್ಞಾನ ವಿನ್ಯಾಸಗಳು ಹಾಗೂ ಮಾರುಕಟ್ಟೆ ಬೇಡಿಕೆಗಳ ಬಗ್ಗೆ ದೆಹಲಿ, ತಮಿಳುನಾಡು, ಮಹಾರಾಷ್ಟ್ರ, ಉತ್ತರಪ್ರದೇಶ ಮತ್ತು ಪಶ್ಚಿಮ ಬಂಗಾಳದಲ್ಲಿ ತರಬೇತಿ ಪಡೆಯಲು ಅಧ್ಯಯನ ಪ್ರವಾಸ ಯೋಜನೆಗೆ ಅರ್ಹರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಆಸಕ್ತರು https://sevasindhu.karnataka.gov.in, https://sevasindhuservices.karnataka.gov.in ಪೋರ್ಟಲ್ ಮೂಲಕ ಅ. 08 ರೊಳಗಾಗಿ ಅರ್ಜಿ ಸಲ್ಲಿಸುವಂತೆ ನಿಗಮದ ವ್ಯವಸ್ಥಾಪಕರು/ಜಿಲ್ಲಾ ಸಂಯೋಜಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸಂಯೋಜಕರು, ಲಿಡ್‌ಕರ್, ನೆಹರು ರಸ್ತೆ, ಶಿವಮೊಗ್ಗ ಇವರನ್ನು ಖುದ್ದಾಗಿ ಅಥವಾ ಮೊ.ಸಂ.: 8904510699 ನ್ನು ಸಂಪರ್ಕಿಸುವುದು.

# ಉಚಿತ ತಪಾಸಣೆ ಶಿಬಿರ

**ಶಿವಮೊಗ್ಗ:** ಶಿಕ್ಷಕರ ದಿನಾಚರಣೆಯ ಪ್ರಯುಕ್ತ ದುರ್ಗಿಗುಡಿ ಮುಖ್ಯ ರಸ್ತೆಯಲ್ಲಿರುವ ತೃಪ್ತಿ ಹೆಲ್ತ್ ಕೇರ್‌ನಲ್ಲಿ ಸೆ.11ರ ಗುರುವಾರ ಶಿಕ್ಷಕರಿಗೆ ಮತ್ತು ಅವರ ಕುಟುಂಬದವರಿಗೆ ಉಚಿತ ಕಿಡ್ನಿ ಮತ್ತು ಮೂತ್ರಕೋಶ ರೋಗಗಳ ತಪಾಸಣೆ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.ಅಂದು ಬೆಳಗ್ಗೆ 10 ಗಂಟೆಯಿಂದ ಶನೇಶ್ವರ ದೇವಾಲಯದ ಬಳಿಯ ಐಡಿಎಫ್‌ಸಿ ಬ್ಯಾಂಕ್ ಕಟ್ಟಡದ ಮೊದಲನೇ ಮಹಡಿಯಲ್ಲಿ ಏರ್ಪಡಿಲಾಗಿದೆ.ನುರಿತ ತಜ್ಞ ವೈದ್ಯ ಹಾಗೂ ಮ್ಯಾಕ್ಸ್ ಆಸ್ಪತ್ರೆಯ counsulant urologist, uro-Genital Surgeon and andrologist ಡಾ.ಎಸ್.ಚಂದ್ರಶೇಖರ್ ತಪಾಸಣೆ ನಡೆಸಲಿದ್ದು,

ತಪಾಸಣೆಯಲ್ಲಿ ಬಿ.ಪಿ. ಶುಗರ್ ಮತ್ತು ಇಸಿಜಿ ಜೊತೆಗೆ ರಿಪೋರ್ಟಿಂಗ್, ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಉಚಿತವಾಗಿರುತ್ತದೆ.ಹೆಚ್ಚಿನ ಮಾಹಿತಿಗಾಗಿ 8453475775, 9513878265 ಗೆ ಸಂಪರ್ಕಿಸಿ. ಕರೆ ಮಾಡಿ ನೊಂದಾಯಿಸಿಕೊಂಡವರಿಗೆ ಮೊದಲ ಆದ್ಯತೆ. ವಿಶೇಷ ಸೂಚನೆ: ಕಿಡ್ನಿ ಮತ್ತು ಮೂತ್ರಕೋಶ ತೊದರೆಯಿಂದ ಬಳಲುತ್ತಿರುವವರು ಮಾತ್ರ ಬರತಕ್ಕದ್ದು. (ಕಿಡ್ನಿ ಮತ್ತು ಮೂತ್ರಕೋಶದಲ್ಲಿ ಕಲ್ಲು, ಸಂಪೂರ್ಣ ಮೂತ್ರ ನಿಲ್ಲುವುದು, ಮೂತ್ರದಲ್ಲಿ ರಕ್ತ ಕಾಣಿಸಿಕೊಳ್ಳುವುದು, ಬಿಪಿ, ಶುಗರ್, ವೃದ್ಧಾಪ್ಯದ ಮೂತ್ರದ ತೊಂದರೆಗಳು, ಜೀರ್ಣಾಂಗದ ತೊಂದರೆ, ನಿಮಿರುದೌರ್ಬಲ್ಯ ಗಂಡಸರಿಗೆ ಮಾತ್ರ, ಕೈ ಕಾಲು ಮತ್ತು ಮುಖ ಊದಿಕೊಳ್ಳುವುದು)

ಸಿರಬಡಿಗೆ ಗ್ರಾಮದಲ್ಲಿ ಸಿರಿಧಾನ್ಯ ಬೆಳೆ ಕುರಿತು ಕಾರ್ಯಾಗಾರ

# ಸಿರಿಧಾನ್ಯ ಬೆಳೆ ರೈತರಿಗೆ ಲಾಭದಾಯಕ ಕೃಷಿ



**ಚಿಕ್ಕಮಗಳೂರು:** ಸಿರಿಧಾನ್ಯ ಬೆಳೆಯಿಂದ ಮಣ್ಣಿನ ಫಲವತ್ತತೆ ಹೆಚ್ಚುವುದರ ಜೊತೆಗೆ ಭೂಮಿಯ ಉಷ್ಣಾಂಶವನ್ನು ತಡೆಯಬಹುದಾಗಿದೆ ಎಂದು ಕೃಷಿ ಇಲಾಖೆ ಅಧಿಕಾರಿ ಉಮೇಶ್ ಹೇಳಿದ್ದಾರೆ.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಚಿಕ್ಕಮಗಳೂರು ತಾಲ್ಲೂಕಿನ ಲಕ್ಯಾ ವಲಯದ ಸಿರಬಡಿಗೆ ಗ್ರಾಮದಲ್ಲಿ ನಿನ್ನೆ (ಸೋಮವಾರ) ಏರ್ಪಡಿಸಿದ್ದ ಕೃಷಿ ವಿಸ್ತರಣಾ ಕಾರ್ಯಕ್ರಮದಲ್ಲಿ ಸಿರಿಧಾನ್ಯ ಬೆಳೆ ಕುರಿತು ಮಾತನಾಡುತ್ತಿದ್ದರು.

ಸಿರಿಧಾನ್ಯ ಅಲ್ಪಾವಧಿ ಮತ್ತು ಮಳೆಯಾಶ್ರಿತ ಬೆಳೆಯಾಗಿದ್ದು, ತೃಣಧಾನ್ಯಗಳಾದ ರಾಗಿ, ನವಣೆ, ಸಜ್ಜೆ, ಸಾವೆ, ಅರ್ಕ, ಉದಲು, ಕೊರಲೆ ಮತ್ತು ಬರಗು ಇವುಗಳ ವಿಶೇಷತೆಯಾಗಿದ್ದು, ಮನುಷ್ಯನಲ್ಲಿ ಬಿಪಿ, ಶುಗರ್ ಸೇರಿದಂತೆ ಕಾಣಿಸಿಕೊಳ್ಳುವ ಹಲವು ರೋಗಗಳಿಗೂ ಔಷಧಿಯಾರುವ ಸಿರಿಧಾನ್ಯ ಶ್ರೀಮಂತರ ಆರೋಗ್ಯದ ಸಿರಿವಂತ ಎಂದಾಗಿದೆ ಎಂದು ತಿಳಿಸಿದರು.

ಮಿತ ಗೊಬ್ಬರ ಬಳಕೆ, ಇವುಗಳ ನಿರ್ವಹಣೆಯಿಂದ ರೈತರಿಗೆ ಸಿರಿಧಾನ್ಯ ಲಾಭದಾಯಕವೇ ಹೊರತು ನಷ್ಟವಲ್ಲ. ಸಿರಿಧಾನ್ಯಗಳನ್ನು ಬೆಳೆಯುವ ಮೊದಲು ಮಣ್ಣನ್ನು ಹದಗೊಳಿಸುವಿಕೆ, ಉತ್ತಮ ಗುಣಮಟ್ಟದ ಬೀಜಗಳ ಆಯ್ಕೆ, ಬೆಳೆಗಳ ನಿರ್ವಹಣೆಯಲ್ಲಿ ಕಳೆಗಳ ನಿರ್ವಹಣೆ ಬಗ್ಗೆ ಹೆಚ್ಚು ಗಮನ ಕೇಂದ್ರೀಕರಿಸುವುದು ಮತ್ತು ಮಾರುಕಟ್ಟೆ ವ್ಯವಸ್ಥೆ ಬಗ್ಗೆ ತಿಳಿದುಕೊಳ್ಳುವುದು, ಸಿರಿದಾನ್ಯಗಳ ಮೌಲ್ಯವರ್ಧನೆ ಮಾಡುವುದು ಹೆಚ್ಚು ಲಾಭದಾಯಕವಾಗಿರುವುದರಿಂದ ರೈತರು ಸಿರಿಧಾನ್ಯ ಬೆಳೆಯಲು ಹೆಚ್ಚು ಆಸಕ್ತಿ ವಹಿಸಬೇಕೆಂದು ಮನವಿ ಮಾಡಿದರು.

ಸಿರಿಧಾನ್ಯಗಳಲ್ಲಿ ಅತಿಹೆಚ್ಚು ಪ್ರೊಟೀನ್, ಕ್ಯಾಲ್ಸಿಂ, ನಾರಿನಾಂಶ ಮತ್ತು ಕಬ್ಬಿಣಾಂಶ ಇರುವುದರಿಂದ ನಮ್ಮ ದೇಹಕ್ಕೆ ಬೇಕಾದ ಸೂಕ್ತ ಆಹಾರ ಒದಗಿಸುತ್ತದೆ. ಸಿರಿಧಾನ್ಯ ಬೆಳೆಯುವುದು ಅತ್ಯಂತ ಅವಶ್ಯಕವಾಗಿದ್ದು, ಇದರಿಂದ ಬರುವ ಹುಲ್ಲು, ಜಾನುವಾರುಗಳಿಗೆ ಸೂಕ್ತವಾದ ಮೇವಾಗಲಿದೆ. ಜಾನುವಾರುಗಳು ಈ ಹುಲ್ಲನ್ನು ಸೇವಿಸುವುದರಿಂದ ಹಾಲಿನ ಗುಣಮಟ್ಟವೂ ಕೂಡ ಉತ್ಕೃಷ್ಟವಾಗುತ್ತದೆ ಎಂದು ಹೇಳಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಚಿಕ್ಕಮಗಳೂರು ತಾಲ್ಲೂಕು ಯೋಜನಾಧಿಕಾರಿ ರೂಪ ಜೆ. ಜೈನ್ ಮಾತನಾಡಿ ಗ್ರಾಮೀಣ ಪ್ರದೇಶದಲ್ಲಿರುವ ಬಡವರ, ಮಹಿಳೆಯರ, ರೈತರ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಹಾಗೂ ಸಮುದಾಯಗಳ ಸರ್ವಾಂಗೀಣ ಅಭಿವೃದ್ಧಿ ಮತ್ತು ಸಬಲೀಕರಣಕ್ಕಾಗಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಎಂಬ ಕಲ್ಪವೃಕ್ಷವನ್ನು 1982ರಲ್ಲಿ ಪೂಜ್ಯ ಖಾವಂದರು ನೆಟ್ಟು, ಬೆಳೆಸಿ ಪೋಷಿಸಿದರು. ಇಂದು ಈ ಕಲ್ಪವೃಕ್ಷ ವಿಶಾಲವಾಗಿ ಬೆಳೆದು ಹಳ್ಳಿ ಹಳ್ಳಿಗಳ ಬಡ ಕುಟುಂಬಗಳಿಗೆ ಬೆಳಕಾಗಿದೆ. ಸ್ವಸಹಾಯ ಸಂಘಗಳ ವಾರದ ಸಭೆ, ಉಳಿತಾಯ ಪ್ರಗತಿ ನಿಧಿ ವಿತರಣೆ, ಮರುಪಾವತಿ ಚೀಟಿ ಮತ್ತು ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳಾದ ಜ್ಞಾನದೀಪ ಶಾಲಾ ಶಿಕ್ಷಣ ಕಾರ್ಯಕ್ರಮ, ಶಾಲೆಗಳಿಗೆ ಪೀಠೋಪಕರಣಗಳ ಪೂರೈಕೆ, ಸುಜ್ಞಾನ ನಿಧಿ, ಶಿಷ್ಯವೇತನ, ಕಾರ್ಯಕ್ರಮ ಜನಮಂಗಳ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

ಗ್ರಾಮದ ಮುಖಂಡ ಶಿವರುದ್ರಪ್ಪ ಮಾತನಾಡಿ ಸರ್ಕಾರದಿಂದ ಮಾಡಲಾಗದ ಕೃಷಿ ಚಟುವಟಿಕೆಗಳನ್ನು ಶ್ರೀ ವೀರೇಂದ್ರ ಹೆಗ್ಗಡೆಯವರು ಚಿಂತಿಸಿ, ಕೆಳಮಟ್ಟದ ರೈತರಿಗೆ ತರಬೇತಿ ಕಾರ್ಯಾಗಾರದ ಮೂಲಕ ಅನುಷ್ಠಾನ ಮಾಡುತ್ತಿರುವುದರಿಂದ ಬಹಳಷ್ಟು ಸಣ್ಣ ಹಿಡುವಳಿದಾರರ ಜೀವನ ಸುಧಾರಣೆಗೊಂಡಿದೆ ಎಂದರು.

ಒಕ್ಕೂಟದ ಅಧ್ಯಕ್ಷೆ ವಿಶಾಲ, ಲಕ್ಕಮ್ಮನಹಳ್ಳಿ ಗ್ರಾ.ಪಂ. ಅಧ್ಯಕ್ಷೆ ಶಶಿಕಲಾ, ಸಿರಬಡಿಗೆ ಗ್ರಾಮದ ಮುಖಂಡರಾದ ಸೋಮಶೇಖರ್, ಎಸ್.ಬಿ. ರುದ್ರಪ್ಪ, ಚಂದ್ರಶೇಖರ್ ಹಾಗೂ ಜಯಂತಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ವಲಯ ಮೇಲ್ವಿಚಾರಕ ನೇತ್ರಾವತಿ ಸ್ವಾಗತಿಸಿ, ಸೇವಾ ಪ್ರತಿನಿಧಿ ರಂಗಸ್ವಾಮಿ ವಂದಿಸಿದರು. ತಾಲ್ಲೂಕಿನ ಕೃಷಿ ಮೇಲ್ವಿಚಾರ ಬಿ. ಉಮೇಶ್ ಕಾರ್ಯಕ್ರಮ ನಿರೂಪಿಸಿದರು. ಪ್ರಗತಿಬಂಧು ಸ್ವಸಹಾಯ ಗುಂಪಿನ ಸಿರಿಧಾನ ಬೆಳೆದ ರೈತರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಅರ್ಜಿ ಆಹ್ವಾನ

**ಗದಗ** : ಸೆಪ್ಟೆಂಬರ್ 10: 2025-26 ನೇ ಸಾಲಿನಲ್ಲಿ ಅಕ್ಟೋಬರ್ 2 ರಂದು ನಾಗಪೂರ ದೀಕ್ಷಾಭೂಮಿಯಲ್ಲಿ ನಡೆಯುವ ಪ್ರವರ್ತನ ದಿನ ಕಾರ್ಯಕ್ರಮ ದಿ: 30-9-2025 ರಿಂದ 4-10-2025 ಪ್ರತಿ ವರ್ಷದಂತೆ ಕರ್ನಾಟಕ ರಾಜ್ಯದಿಂದ ಡಾ.ಬಿ.ಆರ್. ಅಂಬೇಡ್ಕರ್ ಅನುಯಾಯಿಗಳನ್ನು ಇಲಾಖೆ ವತಿಯಿಂದ ನಾಗಪೂರ ದೀಕ್ಷಾಭೂಮಿ ಯಾತ್ರೆಗೆ ಪ್ರಯಾಣಿಸಲು ಹಾಗೂ ಹಿಂದಿರುಗಿ ಬರುವ ಸಂಬಂಧ ಬಸ್ಸು ಮತ್ತು ರೈಲಿನ ಮೂಲಕ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಅರ್ಹ ಯಾತ್ರಾರ್ಥಿಗಳನ್ನು ಆಯ್ಕೆ ಮಾಡಲು ಅರ್ಜಿ ಸಲ್ಲಿಸುವ ದಿನಾಂಕವನ್ನು ಸೆಪ್ಟೆಂಬರ್ 15 ರವರೆಗೆ ವಿಸ್ತರಿಸಲಾಗಿದೆ.


ಕರ್ನಾಟಕ ಸರ್ಕಾರ

## ಪುರಸಭಾ ಕಾರ್ಯಾಲಯ, ಚನ್ನಗಿರಿ – 577213

ಕ್ರಮಾಂಕ: ಪು.ಸ.ಚ/ಮ.ಶಾ/ಸಿ.ಆರ್/01/2025-26 ದಿನಾಂಕ : 06-09-2025

### ಮರು ಬಹಿರಂಗ ಹರಾಜು ಪ್ರಕಟಣೆ

ಕ.ಪೌ.ಅ-1964 ರ ಪ್ರ-72 (1) ಮತ್ತು (2) ಹಾಗೂ Municipal (Guidance of Copies and Misc Provision) Rules 1966 ರ ನಿಯಮ 39 ರ ಪ್ರಕಾರ)

ಈ ಮೂಲಕ ಚನ್ನಗಿರಿ ಪುರಸಭೆಯ ಸಮಸ್ತ ಜಾಹೀರಾತು ಮುದ್ರಣದಾರರಿಗೆ ಹಾಗೂ ನಾಗರೀಕರಿಗೆ ತಿಳಿಯಪಡಿಸುವುದೇನೆಂದರೆ, ಚನ್ನಗಿರಿ ಪುರಸಭೆ ವ್ಯಾಪ್ತಿಯಲ್ಲಿ ಬರುವ ಪುರಸಭೆ ಖಾಸಗಿ ಬಸ್ ನಿಲ್ದಾಣದ ಮೇಲ್ಭಾಗದಲ್ಲಿರುವ ಪುರಸಭೆ ಮಾಲೀಕತ್ವದ ಜಾಹೀರಾತು ಹೋರ್ಡಿಂಗ್‌ನ್ನು ಕರ್ನಾಟಕ ಪುರಸಭೆ ಕಾಯ್ದೆ 1964ರ ಕಲಂ 72(2) ರನ್ವಯ 01 ವರ್ಷದ ಅವಧಿಗೆ ಗುತ್ತಿಗೆ ನೀಡಲು ಷರತ್ತಿಗೆ ಒಳಪಟ್ಟು ಮರು ಬಹಿರಂಗ ಹರಾಜನ್ನು ದಿನಾಂಕ: 24-09-2025 ನೇ ಬುಧವಾರ ಬೆಳಿಗ್ಗೆ 11:00 ಗಂಟೆಗೆ ಪುರಸಭೆ ಕಾರ್ಯಾಲಯದ ಆವರಣದಲ್ಲಿ ಪುರಸಭೆಯ ಅಧ್ಯಕ್ಷರು, ಉಪಾಧ್ಯಕ್ಷರು, ಸ್ಥಾಯಿಸಮಿತಿ ಅಧ್ಯಕ್ಷರು, ಮುಖ್ಯಾಧಿಕಾರಿಗಳು, ಸದಸ್ಯರ ಸಮ್ಮುಖದಲ್ಲಿ ಬಹಿರಂಗ ಹರಾಜು ನಡೆಸಲಾಗುವುದು. ಪ್ರಯುಕ್ತ ಮರು ಬಹಿರಂಗ ಹರಾಜಿನಲ್ಲಿ ಭಾಗವಹಿಸಲು ಇಚ್ಛೆಯುಳ್ಳವರು ಈ ಕೆಳಕಂಡಂತೆ ಸೂಚಿಸಿದ ಮರುಪಾವತಿ ಠೇವಣಿಯನ್ನು ರಾಷ್ಟ್ರೀಕೃತ ಬ್ಯಾಂಕಿನಿಂದ ಮುಖ್ಯಾಧಿಕಾರಿ ಪುರಸಭೆ ಚನ್ನಗಿರಿ ರವರ ಹೆಸರಿನಲ್ಲಿ ಡಿ.ಡಿ. ಪಡೆದು ಪುರಸಭೆ ನಿಗದಿಪಡಿಸಿದ ಅರ್ಜಿಯೊಂದಿಗೆ ಲಗತ್ತಿಸಿ ದಿನಾಂಕ: 23-09-2025 ರ ಸಂಜೆ 5:30 ಗಂಟೆ ಒಳಗಾಗಿ ಪುರಸಭೆ ಕಛೇರಿಗೆ ಸಲ್ಲಿಸತಕ್ಕದ್ದು, ಸದರಿ ಜಾಹೀರಾತು ಹೋರ್ಡಿಂಗ್‌ಗೆ ನಿಗಧಿ ಪಡಿಸಿರುವ ಮರುಪಾವತಿ ಠೇವಣಿಯಲ್ಲಿ ಯಾವುದೇ ವಿನಾಯಿತಿ ಇರುವುದಿಲ್ಲ ಮತ್ತು ಹೆಚ್ಚಿನ ಮಾಹಿತಿಗಾಗಿ ಕಂದಾಯ ಶಾಖೆಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ತಿಳಿದುಕೊಳ್ಳಬಹುದು.

**ಜಾಹೀರಾತು ಹೋರ್ಡಿಂಗ್‌ನ ವಿವರ**

| ಕ್ರ. ಸಂ. | ಜಾಹಿರಾತು ಹೋರ್ಡಿಂಗ್ ಇರುವ ಸ್ಥಳ | ಅಳತೆ | ನಿಗಧಿಪಡಿಸಿದ ವಾರ್ಷಿಕ ಬಾಡಿಗೆ | ಮರು ಹರಾಜಿನಲ್ಲಿ ಭಾಗವಹಿಸಲು ಪಾವತಿಸಬೇಕಾದ ಮರುಪಾವತಿ ಠೇವಣಿ ಮೊತ್ತ |
|---|---|---|---|---|
| 01 | ಪುರಸಭೆ ಮಾಲೀಕತ್ವದ ಖಾಸಗಿ ಬಸ್ ನಿಲ್ದಾಣದ ಮೇಲ್ಭಾಗ | 6*6 ಮೀ | 48,946-00 | 50,000-00 |

ಸಹಿ/- ಮುಖ್ಯಾಧಿಕಾರಿ, ಪುರಸಭೆ, ಚನ್ನಗಿರಿ. ಸಹಿ/- ಸ್ಥಾಯಿ ಸಮಿತಿ ಅಧ್ಯಕ್ಷರು, ಪುರಸಭೆ, ಚನ್ನಗಿರಿ. ಸಹಿ/- ಉಪಾಧ್ಯಕ್ಷರು, ಪುರಸಭೆ, ಚನ್ನಗಿರಿ ಸಹಿ/- ಅಧ್ಯಕ್ಷರು, ಪುರಸಭೆ, ಚನ್ನಗಿರಿ.



ಕರ್ನಾಟಕ ಸರ್ಕಾರ

## ಪುರಸಭಾ ಕಾರ್ಯಾಲಯ, ಚನ್ನಗಿರಿ – 577213

ಕ್ರಮಾಂಕ: ಪು.ಸ.ಚ/ಮ.ಶಾ/ಸಿ.ಆರ್/01/2025-26 ದಿನಾಂಕ : 06-09-2025

### ಬಹಿರಂಗ ಹರಾಜು ಪ್ರಕಟಣೆ

ಕ.ಪೌ.ಅ-1964 ರ ಪ್ರ-72 (1) ಮತ್ತು (2) ಹಾಗೂ Municipal(Guidance of Copies and Misc Provision) Rules 1966 ರ ನಿಯಮ 39 ರ ಪ್ರಕಾರ)

ಈ ಮೂಲಕ ಚನ್ನಗಿರಿ ಪುರಸಭೆಯ ಸಮಸ್ತ ನಾಗರೀಕರಿಗೆ ತಿಳಿಯಪಡಿಸುವುದೇನೆಂದರೆ, ಚನ್ನಗಿರಿ ಪಟ್ಟಣದ ವ್ಯಾಪ್ತಿಯಲ್ಲಿ ಬರುವ ಈ ಕೆಳಗಿನ ಕೋಷ್ಠಕದಲ್ಲಿ ನಮೂದಿಸಿದ ವಾಣಿಜ್ಯ ಮಳಿಗೆಗಳನ್ನು ಮಾನ್ಯ ಜಿಲ್ಲಾಧಿಕಾರಿಗಳು ದಾವಣಗೆರೆ ಜಿಲ್ಲೆ ದಾವಣಗೆರೆ ರವರ ಅಧಿಕೃತ ಜ್ಞಾಪನಾ ಪತ್ರಗಳ ಸಂಖ್ಯೆ: 1) ಜಿ.ನ.ಕೋ.ದಾ. (2)/ಸಿ.ಆರ್/768/2022-23 ದಿನಾಂಕ: 28-08-2025 2) ಜಿ.ನ.ಕೋ.ದಾ. (2)/ಸಿ.ಆರ್/768/2022-23 ದಿನಾಂಕ: 26-08-2025 ಮತ್ತು 3) ಜಿ.ನ.ಕೋ.ದಾ. (2)/ಸಿ.ಆರ್/417/2022-23 ದಿನಾಂಕ: 19-08-2025 ರನ್ವಯ ಸರ್ಕಾರದ ಸುತ್ತೋಲೆ ಅನ್ವಯ ನಿಯಮಾನುಸಾರವಾಗಿ ಮಳಿಗೆಯನ್ನು ಹರಾಜು ಮಾಡಿ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿರುವಂತೆ ಮಾನ್ಯ ಸರ್ಕಾರದ ಅಧೀನಕಾರ್ಯದರ್ಶಿಗಳು ನಗರಾಭಿವೃದ್ಧಿ ಇಲಾಖೆ ಬೆಂಗಳೂರು ರವರ ಸುತ್ತೋಲೆ ಸಂಖ್ಯೆ: ನಅಇ/301/ಜಿಇಎಲ್/2017, ದಿನಾಂಕ: 19-07-2019 ರ ಪ್ರಕಾರ ಮಾಸಿಕ ಬಾಡಿಗೆ ಆಧಾರದ ಮೇಲೆ 12 ವರ್ಷಗಳ ಅವಧಿಗೆ ಷರತ್ತಿಗೊಳಪಟ್ಟು ಬಹಿರಂಗ ಹರಾಜನ್ನು "ದಿನಾಂಕ: 24-09-2025 ನೇ ಬುಧವಾರ ಬೆಳಿಗ್ಗೆ 12-00 ಗಂಟೆಗೆ ಪುರಸಭೆ ಕಾರ್ಯಾಲಯದ ಆವರಣದಲ್ಲಿ ಬಹಿರಂಗ ಹರಾಜು ನಡೆಸಲಾಗುವುದು" ಪ್ರಯುಕ್ತ ಬಹಿರಂಗ ಹರಾಜಿನಲ್ಲಿ ಭಾಗವಹಿಸಲು ಇಚ್ಛೆಯುಳ್ಳವರು ಸಂಬಂಧಿಸಿದ ಮಳಿಗೆಗಳಿಗೆ ಸೂಚಿಸಿದ ಠೇವಣಿಯನ್ನು ರಾಷ್ಟ್ರೀಕೃತ ಬ್ಯಾಂಕಿನಿಂದ ಮುಖ್ಯಾಧಿಕಾರಿ ಪುರಸಭೆ ಚನ್ನಗಿರಿ ರವರ ಹೆಸರಿನಲ್ಲಿ ಡಿ.ಡಿ. ಪಡೆದು ಪುರಸಭೆ ನಿಗದಿಪಡಿಸಿದ ಅರ್ಜಿಯೊಂದಿಗೆ ಲಗತ್ತಿಸಿ ದಿನಾಂಕ: 23-09-2025 ರ ಸಂಜೆ 5-30 ಗಂಟೆ ಒಳಗಾಗಿ ಪುರಸಭೆ ಕಛೇರಿಗೆ ಸಲ್ಲಿಸತಕ್ಕದ್ದು, ಸದರಿ ಮಳಿಗೆಗಳಿಗೆ ನಿಗಧಿಪಡಿಸಿರುವ ಮರುಪಾವತಿ ಠೇವಣಿಯಲ್ಲಿ ಯಾವುದೇ ವಿನಾಯಿತಿ ಇರುವುದಿಲ್ಲ ಮತ್ತು ಹೆಚ್ಚಿನ ಮಾಹಿತಿಗಾಗಿ ಕಂದಾಯ ಶಾಖೆಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ತಿಳಿದುಕೊಳ್ಳಬಹುದು.

**ಚನ್ನಗಿರಿ ಪುರಸಭೆ ವ್ಯಾಪ್ತಿಯಲ್ಲಿನ ಹಾಲಸ್ವಾಮಿ ಸಮುದಾಯ ಭವನದ ಮುಂಭಾಗದ 10ನೇ ಹಣಕಾಸು ಯೋಜನೆಯಡಿಯಲ್ಲಿ ನಿರ್ಮಿಸಿರುವ ವಾಣಿಜ್ಯ ಮಳಿಗೆ ಸಂಖ್ಯೆ: 01 ಮತ್ತು 02 (ಮೊದಲನೇ ಮಹಡಿ)**

| ಕ್ರ. ಸಂ. | ಮಳಿಗೆಗಳ ಸಂಖ್ಯೆ | ಮಳಿಗೆಗಳ ಅಳತೆ ಅಡಿಗಳಲ್ಲಿ | ಮಾಸಿಕ ಬಾಡಿಗೆ (ಪ್ರತಿ ತಿಂಗಳಿಗೆ) | ಮರುಪಾವತಿ ಠೇವಣಿ | ಹರಾಜಿನಲ್ಲಿ ಭಾಗವಹಿಸಲು ಪಾವತಿಸಬೇಕಾದ ಠೇವಣಿ ಮೊತ್ತ | ಮೀಸಲಾತಿ |
|---|---|---|---|---|---|---|
| 1 | 01 | 14*8 | 4,000-00 | 60,000-00 | 60,000-00 | ಸಾಮಾನ್ಯ |
| 2 | 02 | 14*8 | 4,000-00 | 60,000-00 | 60,000-00 | ಪರಿಶಿಷ್ಟ ಜಾತಿ |

**ಚನ್ನಗಿರಿ ಪುರಸಭೆ ವ್ಯಾಪ್ತಿಯಲ್ಲಿನ ಬಸ್‌ಸ್ಟಾಂಡ್ ಒಳಭಾಗದ 10ನೇ ಹಣಕಾಸು ಯೋಜನೆಯಡಿಯಲ್ಲಿ ನಿರ್ಮಿಸಿರುವ ವಾಣಿಜ್ಯ ಮಳಿಗೆ ಸಂಖ್ಯೆ: 11 (ನೆಲಮಹಡಿ)**

| ಕ್ರ ಸಂ | ಮಳಿಗೆ ಸಂಖ್ಯೆ | ಮಳಿಗೆಯ ಅಳತೆ ಅಡಿಗಳಲ್ಲಿ | ಮಾಸಿಕ ಬಾಡಿಗೆ (ಪ್ರತಿ ತಿಂಗಳಿಗೆ) | ಮರುಪಾವತಿ ಠೇವಣಿ | ಹರಾಜಿನಲ್ಲಿ ಭಾಗವಹಿಸಲು ಪಾವತಿಸಬೇಕಾದ ಠೇವಣಿ ಮೊತ್ತ | ಮೀಸಲಾತಿ |
|---|---|---|---|---|---|---|
| 1 | 11 | 4*12 | 1,200-00 | 65,000-00 | 65,000-00 | ಸಾಮಾನ್ಯ |

ಸಹಿ/- ಮುಖ್ಯಾಧಿಕಾರಿ, ಪುರಸಭೆ, ಚನ್ನಗಿರಿ. ಸಹಿ/- ಸ್ಥಾಯಿ ಸಮಿತಿ ಅಧ್ಯಕ್ಷರು, ಪುರಸಭೆ, ಚನ್ನಗಿರಿ. ಸಹಿ/- ಉಪಾಧ್ಯಕ್ಷರು, ಪುರಸಭೆ, ಚನ್ನಗಿರಿ ಸಹಿ/- ಅಧ್ಯಕ್ಷರು, ಪುರಸಭೆ, ಚನ್ನಗಿರಿ.

# ಆರು ಹಡೆದವಳ ಮುಂದೆ ಮೂರು ಹಡೆದವಳು ಹೇಳಿದಂತಾಯಿತು

## ನಿಮ್ಮ ನಡವಳಿಕೆ ಪಕ್ಷದ ಪರಂಪರಾಗತ ದರ್ಪ-ಅಹಂಗೆ ಸಾಕ್ಷಿ!'



**ಬೆಂಗಳೂರು:** ತೊಗರಿ ಬೇಳೆ ಹಾಳಾಗಿ ನಷ್ಟವಾಗಿದೆ ಎಂದು ಅಳಲು ತೋಡಿಕೊಂಡ ರೈತರ ಮೇಲೆ ದಬ್ಬಾಳಿಕೆ ಮಾಡಿದ ವಿಷಯಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಮಲ್ಲಿಕಾರ್ಜುನ ಖರ್ಗೆ ವಿರುದ್ಧಾ ವಾಗ್ದಾಳಿ ನಡೆಸಿದ್ದಾರೆ.

ಈ ಸಂಬಂಧ ತಮ್ಮ ಎಕ್ಸ್ ಖಾತೆಯಲ್ಲಿ ಕಿಡಿಕಾರಿರುವ ಕುಮಾರಸ್ವಾಮಿ, ರೈತರ ಬಗ್ಗೆ ನಿಮ್ಮ ನಡವಳಿಕೆ ಕಂಡು ಬಹಳ ಬೇಸರವಾಯಿತು. ನಿಮ್ಮಂತಹ ಹಿರಿಯರಿಂದ ಇಂಥ ವರ್ತನೆಯನ್ನು ನಾನು ಖಂಡಿತ ನಿರೀಕ್ಷೆ ಮಾಡಿರಲಿಲ್ಲ. ಕಷ್ಟದಲ್ಲಿರುವ ರೈತ ನಿಮ್ಮಂಥವರ ಬಳಿ ಬಂದು ದುಃಖ ತೋಡಿಕೊಳ್ಳದೆ ಇನ್ನು ಯಾರ ಬಳಿ ಹೋಗಿ ಹೇಳಿಕೊಳ್ಳಬೇಕು? ಎಂದು ಪ್ರಶ್ನಿಸಿದ್ದಾರೆ.

ನೀವು ರಾಜ್ಯಸಭೆ ಪ್ರತಿಪಕ್ಷ ನಾಯಕರು ಹಾಗೂ ಅಖಿಲ ಭಾರತ ಕಾಂಗ್ರೆಸ್ ಸಮಿತಿ ಅಧ್ಯಕ್ಷರು. ಇದೆಲ್ಲವನ್ನೂ ತಾವು ಮರೆತು ಮಾತನಾಡಿದ್ದೀರಿ! ಇದು ತಮಗೆ ಭೂಷಣವಲ್ಲ.

ದುಃಖ ಹೇಳಿಕೊಳ್ಳಲು ಬಂದ ರೈತನ ಮೇಲೆ ಈ ಪರಿಯ ದರ್ಪ ಅಗತ್ಯವಿರಲಿಲ್ಲ. ನೀವೂ ತೊಗರಿ ರೈತರೇ ಆಗಿರಬಹುದು. ಆದರೆ 40 ಎಕರೆಯಲ್ಲಿ ಬೆಳೆಯುವ ತಮಗೂ, ಒಂದು ಅಥವಾ ಎರಡು ಎಕರೆಯಲ್ಲಿ ಬೆಳೆಯುವ ಆ ಬಡರೈತನಿಗೂ ಹೋಲಿಕೆಯೇ? ನಷ್ಟವನ್ನು ಭರಿಸುವ ಶಕ್ತಿ ನಿಮಗಿರುತ್ತದೆ, ರೈತನಿಗೆ ಆ ಶಕ್ತಿ ಇರಬೇಕಲ್ಲವೇ? ಎಂದು ಕುಮಾರಸ್ವಾಮಿ ಹೇಳಿದ್ದಾರೆ.

ಬೆಂಗಳೂರು: ತೊಗರಿ ಬೇಳೆ ಹಾಳಾಗಿ ನಷ್ಟವಾಗಿದೆ ಎಂದು ಅಳಲು ತೋಡಿಕೊಂಡ ರೈತರ ಮೇಲೆ ದಬ್ಬಾಳಿಕೆ ಮಾಡಿದ ವಿಷಯಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಮಲ್ಲಿಕಾರ್ಜುನ ಖರ್ಗೆ ವಿರುದ್ಧಾ ವಾಗ್ದಾಳಿ ನಡೆಸಿದ್ದಾರೆ.

ಈ ಸಂಬಂಧ ತಮ್ಮ ಎಕ್ಸ್ ಖಾತೆಯಲ್ಲಿ ಕಿಡಿಕಾರಿರುವ ಕುಮಾರಸ್ವಾಮಿ, ರೈತರ ಬಗ್ಗೆ ನಿಮ್ಮ ನಡವಳಿಕೆ ಕಂಡು ಬಹಳ ಬೇಸರವಾಯಿತು. ನಿಮ್ಮಂತಹ ಹಿರಿಯರಿಂದ ಇಂಥ ವರ್ತನೆಯನ್ನು ನಾನು ಖಂಡಿತ ನಿರೀಕ್ಷೆ ಮಾಡಿರಲಿಲ್ಲ. ಕಷ್ಟದಲ್ಲಿರುವ ರೈತ ನಿಮ್ಮಂಥವರ ಬಳಿ ಬಂದು ದುಃಖ ತೋಡಿಕೊಳ್ಳದೆ ಇನ್ನು ಯಾರ ಬಳಿ ಹೋಗಿ ಹೇಳಿಕೊಳ್ಳಬೇಕು? ಎಂದು ಪ್ರಶ್ನಿಸಿದ್ದಾರೆ.

ನೀವು ರಾಜ್ಯಸಭೆ ಪ್ರತಿಪಕ್ಷ ನಾಯಕರು ಹಾಗೂ ಅಖಿಲ ಭಾರತ ಕಾಂಗ್ರೆಸ್ ಸಮಿತಿ ಅಧ್ಯಕ್ಷರು. ಇದೆಲ್ಲವನ್ನೂ ತಾವು ಮರೆತು ಮಾತನಾಡಿದ್ದೀರಿ! ಇದು ತಮಗೆ ಭೂಷಣವಲ್ಲ.

ದುಃಖ ಹೇಳಿಕೊಳ್ಳಲು ಬಂದ ರೈತನ ಮೇಲೆ ಈ ಪರಿಯ ದರ್ಪ ಅಗತ್ಯವಿರಲಿಲ್ಲ. ನೀವೂ ತೊಗರಿ ರೈತರೇ ಆಗಿರಬಹುದು. ಆದರೆ 40 ಎಕರೆಯಲ್ಲಿ ಬೆಳೆಯುವ ತಮಗೂ, ಒಂದು ಅಥವಾ ಎರಡು ಎಕರೆಯಲ್ಲಿ ಬೆಳೆಯುವ ಆ ಬಡರೈತನಿಗೂ ಹೋಲಿಕೆಯೇ? ನಷ್ಟವನ್ನು ಭರಿಸುವ ಶಕ್ತಿ ನಿಮಗಿರುತ್ತದೆ, ರೈತನಿಗೆ ಆ ಶಕ್ತಿ ಇರಬೇಕಲ್ಲವೇ? ಎಂದು ಕುಮಾರಸ್ವಾಮಿ ಹೇಳಿದ್ದಾರೆ.

### ಹಳೇ ಮೈಸೂರು ಭಾಗದ ಫಲವತ್ತಾದ ನೆಲ 'ಕೋಮು ಶಕ್ತಿ'ಗಳ ಟಾರ್ಗೆಟ್:

# ಸಕ್ಕರೆ ನಾಡಲ್ಲಿ ಲೋಕಲ್ ಪಾಲಿಟಿಕ್ಸ್! ಎಚ್ಚೆತ್ತುಕೊಳ್ಳದಿದ್ದರೇ JDS ಫಿನೀಶ್!



**ಬೆಂಗಳೂರು:** ಜಾತ್ಯತೀತ ಮತ್ತು ಬಹುತ್ವ ಸಮಾಜಕ್ಕೆ ಹೆಸರುವಾಸಿಯಾದ ಹಳೇ ಮೈಸೂರು ಭಾಗದ ಮದ್ದೂರಿನಲ್ಲಿ ನಡೆದ ಗಣೇಶ ವಿಸರ್ಜನೆ ಮೆರವಣಿಗೆಯ ಸಂದರ್ಭದಲ್ಲಿ ಹಿಂಸಾಚಾರ ಭುಗಿಲೆದ್ದಿತು. ಕಲ್ಲು ತೂರಾಟದಿಂದ ಆರು ಜನ ಗಾಯಗೊಂಡು 20 ಕ್ಕೂ ಹೆಚ್ಚು ಜನರನ್ನು ಬಂಧಿಸಲಾಯಿತು ಎಂದು ವರದಿಯಾಗಿದೆ.

ಈ ದಾಳಿಯು ರಾಮ್-ರಹೀಮ್ ನಗರ ಪ್ರದೇಶದಿಂದ, ವಿಶೇಷವಾಗಿ ಮಸೀದಿ ಮತ್ತು ಸುತ್ತಮುತ್ತಲಿನ ಟೆರೇಸ್‌ಗಳ ಮೇಲಿಂದ ನಡೆಯಿತು ಎಂದು ಸ್ಥಳೀಯರು ಹೇಳಿದ್ದಾರೆ. ಈ ಘಟನೆಯಿಂದ ಕೆರಳಿದ ಹಿಂದೂಗಳು ಬೃಹತ್ ಪ್ರತಿಭಟನೆ ನಡೆಸುವಂತೆ ಮಾಡಿತು, ಜೊತೆಗೆ ಪೊಲೀಸರ ನಿಷ್ಕ್ರಿಯತೆ ಬಗ್ಗೆ ಆಕ್ರೋಶ ವ್ಯಕ್ತವಾಗಿದೆ.

ದಶಕಗಳಿಂದ ಕೋಮು ಹಿಂಸಾಚಾರದಿಂದ ಮುಕ್ತವಾಗಿದ್ದ ಈ ಪ್ರದೇಶದಲ್ಲಿ ವೇಗವಾಗಿ ಕೋಮು ದ್ವೇಷ ಹರಡಿ ರಣರಂಗವಾಗುತ್ತಿದೆ. ನಾಗಮಂಗಲ, ಕೆರೆಗೋಡು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಉದ್ವಿಗ್ನತೆ ಭುಗಿಲೆದ್ದಿದೆ.

ಒಂದು ಕಾಲದಲ್ಲಿ ಕರಾವಳಿ ಕರ್ನಾಟಕಕ್ಕೆ ಸೀಮಿತವಾಗಿದ್ದ ಕೋಮು ಗಲಭೆಈಗ ಹಳೆಯ ಮೈಸೂರು ಬೆಲ್ಟ್‌ಗೂ ಹರಡುತ್ತಿದೆ, ಜೆಡಿಎಸ್ ಎನ್‌ಡಿಎ ಮಿತ್ರಪಕ್ಷವಾಗಿ ಬಿಜೆಪಿಯೊಂದಿಗೆ ಕೈಜೋಡಿಸಿದ ನಂತರ ಕೋಮು ಶಕ್ತಿಗಳು ಈ ಪ್ರದೇಶವನ್ನು ಉದ್ದೇಶಪೂರ್ವಕವಾಗಿ ಗುರಿಯಾಗಿಸಿಕೊಂಡಿವೆ ಎಂಬ ಭಯವನ್ನು ಹುಟ್ಟುಹಾಕಿದೆ.

ಭಾರತೀಯ ಜನತಾ ಪಕ್ಷವು ಈ ಘಟನೆಯನ್ನು ಸದುಪಯೋಗಪಡಿಸಿಕೊಳ್ಳುತ್ತಿದೆ. ಕಾಂಗ್ರೆಸ್ ಸರ್ಕಾರವು "ಓಲೈಕೆ ರಾಜಕೀಯ"ದಲ್ಲಿ ತೊಡಗಿಸಿಕೊಂಡಿದೆ ಮತ್ತು ಹಿಂದೂ ಧಾರ್ಮಿಕ ಸಂಪ್ರದಾಯಗಳನ್ನು ರಕ್ಷಿಸುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದೆ. ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಎಐ ತನಿಖೆಗೆ ಒತ್ತಾಯಿಸಿದ್ದು, ಮದ್ದೂರು ಹಿಂಸಾಚಾರವು ಹಿಂದೂಗಳ ಮೇಲಿನ ದಾಳಿಯ ಮಾದರಿಯ ಭಾಗವಾಗಿದೆ ಮತ್ತು ಪೊಲೀಸರು ದಾಳಿಕೋರರ ಬಗ್ಗೆ ಮೃದುವಾಗಿದ್ದಾರೆ ಎಂದು ಆರೋಪಿಸಿದರು.


ವಿಪಕ್ಷ ನಾಯಕ ಆರ್. ಅಶೋಕ್ ಮಾತನಾಡಿ, ಕಾಂಗ್ರೆಸ್ "ಹಿಂದೂ ವಿರೋಧಿ" ಮತ್ತು ಸಡಿಲ ಆಡಳಿತದ ಮೂಲಕ "ದೇಶ ವಿರೋಧಿ ಶಕ್ತಿಗಳಿಗೆ" ಅನುವು ಮಾಡಿಕೊಡುತ್ತಿದೆ ಎಂದು ಆರೋಪಿಸಿದರು. ಕಾಂಗ್ರೆಸ್ ಆಡಳಿತದಲ್ಲಿ ಮಂಡ್ಯದಿಂದ ಧಾರವಾಡ, ಬಾಗಲಕೋಟೆಯವರೆಗೆ ಹಿಂದೂ ಹಬ್ಬಗಳ ಸಮಯದಲ್ಲಿ ನಡೆಯುತ್ತಿರುವ ಅಡ್ಡಿಗಳ ಸರಮಾಲೆಗಳ ಬಗ್ಗೆ ಬಿಜೆಪಿ ಪ್ರಶ್ನಿಸಿದೆ, ಇದು ಕಾನೂನು ಮತ್ತು ಸುವ್ಯವಸ್ಥೆ ಹದಗೆಡುತ್ತಿರುವುದಕ್ಕೆ ಸಾಕ್ಷಿಯಾಗಿದೆ ಎಂದು ದೂರಿದೆ.ಮುಂಬರುವ ಚುನಾವಣೆಗಳಿಗೆ ಮುಂಚಿತವಾಗಿ ರಾಜಕೀಯ ಲಾಭಕ್ಕಾಗಿ ಸಮುದಾಯಗಳನ್ನು ಧ್ರುವೀಕರಿಸಲು ಬಿಜೆಪಿ ಧರ್ಮವನ್ನು ಬಳಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕೆಪಿಸಿಸಿ ವಕ್ತಾರ ಎಂ. ಲಕ್ಷ್ಮಣ ಆರೋಪಿಸುತ್ತಿದ್ದಾರೆ.ಬಿಜೆಪಿ ಆಡಳಿತದಲ್ಲಿ (2019-2023) ನಡೆದ 752 ಕೋಮು ಘಟನೆಗಳನ್ನು ಲಕ್ಷ್ಮಣ್ ಉಲ್ಲೇಖಿಸಿದ್ದಾರೆ, ವಿರೋಧ ಪಕ್ಷದ ನಾಯಕರ ಪ್ರಚೋದನಕಾರಿ ಭಾಷಣಗಳನ್ನು ದೃಢವಾಗಿ ಎದುರಿಸಲಾಗುವುದು ಎಂದು ಎಚ್ಚರಿಸಿದರು. "ಧರ್ಮವನ್ನು ಲೆಕ್ಕಿಸದೆ ನಾವು ಅಪರಾಧಿಗಳ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ" ಎಂದು ಸಿದ್ದರಾಮಯ್ಯ ಹೇಳಿದರು.

# ಬೋನಿನಲ್ಲಿ ಕರು ಇದ್ದರೂ ತಿನ್ನದೆ ಮಮಕಾರ ತೋರಿದ ಚಿರತೆ

**ಹೆಚ್.ಡಿ.ಕೋಟೆ:** ಹಸಿದ ಚಿರತೆಗೆ ಸಾಧು ಪ್ರಾಣಿಗಳು ಸಿಕ್ಕರೆ ಸಾಕು, ಬಗೆದು ತಿನ್ನುತ್ತವೆ. ಆದರೆ ಬೋನಿನಲ್ಲಿ ಹಸುವಿನ ಕರು ಇದ್ದರೂ ಸಹ ಅದನ್ನು ತಿನ್ನದೆ ತಾಯಿಯಂತೆ ಮಮಕಾರ ತೋರಿಸಿ ಅಚ್ಚರಿ ಮೂಡಿಸಿರುವ ಘಟನೆ ಪಟ್ಟಣದಲ್ಲಿ ನಡೆದಿದೆ.

ಕಳೆದ ಕೆಲವು ದಿನಗಳಿಂದ ಪಟ್ಟಣಕ್ಕೆ ಹೊಂದಿಕೊಂಡಂತಿರುವ ವಿವಿಧ ಗ್ರಾಮಗಳಲ್ಲಿ ಚಿರತೆಗಳ ಹಾವಳಿ ಹೆಚ್ಚಾಗಿದ್ದು, ಸೆರೆ ಹಿಡಿಯುವಂತೆ ಗ್ರಾಮಸ್ಥರು ಅರಣ್ಯ ಇಲಾಖೆಗೆ ಮನವಿ ಮಾಡಿದ್ದರು.

ಕಳೆದ 15 ದಿನಗಳ ಹಿಂದೆ ಎತ್ತನಾಯ್ಕರ ಎಂಬುವರ ಜಮೀನಿನಲ್ಲಿ ಚಿರತೆಯೊಂದು ಹಸುವಿನ ಮೇಲೆ ದಾಳಿ ಮಾಡಿತ್ತು. ಇದರಿಂದ ರೈತರು ಕಂಗಾಲಾಗಿದ್ದರು.



ಚಿರತೆ ಸೆರೆಗಾಗಿ ಹೆಚ್.ಡಿ.ಕೋಟೆ ಪ್ರಾದೇಶಿಕ ಅರಣ್ಯ ಇಲಾಖಾಧಿಕಾರಿಗಳು ಬೋನಿಟ್ಟಿದ್ದರು. ಅದರಲ್ಲಿ ಸೀಮೆಹಸುವಿನ ಕರುವೊಂದನ್ನು ಕಟ್ಟಿ ಚಿರತೆ ಸೆರೆಗೆ ಪ್ಲಾನ್ ಮಾಡಿದ್ದರು. ಆಹಾರ ಅರಸಿ ಬಂದ ಚಿರತೆ ಬೋನಿನಲ್ಲಿ ಸೆರೆಯಾಗಿದೆ. ಆದರೆ ಬೋನಿನಲ್ಲೇ ಇದ್ದ ಕರುವನ್ನು ತಿನ್ನದೆ ಹಾಗೆಯೇ ಬಿಟ್ಟಿದೆ.

ಬೆಳಿಗ್ಗೆ ಗ್ರಾಮಸ್ಥರು ಬೋನಿನ ಬಳಿ ಬಂದು ನೋಡಿದಾಗ ಚಿರತೆ ಸೆರೆಯಾಗಿದ್ದು, ಜೊತೆಗೆ ಕರುವೂ ಕೂಡ ಜೀವಂತವಾಗಿದ್ದುದು ಅಚ್ಚರಿ ಮೂಡಿಸಿದೆ.ನರಭಕ್ಷಕ ಚಿರತೆ ಕರುವನ್ನು ತಿನ್ನದೆ ತಾಯಿ ಮಮತೆಯನ್ನು ತೋರಿದ್ದು, ವ್ಯಾಘ್ರ ಪ್ರಾಣಿಗಳಿಗೂ ಸಹ ಮಮತೆ ಇರುತ್ತದೆ ಎಂಬುದಕ್ಕೆ ಇದೊಂದು ನಿದರ್ಶನವಾಗಿದೆ.

# ಉಪರಾಷ್ಟ್ರಪತಿ ಚುನಾವಣೆ: ನಮ್ಮ ಅಭ್ಯರ್ಥಿ ಪರವಾಗಿ ಆತ್ಮಸಾಕ್ಷಿಯ ಮತ ಕೇಳಿದ್ದೇವೆ

**ಕೊಯಮತ್ತೂರು:** ಇಂಡಿಯಾ ಒಕ್ಕೂಟ ಒಟ್ಟಾಗಿ ಉಪ ರಾಷ್ಟ್ರಪತಿ ಚುನಾವಣೆ ಎದುರಿಸಲಿದೆ. ನಾವು ಆತ್ಮಸಾಕ್ಷಿಯ ಮತಗಳನ್ನು ಕೋರಿದ್ದೇವೆ. ಇಂಡಿಯಾ ಒಕ್ಕೂಟ ಮತ್ತು ವಿರೋಧ ಪಕ್ಷಗಳು ಓಆಂ ಅಭ್ಯರ್ಥಿ ಸಿ.ಪಿ ರಾಧಾಕೃಷ್ಣನ್ ವಿರುದ್ಧ ಮತ ಚಲಾಯಿಸುತ್ತವೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.



ತಮಿಳುನಾಡಿನ ಕೊಯಮತ್ತೂರು ವಿಮಾನ ನಿಲ್ದಾಣದಲ್ಲಿ ಮಂಗಳವಾರದಂದು ಉಪರಾಷ್ಟ್ರಪತಿ ಚುನಾವಣೆಯ ಬಗ್ಗೆ ಮಾತನಾಡಿದ ಅವರು, ಉಪರಾಷ್ಟ್ರಪತಿ ಚುನಾವಣೆಯಲ್ಲಿ ಅಡ್ಡ ಮತದಾನವಾಗುವ ಸಾಧ್ಯತೆ ಇದೆಯೇ ಎಂದು ಕೇಳಿದಾಗ, ನಾನು ಆತ್ಮಸಾಕ್ಷಿಯ ಮತಗಳ ಬಗ್ಗೆ ನಂಬಿಕೆಯಿಟ್ಟಿದ್ದೇನೆ. ಅಡ್ಡ ಮತದಾನದ ಬಗ್ಗೆ ನಾನು ಮಾತನಾಡಲು ಹೋಗುವುದಿಲ್ಲ" ಎಂದು ಹೇಳಿದರು.

ಸುಪ್ರೀಂ ಕೋರ್ಟ್ ಆಧಾರ್ ಗುರುತಿನ ಚೀಟಿ 12ನೇ ದಾಖಲೆ ಎಂದು ಪರಿಗಣಿಸಿರುವ ಬಗ್ಗೆ ಕೇಳಿದಾಗ, "ಹೌದು, ಆಧಾರ್ ಗುರುತಿನ ಚೀಟಿ ಪ್ರತಿಯೊಬ್ಬ ಭಾರತೀಯರಿಗೂ ಅತ್ಯವಶ್ಯವಾದ ದಾಖಲೆ. ಈ ಹಿಂದಿನ ಯುಪಿಎ ಸರ್ಕಾರ ಜಾರಿಗೆ ತಂದ ಈ ಯೋಜನೆ ಪ್ರತಿಯೊಬ್ಬ ನಾಗರಿಕರಿಗೂ ಅನುಕೂಲ ಮಾಡಿದೆ" ಎಂದು ಹೇಳಿದರು.

# ನೇಪಾಳ ಹಿಂಸಾತ್ಮಕ ಪ್ರತಿಭಟನೆ : ನೆರವು ನೀಡುವಂತೆ ಅಂಗಲಾಚಿದ ಭಾರತೀಯ ಮಹಿಳೆ



**ಕಠ್ಮಂಡು:** ನೇಪಾಳದಲ್ಲಿ ನಡೆಯುತ್ತಿರುವ ಜನರಲ್ ಝಡ್ ಪ್ರತಿಭಟನೆಗಳ ಸಂದರ್ಭದಲ್ಲಿ ಪೋಖರಾದಿಂದ ಒಂದು ವೀಡಿಯೊ ಹೊರಬಂದಿದ್ದು, ಇದರಲ್ಲಿ ಭಾರತೀಯ ಮಹಿಳೆಯೊಬ್ಬರು ಭಾರತ ಸರ್ಕಾರದ ಸಹಾಯಕ್ಕಾಗಿ ಅಂಗಲಾಚುತ್ತಿರುವುದು ವೈರಲ್ ಆಗಿದೆ. ಉಪಸ್ಥ ಗಿಲ್ ಎಂದು ತನ್ನನ್ನು ತಾನು ಪರಿಚಯಿಸಿಕೊಂಡ ಮಹಿಳೆ, ಪ್ರತಿಭಟನಾಕಾರರು ತಾನು ತಂಗಿದ್ದ ಹೋಟೆಲ್‌ಗೆ ಬೆಂಕಿ ಹಚ್ಚಿದ್ದಾರೆ ಎಂದು ಹೇಳಿಕೊಂಡಿದ್ದಾರೆ. ಸ್ಪಾದಲ್ಲಿದ್ದಾಗ ಪ್ರತಿಭಟನಾಕಾರರು ತಾನು ತಂಗಿದ್ದ ಹೋಟೆಲ್‌ಗೆ ಬೆಂಕಿ ಹಚ್ಚಿದರು ಮತ್ತು ನಂತರ ಕೋಲುಗಳನ್ನು ಹೊತ್ತ ಗುಂಪೊಂದು ತನ್ನ ಹಿಂದೆ ಓಡಿತು, ಇದರಿಂದ ತಾನು ಸುರಕ್ಷತೆಗಾಗಿ ಪಲಾಯನ ಮಾಡಬೇಕಾಯಿತು ಎಂದು ಆರೋಪಿಸಿದ್ದಾರೆ.ನನ್ನ ಹೆಸರು ಉಪಸ್ಥಾ ಗಿಲ್, ಮತ್ತು ನಾನು ಈ ವೀಡಿಯೋವನ್ನು ಪ್ರಫುಲ್ ಗಾರ್ಗ್ ಅವರಿಗೆ ಕಳುಹಿಸುತ್ತಿದ್ದೇನೆ. ದಯವಿಟ್ಟು ನಮಗೆ ಸಹಾಯ ಮಾಡುವಂತೆ ನಾನು ಭಾರತೀಯ ರಾಯಭಾರ ಕಚೇರಿಯನ್ನು ವಿನಂತಿಸುತ್ತೇನೆ. ನಮಗೆ ಸಹಾಯ ಮಾಡಬಹುದಾದ ಎಲ್ಲರೂ ದಯವಿಟ್ಟು ಸಹಾಯ ಮಾಡಿ. ನಾನು ಇಲ್ಲಿ ನೇಪಾಳದ ಪೋಖರಾದಲ್ಲಿ ಸಿಲುಕಿಕೊಂಡಿದ್ದೇನೆ.ನಾನು ವಾಲಿಬಾಲ್ ಲೀಗ್ ಆಯೋಜಿಸಲು ಇಲ್ಲಿಗೆ ಬಂದಿದ್ದೆ, ಮತ್ತು ಪ್ರಸ್ತುತ, ನಾನು ತಂಗಿದ್ದ ಹೋಟೆಲ್ ಸುಟ್ಟುಹೋಗಿದೆ. ನನ್ನ ಎಲ್ಲಾ ಸಾಮಾನುಗಳು, ನನ್ನ ಎಲ್ಲಾ ವಸ್ತುಗಳು ನನ್ನ ಕೋಣೆಯಲ್ಲಿದ್ದವು ಮತ್ತು ಇಡೀ ಹೋಟೆಲ್ ಬೆಂಕಿಗೆ ಆಹುತಿಯಾಗಿದೆ. ನಾನು ಸ್ಪಾದಲ್ಲಿದ್ದೆ ಮತ್ತು ಜನರು ದೊಡ್ಡ ಕೋಲುಗಳೊಂದಿಗೆ ನನ್ನ ಹಿಂದೆ ಓಡುತ್ತಿದ್ದರು ಮತ್ತು ನಾನು ನನ್ನ ಪ್ರಾಣಾಪಾಯದಿಂದ ತಪ್ಪಿಸಿಕೊಳ್ಳುವಲ್ಲಿ ಯಶಸ್ವಿಯಾದೆ ಎಂದು ಭಾರತೀಯ ಮಹಿಳೆ ವೀಡಿಯೋದಲ್ಲಿ ಹೇಳುತ್ತಿರುವುದು ಕೇಳಿಬರುತ್ತಿದೆ.ನೇಪಾಳದಲ್ಲಿ ಸರ್ಕಾರ ಸಾಮಾಜಿಕ ಮಾಧ್ಯಮಗಳ ಮೇಲಿನ ನಿಷೇಧದ ವಿರುದ್ಧ ಪ್ರಾರಂಭವಾದ ವಿದ್ಯಾರ್ಥಿಗಳ ನೇತೃತ್ವದ ಜನರಲ್ ಝಡ್ ಪ್ರತಿಭಟನೆಗಳು, ಪ್ರಧಾನಿ ಕೆ.ಪಿ.ಶರ್ಮಾ ಒಲಿ ನೇತೃತ್ವದ ಸರ್ಕಾರ ಮತ್ತು ದೇಶದ ರಾಜಕೀಯ ಗಣ್ಯರ ವಿರುದ್ಧ ಸಾಮಾನ್ಯ ಜನರ ಬಗ್ಗೆ ಭ್ರಷ್ಟಾಚಾರ ಮತ್ತು ನಿರಾಸಕ್ತಿಯ ಕುರಿತು ಹೆಚ್ಚುತ್ತಿರುವ ಸಾರ್ವಜನಿಕ ಟೀಕೆಗಳನ್ನು ಪ್ರತಿಬಿಂಬಿಸುವ ದೊಡ್ಡ ಅಭಿಯಾನವಾಗಿ ಮಾರ್ಪಟ್ಟಿದೆ.ಸಾಮಾಜಿಕ ಮಾಧ್ಯಮದ ಮೇಲಿನ ನಿಷೇಧವನ್ನು ತೆಗೆದು ಹಾಕಲಾಗಿದ್ದರೂ, ಭಾರಿ ಪ್ರತಿಭಟನೆಗಳ ನಡುವೆಯೂ ಎರಡನೇ ದಿನವೇ ಓಲಿ ರಾಜೀನಾಮೆ ನೀಡಿದರು. ಹಿಂಸಾಚಾರದಲ್ಲಿ 19 ಜನರು ಸಾವನ್ನಪ್ಪಿದ ಒಂದು ದಿನದ ನಂತರ, ಪ್ರತಿಭಟನಾಕಾರರು ಅನೇಕ ಸರ್ಕಾರಿ ಕಟ್ಟಡಗಳಿಗೆ ನುಗ್ಗಿ ಸಂಸತ್ತು ಮತ್ತು ಹಲವಾರು ಉನ್ನತ ನಾಯಕರ ಮನೆಗಳಿಗೆ ಬೆಂಕಿ ಹಚ್ಚಿದರು.ಇಲ್ಲಿನ ಪರಿಸ್ಥಿತಿ ತುಂಬಾ ಕೆಟ್ಟದಾಗಿದೆ. ಎಲ್ಲೆಡೆ ರಸ್ತೆಗಳಲ್ಲಿ ಬೆಂಕಿ ಹಚ್ಚಲಾಗುತ್ತಿದೆ. ಅವರು ಇಲ್ಲಿ ಪ್ರವಾಸಿಗರನ್ನು ಬಿಡುತ್ತಿಲ್ಲ. ಯಾರಾದರೂ ಪ್ರವಾಸಿಗರೋ ಅಥವಾ ಯಾರಾದರೂ ಇಲ್ಲಿಗೆ ಕೆಲಸಕ್ಕಾಗಿ ಬಂದಿದ್ದಾರೆಯೋ ಎಂಬುದನ್ನು ಅವರು ಲೆಕ್ಕಿಸುವುದಿಲ್ಲ.ನಾವು ಬೇರೆ ಹೋಟೆಲ್‌ನಲ್ಲಿ ಎಷ್ಟು ದಿನ ಇರುತ್ತೇವೆಯೋ ನಮಗೆ ತಿಳಿದಿಲ್ಲ. ಆದರೆ ದಯವಿಟ್ಟು ಈ ವೀಡಿಯೋ, ಈ ಸಂದೇಶವನ್ನು ಅವರಿಗೆ ತಲುಪಿಸಬೇಕೆಂದು ನಾನು ಭಾರತೀಯ ರಾಯಭಾರ ಕಚೇರಿಯನ್ನು ವಿನಂತಿಸುತ್ತೇನೆ. ಕೈಮುಗಿದು, ನಿಮ್ಮೆಲ್ಲರನ್ನೂ ವಿನಂತಿಸುತ್ತೇನೆ.

# ಭಾರತದ ಜೊತೆ ಮಾತು ಕತೆಗೆ ಮುಂದಾದ ಟ್ರಂಪ್

**ನವದೆಹಲಿ:** ಭಾರತ ಮತ್ತು ಅಮೆರಿಕ ನಡುವಿನ ಸಂಬಂಧಗಳು ತೀರಾ ಹದಗೆಟ್ಟು ನಾನೊಂದು ತೀರಾ, ನೀನೊಂದು ತೀರಾ ಎನ್ನುವಂತಿತ್ತು. ಇತ್ತೀಚಿನ ಬೆಳವಣಿಗೆಗಳು ಈ ಒತ್ತಡವು ಕರಗುವ ಲಕ್ಷಣಗಳನ್ನು ತೋರಿಸುತ್ತಿವೆ. ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾರತದೊಂದಿಗೆ ಮಾತುಕತೆ ನಡೆಸಲು ಒಲವು ತೋರಿದ್ದು, ಇದೀಗ ಪ್ರಧಾನಿ ಮೋದಿ ಕೂಡ ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿ ಮಾತುಕತೆಗೆ ಸಿದ್ಧರಿದ್ದೇವೆ ಎಂದು ಸಂದೇಶ ಸಾರಿದ್ದಾರೆ. ಈ ಬೆನ್ನಲ್ಲೇ ಪ್ರಧಾನಿ ಮೋದಿ ಮತ್ತು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶೀಘ್ರದಲ್ಲೇ ಮಾತುಕತೆ ನಡೆಸಲಿದ್ದಾರೆ ಎನ್ನಲಾಗಿದೆ.

ಅಮೆರಿಕದ ಅಧ್ಯಕ್ಷ ಡೊನಾ ಲ್ಡ್ ಟ್ರಂಪ್ ಮತ್ತು ಭಾರತದ ಪ್ರಧಾನಿ ನರೇಂದ್ರ ಮೋದಿ ಇಬ್ಬರೂ ಶೀಘ್ರದಲ್ಲೇ ದೂರವಾಣಿ ಸಂಭಾಷಣೆ ನಡೆಸಲು ಉತ್ಸುಕರಾಗಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ. ಇದು ಭಾರತ ಮತ್ತು ಅಮೆರಿಕ ನಡುವಿನ ಸಂಬಂಧದಲ್ಲಿ ಸಕಾರಾತ್ಮಕ ಬದಲಾವಣೆಯ ಸೂಚನೆಯಾಗಿದೆ. ಈ ಮಾತುಕತೆ ದ್ವಿಪಕ್ಷೀಯ ವ್ಯಾಪಾರ ಒಪ್ಪಂದವನ್ನು ಯಶಸ್ವಿಯಾಗಿ ಮುಕ್ತಾಯಗೊಳಿಸಲು ಮತ್ತು ಇತರ ಒತ್ತಡದ ವಿಷಯಗಳನ್ನು ಚರ್ಚಿಸಲು ದಾರಿ ಮಾಡಿಕೊಡಬಹುದು.

ಭಾರತ ಮತ್ತು ಅಮೆರಿಕ ನಡುವಿನ ದ್ವಿಪಕ್ಷೀಯದದಲ್ಲಿ ಸಂಬಂಧಗಳ ಸುಧಾರಣೆ ಸೂಚನೆ ನೀಡಿರುವ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ವ್ಯಾಪಾರದ ಮಾತುಕತೆಯಲ್ಲಿ ಉಭಯ ದೇಶಗಳು ಯಶಸ್ವಿ ತೀರ್ಮಾನಕ್ಕೆ ಬರಲು ಯಾವುದೇ ತೊಂದರೆ ಇಲ್ಲ ಎಂದು ಭಾವಿಸುತ್ತೇನೆ. ಮುಂಬರುವ ವಾರಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಮಾತನಾಡಲು ಎದುರು ನೋಡುತ್ತಿದ್ದೇನೆ ಎಂದು ಹೇಳಿದ್ದಾರೆ.

ತಮ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ನಮ ಎರಡು ರಾಷ್ಟ್ರಗಳ ನಡುವಿನ ವ್ಯಾಪಾರ ಅಡೆತಡೆಗಳನ್ನು ಪರಿಹರಿಸಲು ಭಾರತ ಮತ್ತು ಯುನೈಟೆಡ್ ಸ್ಟೇಟ್ ಆಫ್ ಅಮೇರಿಕಾ ಮಾತುಕತೆಗಳನ್ನು ಮುಂದುವರೆಸುತ್ತಿವೆ ಎಂದು ಘೋಷಿಸಲು ಸಂತೋಷವಾಗಿದೆ ಎಂದು ಹೇಳಿದರು.

ಇದಕ್ಕೆ ಸಕಾರಾತಕವಾಗಿ ಪ್ರತಿಕ್ರಿಯೆ ನೀಡಿರುವ ಭಾರತದ ಪ್ರಧಾನಿ ನರೇಂದ್ರ ಮೋದಿ ಅವರು, ನಡೆಯುತ್ತಿರುವ ಮಾತುಕತೆಗಳು ತಮ ನಡುವಿನ ಪಾಲುದಾರಿಕೆಯ ಮಿತಿಯಿಲ್ಲದ ಸಾಮರ್ಥ್ಯವನ್ನು ಯಶಸ್ವಿಗೊಳಿಸಲು ದಾರಿ ಮಾಡಿಕೊಡುತ್ತವೆ.ಭಾರತ ಮತ್ತು ಯುಎಸ್ ನಿಕಟ ಸ್ನೇಹಿತರು ಮತ್ತು ನೈಸರ್ಗಿಕ ಪಾಲುದಾರರು ಎಂದು ಎಕ್‌ನಲ್ಲಿ ಹೇಳಿದ ಮೋದಿ, ಎರಡೂ ದೇಶಗಳು ವ್ಯಾಪಾರ ಚರ್ಚೆಗಳನ್ನು ಶೀಘ್ರವಾಗಿ ಮುಗಿಸಲು ಕೆಲಸ ಮಾಡುತ್ತಿವೆ ಎಂದು ಹೇಳಿದ್ದಾರೆ.

## ಟ್ರಂಪ್ ಹೇಳಿದ್ದೇನು? :



ಮುಂಬರುವ ವಾರಗಳಲ್ಲಿ ನನ್ನ ಉತ್ತಮ ಸ್ನೇಹಿತ, ಪ್ರಧಾನಿ ಮೋದಿ ಅವರೊಂದಿಗೆ ಮಾತನಾಡಲು ನಾನು ಎದುರು ನೋಡುತ್ತಿದ್ದೇನೆ. ನಮ ಎರಡೂ ಮಹಾನ್ ದೇಶಗಳಿಗೆ ಯಶಸ್ವಿ ತೀರ್ಮಾನಕ್ಕೆ ಬರಲು ಯಾವುದೇ ತೊಂದರೆ ಇರುವುದಿಲ್ಲ ಎಂದು ನಾನು ಖಚಿತವಾಗಿ ಭಾವಿಸುತ್ತೇನೆ.

ಟ್ರಂಪ್‌ರ ಹೇಳಿಕೆ ದ್ವಿಪಕ್ಷೀಯ ಸಂಬಂಧಗಳಲ್ಲಿ ಗಮನಾರ್ಹವಾದ ಕರಗುವಿಕೆಯನ್ನು ಸೂಚಿಸುತ್ತವೆ. ಏಕೆಂದರೆ ಸುಂಕಗಳು ಮತ್ತು ದೆಹಲಿಯ ರಷ್ಯಾದ ತೈಲದ ಖರೀದಿಗಳ ಮೇಲಿನ ಉದ್ವಿಗ್ನತೆಯ ಮಧ್ಯೆ ಎರಡು ದಶಕಗಳಲ್ಲಿ ಎರಡು ದೇಶಗಳ ನಡುವಿನ ಸಂಬಂಧಗಳು ಬಹುಶಃ ಅತ್ಯಂತ ಕೆಟ್ಟ ಹಂತವನ್ನು ತಲುಪಿವೆ. ರಷ್ಯಾದ ಕಚ್ಚಾ ತೈಲದ ಖರೀದಿಗೆ 25 ಪ್ರತಿಶತ ಹೆಚ್ಚುವರಿ ಸುಂಕವನ್ನು ಒಳಗೊಂಡಂತೆ ಟ್ರಂಪ್ ಭಾರತೀಯ ಸರಕುಗಳ ಮೇಲಿನ ಸುಂಕವನ್ನು ಶೇ. 50 ಕ್ಕೆ ದ್ವಿಗುಣಗೊಳಿಸಿದ್ದಾರೆ.

ಭಾರತದ ಮೇಲೆ ಶೇ. 50 ರಷ್ಟು ಸುಂಕವನ್ನು ವಿಧಿಸುವ ನಿರ್ಧಾರದ ನಂತರ ಟ್ರಂಪ್ ಅವರ ಕಠಿಣ ವಾಕ್ಚಾತುರ್ಯದ ಸಂಬಂಧದಲ್ಲಿ ವಾರಗಳ ಒತ್ತಡದ ನಂತರ, ಉಭಯ ದೇಶಗಳ ನಡುವಿನ ಸಂಬಂಧಗಳು ತಡವಾಗಿ ಕರಗುವ ಲಕ್ಷಣಗಳನ್ನು ತೋರಿಸಿವೆ. ಇದು ತಡವಾಗಿ ಎರಡನೇ ಬಾರಿಗೆ ಟ್ರಂಪ್ ಅವರು ಭಾರತದೊಂದಿಗಿನ ತಮ ದೇಶದ ಬಾಂಧವ್ಯದ ಬಗ್ಗೆ ಹೆಚ್ಚು ಮಾತನಾಡಿದ್ದಾರೆ ಮತ್ತು ಅದನ್ನು ಮೋದಿಯವರ ಹೊಗಳಿಕೆಯೊಂದಿಗೆ ಬೆರೆಸಿದ್ದಾರೆ, ಅವರು ತಮ ಕಾಮೆಂಟ್‌ಗಳಿಗೆ ಸಕಾರಾತಕವಾಗಿ ಪ್ರತಿಕ್ರಿಯಿಸಿದ್ದಾರೆ

ಭಾರತದ ವಿರುದ್ಧ ತಿಂಗಳುಗಟ್ಟಲೆ ಟೀಕೆಗಳ ವಾಕ್ಚಾತುರ್ಯದ ನಂತರ, ಟ್ರಂಪ್ ಕಳೆದ ವಾರ ಭಾರತ ಮತ್ತು ಯುಎಸ್ ನಡುವೆ ವಿಶೇಷ ಸಂಬಂಧ ಇದೆ ಮತ್ತು ಎರಡೂ ದೇಶಗಳು ಉತ್ತಮ ಕ್ಷಣಗಳನ್ನು ಹೊಂದಿರುವುದರಿಂದ ಚಿಂತಿಸಬೇಕಾಗಿಲ್ಲ.

ನಾನು ಯಾವಾಗಲೂ ಮೋದಿಯೊಂದಿಗೆ ಸ್ನೇಹಿತರಾಗಿರುತ್ತೇನೆ, ಅವರು ಶ್ರೇಷ್ಠ ಪ್ರಧಾನಿ. ಅವರು ಶ್ರೇಷ್ಠರು. ಆದರೆ ಈ ನಿರ್ದಿಷ್ಟ ಕ್ಷಣದಲ್ಲಿ ಅವರು ಏನು ಮಾಡುತ್ತಿದ್ದಾರೆಂದು ನನಗೆ ಇಷ್ಟವಿಲ್ಲ ಎಂದು ಟ್ರಂಪ್ ಓವಲ್ ಕಚೇರಿಯಲ್ಲಿ ಹೇಳಿದ್ದಾರೆ.

## ಮೋದಿ ಪ್ರತಿಕ್ರಿಯೆ

ನಾನು ಅಧ್ಯಕ್ಷ ಟ್ರಂಪ್ ಅವರೊಂದಿಗೆ ಮಾತನಾಡಲು ಸಹ



ಎದುರು ನೋಡುತ್ತಿದ್ದೇನೆ. ನಮ ಎರಡೂ ಜನರಿಗೆ ಉಜ್ವಲ, ಹೆಚ್ಚು ಸಮೃದ್ಧ ಭವಿಷ್ಯವನ್ನು ಭದ್ರಪಡಿಸಲು ನಾವು ಒಟ್ಟಾಗಿ ಕೆಲಸ ಮಾಡುತ್ತೇವೆ. ವ್ಯಾಪಾರ ಮಾತುಕತೆಯಲ್ಲಿ ಉಭಯ ದೇಶಗಳು ಯಶಸ್ವಿ ತೀರ್ಮಾನಕ್ಕೆ ಬರಲು ಯಾವುದೇ ತೊಂದರೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

# ಚಿತ್ರದುರ್ಗದಲ್ಲೂ ಕಡಿಮೆ ದರದಲ್ಲಿ ಶಿಕ್ಷಕರಿಗೆ ನಿವೇಶನ ನೀಡಿ: ಡಿಡಿಪಿಐ ಎಂ.ಆರ್. ಮಂಜುನಾಥ್

**ಶಿವಮೊಗ್ಗ:** ಕರ್ನಾಟಕ ರಾಜ್ಯ ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಗೃಹ ನಿರ್ಮಾಣ ಸಹಕಾರ ಸಂಘವು ಮಾರುಕಟ್ಟೆ ದರಕ್ಕಿಂತ ಕಡಿಮೆ ದರದಲ್ಲಿ ನಿವೇಶನ ಒದಗಿಸುತ್ತಿರುವುದು ಶಿಕ್ಷಕರಿಗೆ ಅನುಕೂಲಕರವಾಗಿದೆ. ಚಿತ್ರದುರ್ಗದಲ್ಲಿಯೂ ಸಹ ಇಂತಹ ಕಾರ್ಯ ನಡೆಯಲಿ ಎಂದು ಚಿತ್ರದುರ್ಗದ ಡಿಡಿಪಿಐ ಎಂ.ಆರ್. ಮಂಜುನಾಥ್ ಹೇಳಿದರು.ಕರ್ನಾಟಕ ರಾಜ್ಯ ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಗೃಹ ನಿರ್ಮಾಣ ಸಹಕಾರ ಸಂಘದ ವತಿಯಿಂದ ಇತ್ತೀಚಿಗೆ (07-



09-2025ರ ಭಾನುವಾರ) ಇಲ್ಲಿನ ದೈವಜ್ಞ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಂಘದ 15ನೇ ವರ್ಷದ ಮಹಾಸಭೆ, ಪ್ರತಿಭಾ ಪುರಸ್ಕಾರ ಹಾಗೂ ನಿವೃತ್ತ ಶಿಕ್ಷಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.ಶಿಕ್ಷಕ ವೃತ್ತಿ ಬಹಳ ಪವಿತ್ರವಾದುದ್ದು. ಈ ವೃತ್ತಿಯಿಂದ ಗೌರವ ಸಂಪಾದಿಸಬಹುದೇ ಹೊರತು ಬೇರೆ ಸಂಪಾದನೆ ಸಾಧ್ಯವಿಲ್ಲ. ಶಿಕ್ಷಕರು ತಾವು ಗಳಿಸುವ ಆದಾಯದಲ್ಲೇ ಕನಿಷ್ಠ ನಿವೃತ್ತಿಯ ವೇಳೆಗಾದರೂ ತಲೆಯ ಮೇಲೊಂದು ಸೂರು (ಮನೆ) ನಿರ್ಮಿಸಿಕೊಳ್ಳುವಂತಾಗಲಿ. ಈ ನಿಟ್ಟಿನಲ್ಲಿ ಶಿಕ್ಷಕರ ಗೃಹ ನಿರ್ಮಾಣ ಸಹಕಾರ ಸಂಘವು ಕಾರ್ಯೋನ್ಮುಖವಾಗಿರುವುದು ಹರ್ಷ ತಂದಿದೆ ಎಂದರು.

ಡಯಟ್‌ನ ಉಪ ನಿರ್ದೇಶಕ (ಅಭಿವೃದ್ಧಿ) ಕೃಷ್ಣಮೂರ್ತಿ, ಶಿಕ್ಷಕರ ಗೃಹ ನಿರ್ಮಾಣ ಸಹಕಾರ ಸಂಘವು ಕೇವಲ ಶಿವಮೊಗ್ಗ ಜಿಲ್ಲೆಗಷ್ಟೇ ಸೀಮಿತವಾಗದೆ ರಾಜ್ಯ ವ್ಯಾಪ್ತಿ ವ್ಯಾಪಿಸಿರುವುದು ಹೆಮ್ಮೆಯ ಸಂಗತಿ. ಈ ಕಾರಣಕ್ಕಾಗಿ ಸಂಘದ ಅಧ್ಯಕ್ಷರಾದ ಮಹಾಬಲೇಶ್ವರ ಹೆಗಡೆ ಅಭಿನಂದನಾರ್ಹರು. ಭದ್ರಾವತಿ ಬಿಇಓ ನಾಗೇಂದ್ರಪ್ಪ, ಬಿಆರ್‌ಸಿ ಸಂಚಾಲಕ ಪಂಚಾಕ್ಷರಿ, ಶಿಕ್ಷಕರ ಸಂಘದ ಉಪಾಧ್ಯಕ್ಷೆ ಚಿತ್ರ, ಜಿಲ್ಲಾ ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ಆನಂದ್ ಎಂ.ಸಿ., ಜಿಲ್ಲಾ ಸಾವಿತ್ರಿ ಬಾಯಿ ಪುಲೆ ಅಧ್ಯಕ್ಷೆ ರಾಧ, ವಿವಿಧ ತಾಲೂಕುಗಳ ಶಿಕ್ಷಕರ ಸಂಘದ ಅಧ್ಯಕ್ಷರುಗಳಾದ ಸಿದ್ದಾಪುರದ ಸತೀಶ್ ಹೆಗಡೆ, ಸಾಗರದ ಮಾಲತೇಶ್, ಕೊಪ್ಪದ ಮಂಜುನಾಥ್, ಸಂಘದ ನಿರ್ದೇಶಕರು, ಶಿಕ್ಷಕರು ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

## ಹಿರಿಯ ನಾಗರಿಕರಿಗೆ ಸ್ಪರ್ಧೆ

**ದಾವಣಗೆರೆ :** ವಿಶ್ವ ಹಿರಿಯ ನಾಗರಿಕರ ದಿನಾಚರಣೆಯ ಅಂಗವಾಗಿ ಸೆಪ್ಟೆಂಬರ್ 14 ರಂದು ದಾವಣಗೆರೆ ನಗರದ ಎಂ.ಸಿ.ಸಿ. ಬಿ.ಬ್ಲಾಕ್‌ನ ಬಾಪೂಜಿ ಸ್ಕೂಲ್ ಆವರಣದಲ್ಲಿ ಹಿರಿಯ ನಾಗರಿಕರಿಗೆ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಹಿರಿಯ ನಾಗರಿಕರು ಸ್ಪರ್ಧೆಯಲ್ಲಿ ಭಾಗವಹಿಸಲು ಎಸ್. ಗುರುಮೂರ್ತಿ-9844143827, ಲಕ್ಷ್ಮಿ 7483968224, 7795506712, ತಿಪ್ಪೇಶ್-9148672498, ರುದ್ರೇಶ್ ಪಿ.ಎನ್-9164588404, ಸಂತೋಷ್ ಕೆ.ಎ-9110693195 ಮೊಬೈಲ್ ಸಂಖ್ಯೆಗೆ ಕರೆಮಾಡಿ ನೋಂದಣಿ ಮಾಡಿಸಬೇಕು.
ಕ್ರೀಡಾ ಸ್ಪರ್ಧೆಗಳು: ಮ್ಯೂಸಿಕಲ್ ಚೇರ್, ಬಿರುಸಿನ ನಡಿಗೆ ಮಹಿಳೆ ಮತ್ತು ಪುರುಷರು 60 ರಿಂದ 70 ವರ್ಷ ವಯೋಮಾನದವರು. ಬಕೆಟ್‌ನಲ್ಲಿ ಬಾಲ್ ಎಸೆಯುವುದು 70 ವರ್ಷ ಮೇಲ್ಪಟ್ಟವರು.
ಸಾಂಸ್ಕೃತಿಕ ಗಾಯನ ಸ್ಪರ್ಧೆ; 60 ವರ್ಷಕ್ಕಿಂದ ಮೇಲ್ಪಟ್ಟ ಮಹಿಳೆ, ಪುರುಷರು, ಏಕ ಪಾತ್ರಾಭಿನಯ ಸ್ಪರ್ಧೆಯಲ್ಲಿ ಭಾಗವಹಿಸಬಹುದು ಎಂದು ಇಲಾಖೆಯ ಅಧಿಕಾರಿ ಡಾ|| ಕೆ.ಕೆ. ಪ್ರಕಾಶ್ ತಿಳಿಸಿದ್ದಾರೆ.

## ಸ್ವಯಂ ರಕ್ಷಣಾ ಕೌಶಲ್ಯ ತರಬೇತಿಗೆ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿಗೆ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ-221 ರಲ್ಲಿ ಘೋಷಿಸಿರುವಂತೆ ಅಲ್ಪಸಂಖ್ಯಾತರ ವಿವಿಧ ವಸತಿ ಶಾಲೆ ಹಾಗೂ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರಿಗೆ ವಾರದಲ್ಲಿ 2 ದಿನ 1 ಗಂಟೆ ಕಾಲ 6 ತಿಂಗಳಿಗೆ 48 ಬೋಧನಾ ಅವಧಿಗಳಲ್ಲಿ "ಸ್ವಯಂ ರಕ್ಷಣಾ ಕೌಶಲ್ಯ ಕರಾಟೆ" ತರಬೇತಿಯನ್ನು ನೀಡಲು ಅರ್ಹ ತರಬೇತಿ ಸಂಸ್ಥೆಗಳಿಂದ ಮಹಿಳಾ ಕರಾಟೆ ತರಬೇತಿದಾರರನ್ನು ಒದಗಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸೆ.20 ರವರೆಗೆ ಅಗತ್ಯ ದಾಖಲೆಯೊಂದಿಗೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, #44, 'ಎ' ಬ್ಲಾಕ್, 2ನೇ ಮಹಡಿ, ಜಿಲ್ಲಾಡಳಿತ ಭವನ, ಕರೂರು ಕ್ರಾಸ್, ಹರಿಹರ ರಸ್ತೆ, ದಾವಣಗೆರೆ ಇಲ್ಲಿಗೆ ಅರ್ಜಿ ಸಲ್ಲಿಸಬೇಕೆಂದು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

## ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ ಮತ್ತು ವಿಸರ್ಜನೆ ಅವಧಿ 25 ದಿನಗಳಿಗೆ ಸೀಮಿತ

**ದಾವಣಗೆರೆ :** ಜಿಲ್ಲೆಯಲ್ಲಿ ಗಣೇಶ ಚತುರ್ಥಿ ಹಬ್ಬದಲ್ಲಿ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ ಮತ್ತು ವಿಸರ್ಜನೆ ಅವಧಿಯನ್ನು 25 ದಿನಗಳಿಗೆ ಸೀಮಿತಗೊಳಿಸಿ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಆದೇಶಿಸಿದ್ದಾರೆ.

ಆಗಸ್ಟ್ 27 ರ ಗಣೇಶ ಚತುರ್ಥಿ ಹಬ್ಬದ ಅಂಗವಾಗಿ ಗಣೇಶಮೂರ್ತಿ ಪ್ರತಿಷ್ಠಾಪಿಸಿ ವಿಸರ್ಜನೆ ಮಾಡುವ ಅವಧಿಯನ್ನು ಸೆ.20 ರವರೆಗೆ ಮಾತ್ರ ಮುಂದುವರೆಸಬೇಕೆಂದು ಅವರು ಆದೇಶದಲ್ಲಿ ತಿಳಿಸಿದ್ದಾರೆ.

## ಡಿಜೆ ಸಿಸ್ಟಂ ಬಳಕೆ ನಿಷೇಧ

**ದಾವಣಗೆರೆ :** ದಾವಣಗೆರೆ ಜಿಲ್ಲೆಯಾದ್ಯಂತ ಗಣೇಶ ಮೂರ್ತಿ ವಿಸರ್ಜನಾ ಮೆರವಣಿಗೆಗಳು ಪೂರ್ಣಗೊಳ್ಳುವವರೆಗೆ ಸಾರ್ವಜನಿಕರ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಠಿಯಿಂದ ಗಣೇಶಮೂರ್ತಿ ವಿಸರ್ಜನೆ ಮುಕ್ತಾಯಗೊಳ್ಳುವವರೆಗೆ ಜಿಲ್ಲೆಯಾದ್ಯಂತ ಡಿಜೆ ಸಿಸ್ಟಂ ಬಳಕೆ ನಿಷೇಧಗೊಳಿಸಿ ಜಿಲ್ಲಾ ದಂಡಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಆದೇಶ ಹೊರಡಿಸಿದ್ದಾರೆ.

## ತಿದ್ದುಪಡಿ ಆದೇಶ

**ದಾವಣಗೆರೆ :** ಮಲೇಬೆನ್ನೂರು ಪಟ್ಟಣ ಪುರಸಭೆ ವ್ಯಾಪ್ತಿಯಲ್ಲಿ ಮುಂಜಾಗ್ರತಾ ಕ್ರಮವಾಗಿ ಮದ್ಯ ಮಾರಾಟ ಮತ್ತು ಸರಬರಾಜನ್ನು ನಿಷೇಧಗೊಳಿಸಿ ಆದೇಶಿಸಿರುವ ಆದೇಶ ಪರಿಷ್ಕರಿಸಿ ಸೆಪ್ಟೆಂಬರ್ 10 ರ ಬದಲಾಗಿ ಸೆಪ್ಟೆಂಬರ್ 18 ಎಂದು ಓದಿಕೊಳ್ಳಬೇಕು. ಉಳಿದಂತೆ ಬದಲಾವಣೆ ಇರುವುದಿಲ್ಲ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದ್ದಾರೆ.

## ನವೋದ್ಯಮ ಪ್ರಾರಂಭಿಸಲು ಉತ್ತೇಜನ ನೀಡಲು ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-217ರಲ್ಲಿ ಘೋಷಿಸಿರುವಂತೆ ಕರ್ನಾಟಕ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದ ವತಿಯಿಂದ ಯುವಕ, ಯುವತಿಯರಿಗೆ ನವೋದ್ಯಮಗಳನ್ನು ಪ್ರಾರಂಭಿಸಲು ಉತ್ತೇಜನ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿದಾರರು ಸೆಪ್ಟೆಂಬರ್ 15 ರೊಳಗಾಗಿ http://eitbt.karnataka.gov.in ಮುಖಾಂತರ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಚೇರಿ, ಕುರುಬರ ಹಾಸ್ಟೆಲ್ ಕಟ್ಟಡ, ಹದಡಿ ರಸ್ತೆ ಜಯದೇವ ಸರ್ಕಲ್ ಹತ್ತಿರ ದಾವಣಗೆರೆ-577002 ಮೊ.ಸಂ:8277944215 ನ್ನು ಸಂಪರ್ಕಿಸಲು ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

## ಆಕ್ಷೇಪಣೆಗಳಿಗೆ ಅರ್ಜಿ ಸಲ್ಲಿಕೆ

**ದಾವಣಗೆರೆ :** ಹರಿಹರ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ 5 ಅಂಗನವಾಡಿ ಕಾರ್ಯಕರ್ತೆ ಮತ್ತು 37 ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ನೇಮಕಾತಿ ಮಾಡಲು ಮಾ.25 ರಂದು ಅಧಿಸೂಚನೆಯನ್ನು ಹೊರಡಿಸಲಾಗಿತ್ತು.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 8 ರಂದು ಜಿಲ್ಲಾ ಮಟ್ಟದ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಆಯ್ಕೆ ಸಮಿತಿ ಸಭೆಯಲ್ಲಿ ಅಭ್ಯರ್ಥಿಗಳನ್ನು ತಾತ್ಕಾಲಿಕವಾಗಿ ಆಯ್ಕೆ ಮಾಡಲಾಗಿರುತ್ತದೆ.

ತಾತ್ಕಾಲಿಕವಾಗಿ ಆಯ್ಕೆಯಾದ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳಿದ್ದಲ್ಲಿ ಸೆ.22 ರೊಳಗಾಗಿ ಅಗತ್ಯ ದಾಖಲಾತಿಗಳೊಂದಿಗೆ ಆಯಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ರಾಜಾನಾಯ್ಕ ತಿಳಿಸಿದ್ದಾರೆ.

## ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

**ಗದಗ :** ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ರಿ.ಸ.ನಂ. 680/2ಬ/1 ಟಿ.ಎಂ.ಸಿ ನಂ.3329/ಎ/1 ಆಸ್ತಿಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ರೋಣ ಇವರಿಗೆ ವಸತಿ ನಿಲಯ ಕಟ್ಟಡಕ್ಕಾಗಿ ಮಂಜೂರು ಮಾಡಲು ತೀರ್ಮಾನಿಸಿರುತ್ತದೆ. ಈ ಕುರಿತು ಯಾವುದೇ ತಕರಾರು ಆಕ್ಷೇಪಣೆ ಇದ್ದಲ್ಲಿ 30 (ಮೂವತ್ತು) ದಿವಸಗಳಲ್ಲಿ ಲೇಖಿ ಮೂಲಕ ಸಲ್ಲಿಸಬೇಕು ತಪ್ಪಿದಲ್ಲಿ ಯಾವುದೇ ಆಕ್ಷೇಪಣೆಗಳು ಇರುವುದಿಲ್ಲ.

# ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ಅಭಿವೃದ್ಧಿಗೆ ಸುವರ್ಣಾವಕಾಶ :ಜಿಲ್ಲಾಧಿಕಾರಿ



**ಹಾಸನ :** ಸ್ವಂತಉದ್ಯೋಗ ಮಾಡಲುಇಚ್ಛಿಸುವವರಿಗೆ,ಕಿರುಆಹಾರ ಸಂಸ್ಕರಣಾ ಉದ್ದಿಮೆಗಳ ಅಭಿವೃದ್ಧಿಗೆ ಇದೊಂದುಸುವರ್ಣಾವಕಾಶ. ವ್ಯವಸ್ಥಿತವಾಗಿ ಸರ್ಕಾರದ ಸಹಾಯ ಪಡೆದುಕೊಂಡು ಶಿಸ್ತು ಬದ್ಧವಾಗಿಉದ್ದಿಮೆ ಮಾಡುವುದರ ಮೂಲಕಆರ್ಥಿಕಅಭಿವೃದ್ಧಿ ಹೊಂದಿಯಶಸ್ವಿಯಾಗುವಂತೆ ಜಿಲ್ಲಾಧಿಕಾರಿ ಲತಾಕುಮಾರಿಅವರು ತಿಳಿಸಿದ್ದಾರೆ.

ಪ್ರಧಾನ ಮಂತ್ರಿಗಳ ಕಿರುಆಹಾರ ಸಂಸ್ಕರಣ ಉದ್ದಿಮೆಗಳ ನಿಯಮ ಬದ್ಧಗೊಳಿಸುವಿಕೆ (ಕಒಈಒಇ)ಯೋಜನೆಯಕುರಿತುಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿಂದು ಏರ್ಪಡಿಸಿದ್ದ ಜಿಲ್ಲಾಮಟ್ಟದಅರಿವು ಮೂಡಿಸುವಕಾರ್ಯಕ್ರಮವನ್ನುಉದ್ಘಾಟಿಸಿ ಮಾತನಾಡಿದಅವರುಕಿರುಆಹಾರ ಸಂಸ್ಕರಣಾ ಉದ್ದಿಮೆಗಳ ಅಭಿವೃದ್ಧಿಗಾಗಿಇರುವಯೋಜನೆ ಇದಾಗಿದೆ. ರೈತರುಹೊಲಹುತ್ತು, ಬಿತ್ತನೆಮಾಡಿ ಮಾರುಕಟ್ಟೆಗೆಬೆಳೆ ನೀಡಿದರೆಎಷ್ಟೋ ಬಾರಿ ಮಾರುಕಟ್ಟೆಯಲ್ಲಿಉತ್ತಮ ಬೆಲೆ ಸಿಗುವುದಿಲ್ಲ. ಬೆಳೆ ರೋಗ, ನೀರಿನಅಭಾವ ಹೀಗೆ ನಾನಾ ಸಮಸ್ಯೆಗಳಿಂದ ರೈತ ಸಂಕಷ್ಟಕ್ಕೆ ಸಿಲುಕುತ್ತಾನೆ. ಅಂತಹಸಂದರ್ಭದಲ್ಲಿ ಈ ಕಿರು ಉದ್ಯಮಗಳು ಕೈ ಹಿಡಿಯುತ್ತವೆಎಂದರು.

ಕೃಷಿ ಜೊತೆಗೆಕೃಷಿ ಆಧಾರಿತ ಉದ್ಯಮಗಳಿಗೆ ಹೆಚ್ಚಿನಒತ್ತು ನೀಡಿಎಂದರಲ್ಲದೆ, ಕೃಷಿಯಲ್ಲಿಶೇ.90 ರಷ್ಟುರೈತ ಮಹಿಳೆಯರೇ ಕೆಲಸ ಮಾಡುವವರಿದ್ದಾರೆ. ಹಾಗಾಗಿ ಮಹಿಳೆಯರು ಈ ಯೋಜನೆಯಅವಕಾಶವನ್ನು ಸದುಪಯೋಗ ಪಡೆದುಕೊಳ್ಳಿ ಎಂದುಕರೆ ನೀಡಿದರು.

ಸ್ತ್ರೀ ಶಕ್ತಿ, ಸ್ವ-ಸಹಾಯ ಗುಂಪಿನ ಮಹಿಳೆಯರು ಹೆಚ್ಚಿನ ಮಾಹಿತಿತಿಳಿದುಕೊಂಡು ಸದುಪಯೋಗ ಪಡೆದುಕೊಳ್ಳಿ. ಸಕಲೇಶಪುರ ಭಾಗದಲ್ಲಿಕಾಫಿ, ಚನ್ನರಾಯಪಟ್ಟಣತಾಲೂಕು ಭಾಗದಲ್ಲಿತೆಂಗು, ಹೀಗೆಒಂದೊಂದು ಭಾಗದಲ್ಲಿಒಂದೊಂದು ವಿಶೇಷತೆಇರುತ್ತದೆ.ವ್ಯಕ್ತಿಒಬ್ಬೊಬ್ಬರಿಗೆಒಂದೊಂದುಕರಕುಶಲತೆಇರುತ್ತದೆ. ಈ ಉದ್ದಿಮೆಯನ್ನು ಪ್ರಾರಂಭಿಸುವ ಮೂಲಕ ಸ್ವಯಂಉದ್ಯೋಗವಂತರಾಗಿಎಂದು ತಿಳಿಸಿದರು.

ರೈತರುಕಿರುಉದ್ಯಮಮಾಡಲುಕೇಂದ್ರ ಸರ್ಕಾರದಿಂದ 6 ಲಕ್ಷ ಹಾಗೂ ರಾಜ್ಯ ಸರ್ಕಾರದಿಂದ 9 ಲಕ್ಷಸೇರಿದಂತೆಒಟ್ಟು 15 ಲಕ್ಷಸಹಾಯಧನ ನೀಡಲಾಗುತ್ತಿದೆ. ಈ ಉದ್ಯಮದಕುರಿತುರೈತರಿಗೆಗೊಂದಲಗಳಿದ್ದಲ್ಲಿ ಬಗೆಹರಿಸಿಕೊಳ್ಳಲು,ಮಾಹಿತಿ ತಿಳಿದುಕೊಳ್ಳಲು ಪ್ರೋತ್ಸಾಹ ನೀಡಿ ಶಕ್ತಿ ತುಂಬಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಕೆಫೆಕ್ ವ್ಯವಸ್ಥಾಪಕ ನಿರ್ದೇಶಕರಾದ ಶಿವಪ್ರಕಾಶ್ ಅವರು ಮಾತನಾಡಿಕಿರುಆಹಾರ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸುವ ಮೂಲಕ ಇತರರಿಗೂ ಸ್ಫೂರ್ತಿ ನೀಡುವಂತೆ ತಿಳಿಸಿದರಲ್ಲದೆ, ಒಂದುಕಿರುಆಹಾರ ಸಂಸ್ಕರಣಾಘಟಕ ಸ್ಥಾಪನೆ ಮಾಡಿದರೆ 10 ಜನರಿಗೆಉದ್ಯೋಗ ಸೃಷ್ಟಿ ಆಗುತ್ತದೆಜೊತೆಗೆ ಸ್ಥಳೀಯ ರೈತರಿಗೆ ಮೌಲ್ಯವರ್ಧನೆದೊರೆಯುತ್ತದೆಎಂದು ತಿಳಿಸಿದರು.

ಬ್ರಾಂಡಿಂಗ್ ಮತ್ತು ಮಾರುಕಟ್ಟೆ ಚಟುವಟಿಕೆಗಳಾದ ಪ್ಯಾಕೇಜಿಂಗ್, ಜಾಹೀರಾತು, ಸಾಮಾನ್ಯ ಬ್ರಾಂಡ್‌ಅಭಿವೃದ್ಧಿ, ಚಿಲ್ಲರೆ ಮಾರಾಟ ಸಂಸ್ಥೆಗಳೊಂದಿಗೆ ಒಡಂಬಡಿಕೆ ಇತ್ಯಾದಿಗಳಿಗಾಗಿ ಶೇ. 50 ರಷ್ಟು ಸಹಾಯಧನವನ್ನು ನೀಡಲಾಗುತ್ತಿದೆ, ಇದಕ್ಕೆರೈತಉತ್ಪಾದಕರ ಸಂಸ್ಥೆಗಳು/ಕಂಪನಿಗಳು, ಸಹಕಾರಿಗಳು, ಸ್ವ-ಸಹಾಯ ಸಂಘಗಳು, ಸಹಕಾರಿ ಸಂಸ್ಥೆಗಳು ಮತ್ತುಕಿರುಆಹಾರ ಸಂಸ್ಕರಣಾ ಉದ್ದಿಮೆಗಳ ವಿಶೇಷಉದ್ದೇಶ ಸಂಸ್ಥೆ ಅರ್ಹ ಸಂಸ್ಥೆಗಳಾಗಿರುತ್ತವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿತೋಟಗಾರಿಕೆಇಲಾಖೆಯಉಪನಿರ್ದೇಶಕರಾದಯೋಗೇಶ್, ಉದ್ಯಮಿದಾರರು, ರೈತರುಮತ್ತಿತರರು ಭಾಗವಹಿಸಿದ್ದರು.

## ನಾಗರೀಕ ಸೌಲಭ್ಯ ನಿವೇಶನಕ್ಕೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಶಿವಮೊಗ್ಗ :** ಶಿವಮೊಗ್ಗ-ಭದ್ರಾವತಿ ನಗರಾಭಿವೃದ್ಧಿ ಪ್ರಾಧಿಕಾರವು ತನ್ನ ವ್ಯಾಪ್ತಿಯಲ್ಲಿರುವ ಖಾಸಗಿ ಬಡಾವಣೆಗಳಲ್ಲಿ ಲಭ್ಯವಿರುವ ನಾಗರೀಕ ಸೌಲಭ್ಯ ನಿವೇಶನಗಳನ್ನು 1991ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ನಾಗರೀಕ ಸೌಲಭ್ಯ ನಿವೇಶನಗಳ ಹಂಚಿಕೆ ನಿಯಮದನ್ವಯ ಅರ್ಹ ನೊಂದಾಯಿತ ಸಂಘ ಸಂಸ್ಥೆಗಳು /ಕೇಂದ್ರ / ರಾಜ್ಯ / ಅರೆ ಸರ್ಕಾರಿ / ನಿಗಮ ಮಂಡಳಿಗಳಿಂದ ಹಂಚಿಕೆಗಾಗಿ ಜುಲೈ 29ರಂದು ಪ್ರಕಟಣೆಯನ್ನು ಹೊರಡಿಸಲಾಗಿತ್ತು. ಸದರಿ ಪ್ರಕಟಣೆಯಲ್ಲಿ ನಾಗರಿಕ ಸೌಲಭ್ಯ ನಿವೇಶನ ಮಂಜೂರಾತಿ ಅರ್ಜಿ ನಮೂನೆ-1 ಮತ್ತು ನಮೂನೆ-2 ನ್ನು ಪಡೆಯಲು ದಿನಾಂಕ:15-09-2025 ರವರೆಗೆ, ಭರ್ತಿ ಮಾಡಿದ ಅರ್ಜಿಯನ್ನು ಸಲ್ಲಿಸಲು ನಿಗಧಿಪಡಿಸಲಾಗಿದ್ದ ದಿನಾಂಕವನ್ನು ಸಾರ್ವಜನಿಕ ಹಿತದೃಷ್ಟಿಯಿಂದ ದಿನಾಂಕ:17-09-2025 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಿಂದ ಹಾಗೂ ಕಚೇರಿ ದೂರವಾಣಿ ನಂ. 08182-248887 ನ್ನು ಸಂಪರ್ಕಿಸಿ ಪಡೆಯಬಹುದಾಗಿದೆ ಎಂದು ಶಿವಮೊಗ್ಗ-ಭದ್ರಾವತಿ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರು ತಿಳಿಸಿದ್ದಾರೆ.

## ಅರಿವು ಕಾರ್ಯಕ್ರಮ

**ಶಿವಮೊಗ್ಗ;** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೆಫೆಕ್ ಸಂಸ್ಥೆ- ಬೆಂಗಳೂರು ಹಾಗೂ ಕೃಷಿ ಇಲಾಖೆಯ ಸಹಯೋಗದೊಂದಿಗೆ ಸೆ. 11 ರಂದು ಬೆಳಗ್ಗೆ 10.00ಕ್ಕೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪ್ರಧಾನ ಮಂತ್ರಿಗಳ ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ (ಕಒಈಒಇ) ಯೋಜನೆಗಳ ಕುರಿತು ಅರ್ಧ ದಿನ ಜಿಲ್ಲಾ ಮಟ್ಟದ ಅರಿವು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ಕಿರು ಆಹಾರ ಸಂಸ್ಕರಣೆ ಉದ್ದಿಮೆಗಳ ಸ್ಥಾಪನೆ /ಅಭಿವೃದ್ಧಿಗೆ ಸುವರ್ಣಾಕಾಶವಿದ್ದು, ಜಿಲ್ಲೆಯ ವೈಯಕ್ತಿಕ ಕಿರು ಉದ್ದಿಮೆಗಳು ಹಾಗೂ ರೈತ ಉತ್ಪಾದಕ ಸಂಸ್ಥೆಗಳು, ಎಲ್ಲಾ ರೈತರು/ ಉದ್ದಿಮೆದಾರರು ಪಾಲ್ಗೊಂಡು ಯೋಜನೆಯ ಸದುಪಯೋಗ ಪಡೆದುಕೊಳ್ಳುವಂತೆ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಓದಿನ ಜೊತೆಗೆ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಿ



**ಶಿವಮೊಗ್ಗ:** ಕ್ರೀಡಾಪಟುಗಳು ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಿ, ಆಗಿದ್ದಾಗ ಮಾತ್ರ ಆರೋಗ್ಯವಂತರಾಗಿರಲು ಸಾಧ್ಯವಾಗುತ್ತದೆ ಎಂದು ಶಿವಮೊಗ್ಗ ಜಿಲ್ಲಾ ಅನುದಾನ ರಹಿತ ಖಾಸಗಿ ವಿದ್ಯಾ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷ ಗಿರೀಶ್ ಅಭಿಪ್ರಾಯಪಟ್ಟರು.

ಅವರು ನೆಹರೂ ಕ್ರೀಡಾಂಗಣದಲ್ಲಿ ನಾಲ್ಕು ದಿನ ನಡೆಯಲಿರುವ ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಶಿವಮೊಗ್ಗ ಹಾಗೂ ಶ್ರೀ ರಾಜರಾಜೇಶ್ವರಿ ಪ್ರೌಢಶಾಲೆ, ಗೋಪಾಳ,ಶಿವಮೊಗ್ಗ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಅನುದಾನ ರಹಿತ ಪ್ರೌಢ ಶಾಲೆಗಳ 'ಎ' ಮತ್ತು 'ಬಿ'ವಲಯಗಳ ವಲಯ ಮಟ್ಟದ 17 ವರ್ಷ ವಯೋಮಿತಿಯೊಳಗಿನ ಬಾಲಕ ಮತ್ತು ಬಾಲಕಿಯರ ಶಿವಮೊಗ್ಗ ತಾಲ್ಲೂಕಿನ ವಲಯ ಮಟ್ಟದ ಕ್ರೀಡಾ ಕೂಟದ ಧ್ವಜಾರೋಣ ನೆರವೇರಿಸಿ ಮಾತನಾಡುತ್ತಾ, ಓದಿನ ಜೊತೆಗೆ ಕ್ರೀಡೆಯಲ್ಲಿ ಭಾಗವಹಿಸಿ,ಕ್ರೀಡೆಯಲ್ಲಿ ತಮ್ಮ ದೈಹಿಕ ಹಾಗೂ ಮಾನಸಿಕ ಸಾಮರ್ಥ್ಯವನ್ನು ಪರೀಕ್ಷಿಸಿಕೊಳ್ಳಬಹುದಾಗಿದೆ ಎಂದರು.

ಕ್ರೀಡಾಪಟುಗಳಲ್ಲಿ ಅತ್ಯಂತ ಸಾಮರಸ್ಯವಿರುತ್ತದೆ. ಇದು ಕ್ರೀಡಾ ಕ್ಷೇತ್ರದ ಗುಟ್ಟಾಗಿದೆ ಎಂದ ಅವರು, ಕ್ರೀಡೆ ತಮ್ಮ ಮಾನಸಿಕ ಬುದ್ದಿ ಮಟ್ಟವನ್ನು ಹೆಚ್ಚಿಸುವಲ್ಲಿ ಸಹಕಾರಿಯಾಗಿದೆ ಹಾಗಾಗಿ ಪ್ರತಿಯೊಬ್ಬ ವಿದ್ಯಾರ್ಥಿಯೂ ಕೂಡ ಶೈಕ್ಷಣಿಕ ಚಟುವಟಿಕೆಯ ಜೊತೆಗೆ ಕ್ರೀಡಾ ಚಟುವಟಿಕೆಗಳಲ್ಲೂ ಕೂಡ ಕಡ್ಡಾಯವಾಗಿ ಪಾಲ್ಗೊಳ್ಳಬೇಕು. ಸತತವಾಗಿ ಅಭ್ಯಾಸದಿಂದ ಕ್ರೀಡೆಯಲ್ಲಿ ಉತ್ತಮ ಸಾಧನೆ ಮಾಡಲು ಸಾಧ್ಯ ವಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರಾಜ ರಾಜೇಶ್ವರಿ ಪ್ರೌಢ ಶಾಲೆಯ ಮುಖ್ಯ ಶಿಕ್ಷಕ ಧನಂಜಯ ತಮ್ಮ ಪ್ರಾಸ್ತಾವಿಕ ನುಡಿಯಲ್ಲಿ,ಆಟದಲ್ಲಿ ಸೋಲು ಗೆಲುವು ಸರ್ವೇ ಸಾಮಾನ್ಯ ಆದರೆ ಭಾಗವಹಿಸುವಿಕೆ ಅತ್ಯಂತ ಮುಖ್ಯವಾಗಿರುತ್ತದೆ ಎಂದ ಅವರು, ಕ್ರೀಡಾ ಮನೋಭಾವದಿಂದ ಕ್ರೀಡೆಯಲ್ಲಿ ಭಾಗವಹಿಸಿ ಎಂದು ಕ್ರೀಡಾಪಟುಗಳಿಗೆ ಶುಭ ಹಾರೈಸಿದರು.

ನಿವೃತ್ತ ತಾಲ್ಲೂಕು ದೈಹಿಕ ಶಿಕ್ಷಣ ಅಧಿಕಾರಿ ಬಿ. ಹೆಚ್.ನಿರಂಜನ್ ಮೂರ್ತಿ ಮಾತನಾಡುತ್ತಾ, ಪ್ರಪಂಚದಲ್ಲಿ ಅತಿ ಹೆಚ್ಚು ಜನಸಂಖ್ಯೆ ಹೊಂದಿರುವ ಭಾರತ, ಕ್ರೀಡಾ ಕ್ಷೇತ್ರದಲ್ಲಿ ಹಿಂದುಳಿದಿರುವುದು ವಿಷಾದನೀಯ ಎಂದರು. ಮಕ್ಕಳೇ ಈ ದೇಶದ ಭವಿಷ್ಯದ ಪ್ರಜೆಗಳು, ಈಗಿನಿಂದಲೇ ಸತತ ಅಭ್ಯಾಸ ಮಾಡಿ, ಮುಂದಿನ ದಿನಗಳಲ್ಲಿ ಒಲಂಪಿಕ್ ಕ್ರೀಡಾಕೂಟದಲ್ಲಿ ಉತ್ತಮ ಸಾಧನೆ ಮಾಡಿ ದೇಶದ ಕೀರ್ತಿ ಹೆಚ್ಚಿಸಬೇಕಾಗಿದೆ ಎಂದರು. ಕಾರ್ಯಕ್ರಮದಲ್ಲಿ ತಾಲೂಕು ದೈಹಿಕ ಶಿಕ್ಷಣ ಅಧಿಕಾರಿಗಳಾದ ಚಂದ್ರಕಾಂತ್, ಜಿಲ್ಲಾ ಅನುದಾನ ರಹಿತ ಶಾಲಾ ದೈಹಿಕ ಶಿಕ್ಷಣ ಶಿಕ್ಷಕ ಸಂಘದ ಅಧ್ಯಕ್ಷ ರಾ. ಹ. ತಿಮ್ಮೇನಹಳ್ಳಿ, ಕಾರ್ಯದರ್ಶಿ ಕೆ.ಜಿ.ಮಠಪತಿ, ಸೋಮಶೇಖರ್ ಎಸ್. ಆರ್. ಕಾರ್ಯಕ್ರಮ ನಿರುಪಿಸಿದರೆ, ರಘು ಎಲ್.ಎಸ್. ವಂದಿಸಿದರು.ಕಾರ್ಯಕ್ರಮದಲ್ಲಿ ಇನ್ನೂ ಮುಂತಾದವರು ಉಪಸ್ಥಿತರಿದ್ದರು.

# ಬಿ.ಪಿ.ಹರೀಶ್ ಅವರ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಿಕೊಳ್ಳಲಾಗಿದೆ

**ದಾವಣಗೆರೆ:** ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸುಡುವ ಬಿಸಿಲಿನಲ್ಲಿ ಅಧಿಕಾರದಲ್ಲಿರುವ ರಾಜಕೀಯ ಮುಖಂಡರ ಮನೆ ಕಾಯುವುದು ಸಾರ್ವಜನಿಕರಿಗೆ ಆಡಳಿತ ವ್ಯವಸ್ಥೆಯ ಮೇಲೆ ಅನುಮಾನ ಬರಬಾರದೆಂಬ ಸದುದ್ದೇಶದಿಂದ ಹರಿಹರ ಶಾಸಕ ಬಿ.ಪಿ.ಹರೀಶ್ ಅವರು ಎಸ್ಪಿ ಪರ ಹೇಳಿಕೆ ನೀಡಿದ್ದನ್ನು ತಪ್ಪಾಗಿ ಅರ್ಥೈಸಿಕೊಂಡು ಕೇಸ್ ದಾಖಲಿಸಲಾಗಿದೆ ಎಂದು ಹರಿಹರದ ಸಾರ್ವಜನಿಕರು ವಿಷಾದ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಆಕಾಶ್ ಬಣಗಾರ್ ಮಾತನಾಡಿ, ಜಿಲ್ಲೆಯಲ್ಲಿ ಗಾಂಜ, ಅಫೀಮು ಸಾಗಣಿಕೆ ಜೋರಾಗಿದೆ. ದುಷ್ಚಟಗಳಿಗೆ ಯುವ ಸಮುದಾಯ ಬಲಿಯಾಗುತ್ತಿದೆ. ಮಹಿಳೆಯರ ಮೇಲಿನ ದೌರ್ಜನ್ಯದ ಪ್ರಕರಣಗಳು ಹೆಚ್ಚಾಗಿವೆ. ಎಸ್ಸಿ, ಎಸ್ಟಿ ಅಟ್ರಾಸಿಟಿ ಕೇಸ್‌ಗಳು ಹೆಚ್ಚಾಗಿವೆ. ಆದರೆ, ಪೊಲೀಸ್ ವರಿಷ್ಠಾಧಿಕಾರಿಗಳು ಇದರ ಬಗ್ಗೆ ಗಮನಹರಿಸದೇ ಬರೀ ಕಾರ್ಯಕ್ರಮಗಳಲ್ಲೇ ಸಮಯ ಕಳೆಯುತ್ತಿದ್ದಾರೆ ಎಂದು ದೂರಿದರು.ಸಾರ್ವಜನಿಕರು ತಮ್ಮ ಸಮಸ್ಯೆಗಳ ಬಗ್ಗೆ ದೂರು ನೀಡಲು ಕಛೇರಿಗಳನ್ನು ಅಲೆಯುವ ಪರಿಸ್ಥಿತಿ ಇದೆ. ಜಿಲ್ಲಾ ಕಛೇರಿಗಳಲ್ಲಿ ಯಾವ ಅಧಿಕಾರಿಗಳು ಸರಿಯಾಗಿ ಸಿಗುತ್ತಿಲ್ಲ. ಇದಕ್ಕೆಲ್ಲ ಹೊಣೆ ಯಾರು? ನಾವು ಯಾರನ್ನು ನ್ಯಾಯ ಕೇಳುವುದು?. ಐಎಎಸ್ ಮತ್ತು ಐಪಿಎಸ್ ನಂತಹ ಜಿಲ್ಲಾ ಮಟ್ಟದ ಹುದ್ದೆಗಳಲ್ಲಿ ಈ ಹಿಂದೆ ಸಾಕಷ್ಟು ಜನ ಅಧಿಕಾರಿಗಳು ಬಂದಿದ್ದಾರೆ. ಆ ಹುದ್ದೆಗಳಿಗೆ ಸಾರ್ವಜನಿಕರಲ್ಲಿ ಅತ್ಯಂತ ಗೌರವವಿದೆ. ಅಂತಹ ಹುದ್ದೆಯಲ್ಲಿರುವವರು ಅದರ ಘನತೆಯನ್ನು ಕಾಪಾಡಬೇಕಾಗಿರುತ್ತದೆ. ಶಾಸಕರು ಆ ಹುದ್ದೆಯ ಘನತೆಗೆ ದಕ್ಕೆಯಾಗದಿರಲಿ ಎಂಬ ಸದುದ್ದೇಶದಿಂದ ಪದ ಬಳಕೆ ಮಾಡಿದ್ದಾರೆಯೇ ಹೊರತು ಯಾವುದೇ ವ್ಯಕ್ತಿಗಳಿಗೆ ವೈಯುಕ್ತಿಕ ನಿಂದನೆಗಳಿಗೆ ಅಲ್ಲ ಎಂದು ಸಮರ್ಥನೆ ಮಾಡಿಕೊಂಡರು.ಜಿಲ್ಲಾಡಳಿತ ವ್ಯವಸ್ಥೆ ತುಕ್ಕು ಹಿಡಿದಿದೆ. ಯಾವುದೇ ಅಧಿಕಾರಿಗಳು ಸಾರ್ವಜನಿಕರಿಗೆ ಸ್ಪಂದಿಸುತ್ತಿಲ್ಲ. ಏನೇ ಕೇಳಿದರು ಜಿಲ್ಲಾ ಸಚಿವರ ಮನೆಯ ಕಡೆ ಬೊಟ್ಟು ಮಾಡುತ್ತಿದ್ದಾರೆ. ಆಡಳಿತ ಸರ್ಕಾರಿ ಕಛೇರಿಗಳಲ್ಲಿ ನಡೆಯತ್ತದೆಯೋ? ಅಥವಾ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅವರ ಮನೆ ಮತ್ತು ರೈಸ್ ಮಿಲ್‌ನಲ್ಲಿ ನಡೆಯುತ್ತದೆಯೋ ಸಾರ್ವಜನಿಕರಿಗೆ ತಿಳಿಯದಾಗಿದೆ ಎಂದರು.ಸುದ್ದಿಗೋಷ್ಠಿಯಲ್ಲಿ ಅಂಜಿನಪ್ಪ ಕುಮಾರ್ ಪಾಮೇನಹಳ್ಳಿ, ಮಲ್ಲಿಕಾರ್ಜುನ್ ಜಕ್ಕಣ್ಣನವರ್ ಇದ್ದರು.

## ಧರ್ಮದ ಕಾಲಂನಲ್ಲಿ 'ಹಿಂದೂ' ಎಂದು ಜಾತಿ ಕಾಲಂನಲ್ಲಿ 'ಕುರುಬ' ಎಂದು ಬರೆಸಿ: ಜಿಲ್ಲಾ ಕುರುಬ ಸಂಘ ಮನವಿ

**ದಾವಣಗೆರೆ:** ಇದೇ ಸೆಪ್ಟೆಂಬರ್ 22 ರಿಂದ ನಡೆಯಲಿರುವ ಜಾತಿಗಣತಿ ಸಮೀಕ್ಷೆಯಲ್ಲಿ ಕುರುಬ ಸಮುದಾಯದವರು ಧರ್ಮದ ಕಾಲಂನಲ್ಲಿ 'ಹಿಂದೂ' ಎಂದು ಜಾತಿ ಕಾಲಂನಲ್ಲಿ 'ಕುರುಬ' ಎಂದು ನಮೂದಿಸಬೇಕೆಂದು ಜಿಲ್ಲಾ ಕುರುಬರ ಸಂಘ ಮನವಿ ಮಾಡಿದೆ.

ಸುದ್ದಿಗೋಷ್ಠಿಯಲ್ಲಿ ಸಂಘದ ಅಧ್ಯಕ್ಷ ಬಿ.ಹೆಚ್.ಪರುಶುರಾಮಪ್ಪ ಮಾತನಾಡಿ, ರಾಜ್ಯ ಸರ್ಕಾರದ ಆದೇಶದಂತೆ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಸೆ.22 ರಿಂದ ಜಾತಿಗಣತಿ ಸಮೀಕ್ಷೆ ಕೈಗೊಳ್ಳಲಿದೆ. ನಮ್ಮ ಕುರುಬ ಸಮುದಾಯವನ್ನು ಪ್ರದೇಶವಾರು ಬೇರೆ ಬೇರೆ ಹೆಸರಿನಿಂದ ಕರೆಯುವುದು ಜಾರಿಯಲ್ಲಿದೆ. ಹಾಗಾಗಿ ಸಮುದಾಯದ ಹೆಸರನ್ನು ಬೇರೆ ಬೇರೆ ಹೆಸರಲ್ಲಿ ನಮೂದಿಸಿದರೆ ನಮ್ಮ ಜನ ಸಂಖ್ಯೆ ಕಡಿಮೆಯಾಗುವುದರಿಂದ ಸರ್ಕಾರದ ಮೀಸಲಾತಿ ಪ್ರಮಾಣವೂ ಕಡಿಮೆಯಾಗಿ ಅವಕಾಶ ವಂಚಿತರಾಗುವ ಆತಂಕವಿರುತ್ತದೆ. ಹಾಗಾಗಿ ಸರ್ಕಾರದ ಯೋಜನೆಗಳ ಸೌಲಭ್ಯ ಪಡೆಯಲು ಸಮೀಕ್ಷೆಯಲ್ಲಿ ಸರಿಯಾದ ಮಾಹಿತಿ ನೀಡಬೇಕು ಎಂದು ಅವರು ಕರೆ ನೀಡಿದರು.

2ಎ ವರ್ಗದಲ್ಲಿರುವ ಕುರುಬ ಸಮುದಾಯವು ಧರ್ಮದ ಕಾಲಂನಲ್ಲಿ "ಹಿಂದೂ" ಎಂದು ಜಾತಿ ಕಾಲಂ ನಲ್ಲಿ "ಕುರುಬ" ಎಂದು ಬರೆಯಿಸಬೇಕು. ಎಸ್.ಟಿ. ಮೀಸಲಾತಿ ಪಟ್ಟಿಯಲ್ಲಿರುವ ಗೊಂಡ, ಜೇನು ಕುರುಬ, ಬೆಟ್ಟ ಕುರುಬ, ಕಾಡು ಕುರುಬ, ಕುರುಮನ್ಸ್ ಹಾಗೂ ಕೊಡಗು ಜಿಲ್ಲೆಯಲ್ಲಿರುವ ಕುರುಬರು ಎಸ್.ಟಿ. ಪಟ್ಟಿಯಲ್ಲಿ ಮುಂದುವರೆಯುವಂತೆ ಬರೆಸಬೇಕು. ಯಾವುದೇ ಗೊಂದಲಕ್ಕೆ ಒಳಗಾಗದೇ ಪ್ರತಿಯೊಬ್ಬರೂ ಹಾಗೂ ಸಮುದಾಯದ ಎಲ್ಲಾ ಸಂಘಟನೆಗಳು ಸಂಘ-ಸಂಸ್ಥೆಗಳು ಕೂಡಲೇ ಕಾರ್ಯಪ್ರವೃತ್ತರಾಗಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಲೋಕಿಕೆರೆ ಸಿದ್ದಪ್ಪ, ಹೆಚ್.ಯಲ್ಲಪ್ಪ, ಸಂಗಪ್ಪ, ಶಶಿಧರ, ದೀಟೂರು ಚಂದ್ರು, ಬಿ.ರೇವಣಸಿದ್ದಪ್ಪ ಇತರರು ಇದ್ದರು.

## 59ನೇ ಅಂತರಾಷ್ಟ್ರೀಯ ಸಾಕ್ಷರತಾ ದಿನಾಚರಣೆ

**ದಾವಣಗೆರೆ:** ಇಂದು ಬೆಳಿಗ್ಗೆ 11.30ಕ್ಕೆ ನಗರದ ಮಹಾನಗರಪಾಲಿಕೆ ಸಭಾಂಗಣದಲ್ಲಿ ಡಿಜಿಟಲ್ ಯುಗದಲ್ಲಿ ಸಾಕ್ಷರತೆಯನ್ನು ಉತ್ತೇಜಿಸುವುದು ಎಂಬ ಧ್ಯೇಯ ವಾಕ್ಯದೊಂದಿಗೆ 59ನೇ ಅಂತರಾಷ್ಟ್ರೀಯ ಸಾಕ್ಷರತಾ ದಿನಾಚರಣೆ, ಮಹಾನಗರ ಪಾಲಿಕೆಯ ಪೌರಕಾರ್ಮಿಕರ ನವ ಸಾಕ್ಷರರಿಗೆ ಅಭಿನಂದನಾ ಪ್ರಮಾಣ ಪತ್ರವನ್ನು ವಿತರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ಲೋಕಶಿಕ್ಷಣ ವಿಭಾಗ, ಶಾಲಾ ಶಿಕ್ಷಣ ಇಲಾಖೆ, ಡಯಟ್, ಜಿಲ್ಲಾ ಸಾಕ್ಷರತಾ ಸಮಿತಿ ದಾವಣಗೆರೆ ಇವರ ಸಹಯೋಗದಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಕಾರ್ಯಕ್ರಮ ಉದ್ಘಾಟಿಸುವರು. ವಿಧಾನಸಭಾ ಸದಸ್ಯರಾದ ಡಾ. ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಧ್ವಜಾರೋಹಣ ಮಾಡುವರು.

ಮುಖ್ಯ ಅತಿಥಿಗಳಾಗಿ ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್ ಭೋಜೇಗೌಡ, ಡಿ.ಎಸ್ ಅರುಣ್, ಚಿದಾನಂದ. ಎಂ.ಗೌಡ, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ರಾಜ್ಯ ಬ್ರಾಹ್ಮಣ ಅಭಿವೃದ್ದಿ ನಿಗಮದ ಅಧ್ಯಕ್ಷರಾದ ಆಸಗೋಡು ಜಯಸಿಂಹ, ಕರ್ನಾಟಕ ತಾಂಡಾ ಅಭಿವೃದ್ದಿ ನಿಗಮದ ಅಧ್ಯಕ್ಷರಾದ ಎನ್.ಜಯದೇವನಾಯ್ಕ, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶಾಮನೂರು.ಟಿ.ಬಸವರಾಜ್, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ್ ವಿಠ್ಠಲ್‌ರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಪಾಲಿಕೆ ಆಯುಕ್ತೆ ರೇಣುಕಾ, ಭಾಗವಹಿಸುವರು.

## ಭದ್ರಾ ಜಲಾಶಯಕ್ಕೆ ಬಾಗಿನ ಅರ್ಪಣೆ

**ದಾವಣಗೆರೆ:** ಮಾಜಿ ಸಂಸದ ಜಿ.ಎಂ.ಸಿದ್ದೇಶ್ವರ್ ಹಾಗೂ ಗಾಯಿತ್ರಿ ಸಿದ್ದೇಶ್ವರ್ ಅವರ ನೇತೃತ್ವದಲ್ಲಿ ಇದೇ ಸೆ.11 ರಂದು ರೈತರ ಜೀವನಾಡಿ ಭದ್ರಾ ಜಲಾಶಯಕ್ಕೆ ಬಾಗಿನ ಅರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಹನಗವಾಡಿ ವೀರೇಶ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಿಗ್ಗೆ 8 ಗಂಟೆಗೆ ದಾವಣಗೆರೆಯ ಎಲ್ಲಾ ತಾಲ್ಲೂಕುಗಳಿಂದ ಬಿಜೆಪಿ ಪಕ್ಷದ ಮುಖಂಡರು, ಕಾರ್ಯಕರ್ತರು, ಚುನಾಯಿತ ಪ್ರತಿನಿಧಿಗಳು, ರೈತರು ಸೇರಿದಂತೆ ಸುಮಾರು 5 ಸಾವಿರ ಜನರೊಂದಿಗೆ ತೆರಳಿ ಭದ್ರಾ ಜಲಾಶಯಕ್ಕೆ ಬಾಗಿನ ಅರ್ಪಿಸಲಾಗುವುದು ಎಂದು ತಿಳಿಸಿದರು.ಬೆಳಿಗ್ಗೆ 11.30ಕ್ಕೆ ಜಲಾಶಯದ ಬಳಿ ವೇದಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ವಿಧಾನ ಪರಿಷತ್ ಸದಸ್ಯರಾದ ಎನ್.ರವಿಕುಮಾರ್, ಕೆ.ಎಸ್.ನವೀನ್, ಮಾಜಿ ಸಚಿವ ಕುಮಾರ್ ಬಂಗಾರಪ್ಪ, ಹರಿಹರ ಶಾಸಕ ಬಿ.ಪಿ.ಹರೀಶ್, ಮಾಜಿ ಶಾಸಕರಾದ ಎಸ್.ವಿ.ರಾಮಚಂದ್ರ, ಹೆಚ್.ಪಿ.ರಾಜೇಶ್ ಸೇರಿದಂತೆ ಹಲವು ಗಣ್ಯರು ಭಾಗಿಯಾಗಲಿದ್ದಾರೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಮುಖಂಡರಾದ ಬಿ.ಎಸ್. ಜಗದೀಶ್, ಯಶವಂತರಾವ್ ಜಾಧವ್, ಎ.ವೈ.ಪ್ರಕಾಶ್, ಹೇಮಂತ್ ಕುಮಾರ್, ಗೋವಿಂದ್ ರಾಜ್, ಟಿಂಕರ್ ಮಂಜಣ್ಣ ಇತರರು ಇದ್ದರು.

## ಕುರುಬ ಸಮಾಜದ ಮುಖಂಡರ ಪೂರ್ವಭಾವಿ ಸಭೆ

**ದಾವಣಗೆರೆ:** ರಾಜ್ಯ ಸರ್ಕಾರ ಸೆ.22ರಿಂದ ಜಾತಿ ಗಣತಿ ಸಮೀಕ್ಷೆ ನಡೆಸಲಿದ್ದು ಈ ಕುರಿತು ಕುರುಬ ಸಮುದಾಯದಲ್ಲಿ ಜಾಗೃತಿ ಮೂಡಿಸಲು ಇದೇ ಸೆ.11 ರಂದು ಬೆಳಿಗ್ಗೆ 11.30ಕ್ಕೆ ನಗರದ ದೇವರಾಜು ಅರಸು ಬಡಾವಣೆಯ ಶ್ರೀ ಬೀರೇಶ್ವರ ಸಮುದಾಯ ಭವನದಲ್ಲಿ ಕುರುಬ ಸಮಾಜದ ಮುಖಂಡರು, ಸಮಾಜದ ಹಲವು ಸಂಘ ಸಂಸ್ಥೆಗಳ ಮುಖಂಡರ ಪೂರ್ವಭಾವಿ ಸಭೆ ಕರೆಯಲಾಗಿದೆ ಎಂದು ಕುರುಬ ಸಮಾಜದ ಮುಖಂಡ ಎಸ್.ಎಲ್.ಆನಂದಪ್ಪ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಕರ್ನಾಟಕ ಪ್ರದೇಶ ಕುರುಬ ಸಮಾಜದ ಪದಾಧಿಕಾರಿಗಳು ಹಾಗೂ ಶೋಷಿತ ಸಮಾಜದ ಅಧ್ಯಕ್ಷರಾದ ಕೆ.ಎಂ.ರಾಮಚಂದ್ರಪ್ಪ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದ್ದು, ದಾವಣಗೆರೆ ಜಿಲ್ಲಾ ಹೋರಾಟ ಸಮಿತಿಗಳು, ಸಿದ್ದರಾಮಯ್ಯನವರ ಅಭಿಮಾನಿ ಬಳಗ, ಜಿಲ್ಲಾ ಕುರುಬ ಸಮಾಜದ ಅಧ್ಯಕ್ಷರುಗಳು ಹಾಗೂ ತಾಲ್ಲೂಕು ಅಧ್ಯಕ್ಷರುಗಳು. ಸಮಾಜದಲ್ಲಿರುವ ಕನಕ, ಸಂಗೊಳ್ಳಿ ರಾಯಣ್ಣ, ಯುವ ಘರ್ಜನೆ, ಹಾಲುಮತ ಮತ್ತಿತರ ಸಮಾಜದ ಸಂಘಟನೆಗಳು, ಎಲ್ಲಾ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಮತ್ತು ರಾಜಕೀಯ ಮುಖಂಡರು, ಜನಪ್ರತಿನಿಧಿಗಳು ಆಗಮಿಸಬೇಕು ಮನವಿ ಮಾಡಿದರು.

2ಎ ವರ್ಗದಲ್ಲಿರುವ ಕುರುಬ ಸಮುದಾಯವು ಧರ್ಮ ಕಾಲಂನಲ್ಲಿ 'ಹಿಂದೂ' ಎಂದು ಜಾತಿ ಕಾಲಂ ನಲ್ಲಿ "ಕುರುಬ" ಎಂದು ಬರೆಯಿಸಬೇಕು. ರಾಜ್ಯದ 31 ಜಿಲ್ಲೆಗಳ ಪೈಕಿ ಯಾದಗಿರಿ, ಬೀದರ, ಕಲಬುರ್ಗಿ, ಕೊಡಗು ಜಿಲ್ಲೆಗಳಲ್ಲಿ ನಮ್ಮ ಸಮಾಜದವರಿಗೆ ಪರಿಶಿಷ್ಟ ಪಂಗಡಕ್ಕೆ ಸೇರಿರುತ್ತಾರೆ. ಮುಂಜಾಗ್ರತಾ ಕ್ರಮವಾಗಿ ಅಲ್ಲಿನ ಸಮಾಜದ ಬಾಂಧವರು ಪ್ರಚಾರಗೊಳಿಸಿ ಜಾತಿ ಕಾಲಂನಲ್ಲಿ ಮರೆಯದೇ ಬರೆಸುವುದು ಸಮಾಜದ ಮುಖಂಡರುಗಳ ಜವಾಬ್ದಾರಿಯಾಗಿರುತ್ತದೆ ಎಂದು ಹೇಳಿದರು.
ಸುದ್ದಿಗೋಷ್ಠಿಯಲ್ಲಿ ಮಾಜಿ ಶಾಸಕ ಎಸ್.ರಾಮಪ್ಪ, ಮಾಜಿ ಮೇಯರ್ ಹೆಚ್.ಬಿ.ಗೋಣೆಪ್ಪ, ಪರುಶುರಾಮಪ್ಪ, ಕುಂದೂರು ಗಣೇಶಪ್ಪ, ಬೈರೇಶ್, ಹಾಲೇಶಪ್ಪ, ರೇವಣ್ಣ, ಮೋಹನ್, ಶಿವಣ್ಣ, ಜಯಪ್ಪ, ಇಟ್ಟಿಗುಡಿ ಮಂಜುನಾಥ ಲಿಂಗರಾಜು ಇತರರು ಇದ್ದರು.

## ನಗರದ ಮಾಜಿ ಉಪಮೇಯರ್ ಬೆಳನೂರು ನಾಗರಾಜಪ್ಪ ನಿಧನ

# ದಾವಣಗೆರೆ ಜಿಲ್ಲಾ ಕಸಾಪ ದಿಂದ ತೀವ್ರ ಸಂತಾಪ ಹಾಗೂ ಕಂಬನಿ

**ದಾವಣಗೆರೆ ಸೆ 9:** ದಾವಣಗೆರೆಯ ವಿದ್ಯಾನಗರದ ಎರಡನೇ ಮುಖ್ಯ ರಸ್ತೆಯ ನಿವಾಸಿ ಆಗಿರುವ ಮಹಾನಗರ ಪಾಲಿಕೆಯ ಮಾಜಿ ಉಪ ಮಹಾಪೌರರಾದ, ವಿದ್ಯಾನಗರದ ಈಶ್ವರ ಪಾರ್ವತಿ ಗಣಪತಿ ದೇವಸ್ಥಾನದ ಸ್ಥಾಪಕ ಅಧ್ಯಕ್ಷರಾಗಿ ಅದರ ಸರ್ವತೋಮುಖ ಬೆಳವಣಿಗೆಯ ಅಭಿವೃದ್ಧಿಗೆ ಶ್ರಮಿಸಿದ ಹಾಗೂ ದಾವಣಗೆರೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕೋಶಾಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ್ದ ಶ್ರೀಯುತ ಬೆಳವನೂರು ನಾಗರಾಜಪ್ಪ ಅವರು ಇಂದು ಬೆಳಿಗ್ಗೆ ವಾಯು ವಿಹಾರ ಸಂದರ್ಭದಲ್ಲಿ ಹೃದಯ ಸ್ತಂಭಕ್ಕೆ ಒಳಗಾಗಿ ನಿಧನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. 75 ವರ್ಷ ತುಂಬ ಜೀವನ ನಡೆಸಿದ ಅವರು, ಪತ್ನಿ ಓರ್ವ ಮಗ ಓರ್ವ ಮಗಳು ಸೊಸೆ ಅಳಿಯ ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಾಂಧವರನ್ನು ಹಿತೈಷಿಗಳನ್ನು ಅಗಲಿರುತ್ತಾರೆ. ಅವರ ಅಂತಿಮ ದರ್ಶನಕ್ಕಾಗಿ ವಿದ್ಯಾನಗರದ ಈಶ್ವರ ಪಾರ್ವತಿ ಗಣಪತಿ ದೇವಸ್ಥಾನದ ಸಮೀಪದಲ್ಲಿರುವ ಅವರ ನಿವಾಸದಲ್ಲಿ ದಿನಾಂಕ 11 9 2025 ಗುರುವಾರ ಬೆಳಿಗ್ಗೆ 10 ಗಂಟೆಯವರೆಗೆ ಅಂತಿಮ ದರ್ಶನಕ್ಕೆ ಇಡಲಾಗಿದೆ . ಅವರ ಅಂತ್ಯಕ್ರಿಯೆಯನ್ನು ಅವರ ಜನ್ಮಸ್ಥಳವಾದ ದಾವಣಗೆರೆ ಸಮೀಪದ ಬೆಳವನೂರು ಗ್ರಾಮದಲ್ಲಿರುವ ತೋಟದಲ್ಲಿ ನೆರವೇರಿಸಲಾಗುವುದೆಂದು ಅವರ ಕುಟುಂಬದ ಮೂಲಗಳು ತಿಳಿಸಿವೆ.

**ತೀವ್ರಸಂತಾಪ:** ಬೆಳವನೂರು ನಾಗರಾಜಪ್ಪ ಅವರ ನಿಧನದ ವಾರ್ತೆಯನ್ನು ಕೇಳಿ ಅವರ ಅನೇಕ ಹಿತೈಷಿಗಳು ಅಪಾರ ಸ್ನೇಹ ಬಳಗ ಅವರು ನಿವಾಸಕ್ಕೆ ಆಗಮಿಸಿ ಅಂತಿಮ ದರ್ಶನ ಪಡೆಯುತ್ತಿರುವುದು ಕಂಡು ಬಂತು. ಇದೇ ಸಂದರ್ಭದಲ್ಲಿ ದಾವಣಗೆರೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಬಿ ವಾಮದೇವಪ್ಪ ಮತ್ತು ಪದಾಧಿಕಾರಿಗಳು ಕನ್ನಡ ಸಾಹಿತ್ಯ ಪರಿಷತ್ ಪರವಾಗಿ ಅಂತಿಮ ನಮನವನ್ನು ಅವರ ನಿವಾಸಕ್ಕೆ ಭೇಟಿ ನೀಡಿ ಸಲ್ಲಿಸಿತು. ಹಾಗೂ ಅವರ ಸಾರ್ವಜನಿಕ ಸೇವೆಯನ್ನು ಸ್ಮರಿಸಿ ಅವರಿಗೆ ದಯಾಮಯನಾದ ಭಗವಂತ ಹಾಗೂ ಕನ್ನಡ ತಾಯಿ ಶ್ರೀ ಭುವನೇಶ್ವರಿಯಲ್ಲಿ ಪ್ರಾರ್ಥಿಸುತ್ತಾ ಅವರ ಆತ್ಮಕ್ಕೆ ಚಿರಶಾಂತಿ ಬಯಸುತ್ತಾ , ಅಗಲಿದ ಆತ್ಮಕ್ಕೆ ಚಿರಶಾಂತಿ ಬಯಸಿ ಜಿಲ್ಲಾ ಕಸಾಪ ದಿಂದ ತೀವ್ರ ಸಂತಾಪ ವ್ಯಕ್ತಪಡಿಸಿ ಭಾವಪೂರ್ಣ ಶ್ರದ್ಧಾಂಜಲಿ ಸಮರ್ಪಿಸುತ್ತದೆ. ಅವರ ಅಗಲಿಕೆಯಿಂದ ಉಂಟಾಗಿರುವ ದುಃಖವನ್ನು ಅವರ ಕುಟುಂಬ ಹಾಗೂ ಅಪಾರ ಸ್ನೇಹ ಬಳಗ ಸಹಿಸಿಕೊಳ್ಳುವ ಶಕ್ತಿಯನ್ನು ದಯಪಾಲಿಸಲಿ ಎಂದು ಪ್ರಾರ್ಥಿಸುವೆವು.

# ಸೆ.15, ಅಂಧರ ಆನ್‌ಲೈನ್ ಕಂಪ್ಯೂಟರ್ ತರಬೇತಿ ಕೇಂದ್ರ, ಕಂಪ್ಯೂಟರ್ ಸೈಬರ್ ಕೇಂದ್ರದ ಉದ್ಘಾಟನೆ

**ದಾವಣಗೆರೆ.ಸೆ.10:** ರೇಣುಕಾ ಅಕಾಡೆಮಿ ಫಾರ್ ಡಿಸೆಬಲ್ಡ್, ಜಗಳೂರು ವತಿಯಿಂದ ರೇಣುಕ ಅಕಾಡೆಮಿ ಅಂಧರ ಆನ್‌ಲೈನ್ ಕಂಪ್ಯೂಟರ್ ತರಬೇತಿ ಕೇಂದ್ರ ಹಾಗೂ ಕಂಪ್ಯೂಟರ್ ಸೈಬರ್ ಕೇಂದ್ರ ಮತ್ತು ತಂತ್ರಜ್ಞಾನ ಕೌಶಲ್ಯ ತರಬೇತಿ ಕೇಂದ್ರ ಹಾಗೂ ಕೃತಕ ಬುದ್ಧಿ ಮತ್ತೆ ಬಗ್ಗೆ ವಿಕಲ ಚೇತನ ವಿದ್ಯಾರ್ಥಿಗಳ ಜೊತೆ ಕೃತಕ ಬುದ್ಧಿ ಮತ್ತೆಯ ಪ್ರಭಾವ ಹಾಗೂ ಅದರಿಂದಾಗುವ ಬದಲಾವಣೆಗಳ ಕುರಿತು ಚರ್ಚೆ ಹಾಗೂ ನೂತನ ಕಟ್ಟಡ ಉದ್ಘಾಟನಾ ಸಮಾರಂಭ ಸೆಪ್ಟೆಂಬರ್ 15ರ ಸೋಮವಾರ ಬೆಳಿಗ್ಗೆ 10ಗಂಟೆಗೆ ಜಗಳೂರಿನ ವಾಲ್ಮೀಕಿ ಭವನದಲ್ಲಿ ಆಯೋಜಿಸಲಾಗಿದೆ ಎಂದು ರೇಣುಕಾ ಅಕಾಡಮಿ ಫಾರ್ ಡಿಸೆಬಲ್ಡ್ ಅಧ್ಯಕ್ಷ ರಂಗಸ್ವಾಮಿ ಭರಮಸಮುದ್ರ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯ ಅತಿಥಿಗಳಾಗಿ ಕರ್ನಾಟಕ ಉಚ್ಚ ನ್ಯಾಯಾಲಯದ ರಿಜಿಸ್ಟರ್ ಕಂಪ್ಯೂಟರ್ಸ್ ಎನ್.ಜಿ.ದಿನೇಶ್, ಸೆಂಟ್ರಲ್ ಪ್ರಾಜೆಕ್ಟ್ ಕೋ-ಆರ್ಡಿನೇಟರ್ ದೀಪಕ್ ಪಾಟೀಲ್, ಬೆಂಗಳೂರಿನ ಸಮರ್ಥನಂ ಸಂಸ್ಥೆಯ ನಿರ್ದೇಶಕ ಡಾ.ಜಿ.ಮಹಾಂತೇಶ್ ಕಿವುಡನಣ್ಣವರ್, ಆಡಳಿತಾಧಿಕಾರಿ ದೇಶಪಾಂಡೆ, ಬೆಂಗಳೂರಿನ ಎನೆಬಲ್ ಇಂಡಿಯಾ ಸಂಸ್ಥೆಯ ಹೆಚ್.ಆರ್.ಸಂದೇಶ್, ಜಗಳೂರಿನ ಮಾಜಿ ಶಾಸಕರಾದ ಹೆಚ್.ಪಿ.ರಾಜೇಶ್, ಎಸ್.ವಿ. ರಾಮಚಂದ್ರ, ಜಿಲ್ಲಾ ವಿಕಲಚೇತನ ಕಲ್ಯಾಣಾಧಿಕಾರಿ ಡಾ.ಕೆ.ಕೆ. ಪ್ರಕಾಶ್, ಚಿಕ್ಕಮಗಳೂರಿನ ಆಶ್ರಯ ಫೌಂಡೇಷನ್ ವ್ಯವಸ್ಥಾಪಕ ಡಾ. ಅಭಿಷೇಕ್ ಆಗಮಿಸಲಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ.ಜೆ.ಪಿ.ಕೃಷ್ಣೇಗೌಡ, ವಹಿಸಲಿದ್ದಾರೆ. ಕಾರ್ಯಕ್ರಮಕ್ಕೆ ಸಹಕಾರ ನೆರವನ್ನು ಶರತ್ ಕುಮಾರ್, ಪವಿತ್ರ, ರವಿಬಾಬು, ಲಕ್ಷ್ಮಣ್, ಕುಮಾರ್, ವೈ.ಹನುಮಂತಪ್ಪ, ಪಲ್ಲಾಗಟ್ಟೆ ಶೇಖರಪ್ಪ, ಅಖಿಲೇಶ್ ಬಾಲಸುಬ್ರಹ್ಮಣ್ಯಂ, ಬಸವರಾಜ್ ಎಂ. ಹುಲ್ಲತ್ತಿ, ಸೂರಲಿಂಗಪ್ಪ ತಿಮ್ಮಲಾಪುರ, ಸಿಕಂದರ್ ಅಲಿ, ತಿಪ್ಪೇಸ್ವಾಮಿ, ಶಶಿಕಲಾ ವೀರೇಶ್ ಇತರರು ನೀಡಿದ್ದಾರೆ ಎಂದು ಮಾಹಿತಿ ನೀಡಿದರು.

## ಸೆ.11ರಂದು ಪೂರ್ವಭಾವಿ ಸಭೆ

**ಚಿತ್ರದುರ್ಗ:** ಜಿಲ್ಲಾ ಕೇಂದ್ರದಲ್ಲಿ ಸೆ.17ರಂದು ವಿಶ್ವಕರ್ಮ ಜಯಂತಿಯನ್ನು ಆಚರಿಸುವ ಸಂಬಂಧ ಅಗತ್ಯ ಪೂರ್ವ ಸಿದ್ಧತೆಗಳನ್ನು ಕೈಗೊಳ್ಳುವ ಬಗ್ಗೆ ಚರ್ಚಿಸಲು ಇದೇ ಸೆ.11ರಂದು ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸಭೆಯ ಅಧ್ಯಕ್ಷತೆ ವಹಿಸುವರು. ಸಭೆಗೆ ಸಮಾಜದ ಮುಖಂಡರು, ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸಿ ಸಲಹೆ ನೀಡಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ ತಿಳಿಸಿದ್ದಾರೆ.

# ವಿದ್ಯಾರ್ಥಿಗಳನ್ನು ಜ್ಞಾನವಂತ-ಉತ್ತಮರನ್ನಾಗಿಸುವ ಬಹುದೊಡ್ಡ ಕಾಯಕ ಶಿಕ್ಷಕರದ್ದು: ರಾಜಶೇಖರ್

**ಚಿಕ್ಕಮಗಳೂರು**-ಯಾವುದೇ ಆಸೆ ಆಮಿಷಗಳಿಲ್ಲದೆ ಸೇವೆ ಸಲ್ಲಿಸುತ್ತಿರುವ ಶಿಕ್ಷಕರ ಸೇವೆ ಅನನ್ಯವಾಗಿದ್ದು, ದೇಶದ ಪ್ರತಿಯೊಬ್ಬ ಪ್ರಜೆಗಳನ್ನು ಜ್ಞಾನವಂತರನ್ನಾಗಿ ತಿದ್ದಿ ತೀಡುವ ಮೂಲಕ ಉತ್ತಮರನ್ನಾಗಿಸುವ ಬಹುದೊಡ್ಡ ಕಾಯಕ ಮಾಡುತ್ತಿದ್ದಾರೆ ಎಂದು ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಟಿ.ರಾಜಶೇಖರ್ ಹೇಳಿದರು.

ಅವರು ಇಂದು ನಗರದ ಜೆವಿಎಸ್ ಶಾಲೆಯಲ್ಲಿ ಏರ್ಪಡಿಸಲಾಗಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ತಾಯಿಯೇ ಮೊದಲ ಗುರು, ತಂದೆ-ತಾಯಿ ಗುರುವನ್ನು ಗೌರವಿಸದ ಮಕ್ಕಳು ಮುಂದೊಂದು ದಿನ ಸಂಕಟಕ್ಕೆ ಸಿಲುಕುತ್ತಾರೆ. ಉದ್ಯೋಗ ಸಿಗದೆ ತೊಂದರೆಗಳು ಎದುರಾದಾಗ ಈ ಮೂವರನ್ನು ನೆನಪು ಮಾಡಿಕೊಳ್ಳುತ್ತಾರೆ ಎಂದು ವಿಷಾಧಿಸಿದರು.

ತಂದೆ-ತಾಯಿ ಹೇಳಿದ ಮಾತು, ಗುರುಗಳು ಹೇಳಿಕೊಟ್ಟ ಪಾಠವನ್ನು ಶ್ರದ್ಧೆಯಿಂದ, ಭಕ್ತಿಯಿಂದ, ಪರಿಶ್ರಮದಿಂದ ಕಲಿತಾಗ ವಿದ್ಯಾರ್ಥಿಗಳಿಗೆ ಅಮೂಲ್ಯವಾದ ಕ್ಷಣಗಳಾಗುತ್ತವೆ ಎಂದು ಕಿವಿಮಾತು ಹೇಳಿದರು.

ಭಾರತ ದೇಶದ ಸಂಸ್ಕಾರ, ಸಂಸ್ಕೃತಿ ಉಳಿಸುವ ನಿಟ್ಟಿನಲ್ಲಿ ಶಿಕ್ಷಕರು ನೀಡುವ ಮಾರ್ಗದರ್ಶನದ ಸದುಪಯೋಗಪಡಿಸಿಕೊಂಡ ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಸಾಧನೆ ಮಾಡಲು ಸಹಕಾರಿಯಾಗುತ್ತದೆ ಎಂದರು.



ನಿರ್ದೇಶಕ ಎಸ್.ಎಸ್. ವೆಂಕಟೇಶ್ ಮಾತನಾಡಿ, ಓರ್ವ ಶಿಕ್ಷಕ ಸತತ ಪರಿಶ್ರಮದ ಮೂಲಕ ವಿಶ್ವ ಮಟ್ಟದಲ್ಲಿ ಸಾಧನೆ ಮಾಡಬಹುದು ಎಂಬುದನ್ನು ಡಾ. ಸರ್ವಪಲ್ಲಿ ರಾಧಾಕೃಷ್ಣ ಅವರು ತೋರಿಸಿಕೊಟ್ಟಿದ್ದಾರೆ ಎಂದು ಹೇಳಿದರು.

ಸರ್ವಪಲ್ಲಿ ರಾಧಾಕೃಷ್ಣ ಅವರ ಸಚ್ಚಾರಿತ್ರಿಕ ನಿಲುವುಗಳು ಎಲ್ಲಾ ಶಿಕ್ಷಕರಿಗೆ ದಾರಿದೀಪವಾಗಲಿ ಎಂದು ಶಿಕ್ಷಕರ ದಿನಾಚರಣೆಯ ಶುಭ ಹಾರೈಸಿದರು.

ದೇಶದ ಪ್ರಗತಿ ಶಿಕ್ಷಣದ ಮೇಲೆ ಅವಲಂಬಿತವಾಗಿದೆ. ಶತಮಾನಗಳು ಕಳೆದರೂ ಆಚಾರ್ಯ ದೇವೋಭವ ಈಗಲೂ ಶಾಶ್ವತವಾಗಿದೆ. ವೇದಗಳ ಕಾಲದಿಂದಲೂ ಗುರುಗಳಿಗೆ ಅತ್ಯುನ್ನತ ಸ್ಥಾನವನ್ನು ಭಾರತದಲ್ಲಿ ನೀಡುತ್ತಿರುವುದನ್ನು ಕಾಣುತ್ತಿದ್ದೇವೆ ಎಂದರು.

ವೃತ್ತಿ ಬದುಕಿನ ಸೇವಾವಧಿಯಲ್ಲಿ ಅದೆಷ್ಟೋ ಜನ ಮೆಂಟರ್‌ಗಳನ್ನು ಸಿದ್ಧಗೊಳಿಸುವ ಶಕ್ತಿ ಶಿಕ್ಷಕರಿಗಿದೆ. ದೇಶದ ಪ್ರಗತಿಗಾಗಿ ಉನ್ನತಿ, ಸಂಸ್ಕಾರ ಕೊಡುವಲ್ಲಿ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಪಡಿಸುವುದು ಶಿಕ್ಷಕ ವೃತ್ತಿ ಎಂದು ಬಣ್ಣಿಸಿದರು.

ಶಿಕ್ಷಕರಲ್ಲಿ ಸತತ ಅಧ್ಯಯನಶೀಲತೆ, ಸಂಸ್ಕಾರವನ್ನು ವಿದ್ಯಾರ್ಥಿಗಳಲ್ಲಿ ಬಿತ್ತುವುದೇ ಪವಿತ್ರ ವೃತ್ತಿ. ಈಗಿನ ತಾಂತ್ರಿಕತೆಗನುಗುಣವಾಗಿ ಶಿಕ್ಷಣ ನೀಡಿದಾಗ ಸಾರ್ಥಕತೆ ಪಡೆಯುತ್ತದೆ ಎಂದರು.

ಶಿಕ್ಷಕರು ವೃತ್ತಿಗೌರವ, ಮಕ್ಕಳಲ್ಲಿ ಪ್ರೀತಿ, ಕಾಲಕಾಲಕ್ಕೆ ಉನ್ನತೀಕರಣವಾಗಿ ಸಂಸ್ಕಾರವಂತರಾದಾಗ ನೆಲ-ಜಲ, ಭಾಷೆ, ಸಂಸ್ಕೃತಿಗೆ ನಿಜ ಅರ್ಥ ಬರುತ್ತದೆ ಎಂದು ಹೇಳಿದರು.

# ಬಸವ ಸಂಸ್ಕೃತಿ ಅಭಿಯಾನಕ್ಕೆ ಉತ್ಸಾಹ

## ಧರ್ಮದ ಹೆಸರಲ್ಲಿ ಮೂಢನಂಬಿಕೆ ಬಿತ್ತುವವರ ವಿರುದ್ಧ ಎಚ್ಚರಿಕೆ



**ಹರಿಹರ:** ಧರ್ಮ ಮತ್ತು ಅಧ್ಯಾತ್ಮದ ಹೆಸರಿನಲ್ಲಿ ಮೂಢನಂಬಿಕೆ ಗಳನ್ನು ವ್ಯವಸ್ಥಿತವಾಗಿ ಬಿತ್ತುತ್ತಾ, ಜನ ಸಾಮಾನ್ಯರ ಮೇಲೆ ಅನಾವಶ್ಯಕ ಆರ್ಥಿಕ ಭಾರವನ್ನು ಹೇರುತ್ತಿರುವ ಅಂಶದ ವಿರುದ್ಧ ಸಮಾಜ ಎಚ್ಚರಗೊಳ್ಳಬೇಕು ಎಂದು ಬಸವ ಸಂಸ್ಕೃತಿ ದಾವಣಗೆರೆ ಜಿಲ್ಲಾ ಸಂಚಾಲಕ ಆವರಗೆರೆ ರುದ್ರಮುನಿ ಕರೆ ನೀಡಿದರು.

ಹರಿಹರದಲ್ಲಿ ನಡೆದ ಬಸವ ಸಂಸ್ಕೃತಿ ಅಭಿಯಾನ ಸಭೆಯಲ್ಲಿ ಮಾತನಾಡಿದ ಅವರು,"ಧರ್ಮ, ಅಧ್ಯಾತ್ಮ ಮತ್ತು ಮೂಢನಂಬಿಕೆಗಳ ನಡುವಿನ ಅಂತರ ಬಹಳ ದೊಡ್ಡದಾಗಿದೆ. ಆದರೆ ಕೆಲವರು ಮೂಢನಂಬಿಕೆಗೆ ಧರ್ಮದ ಬಣ್ಣ ಹಚ್ಚಿ, ಅದನ್ನು ಜನಸಾಮಾನ್ಯರ ಮೇಲೆ ಹೇರಲು ಪ್ರಯತ್ನಿಸುತ್ತಿದ್ದಾರೆ.

ಧರ್ಮವನ್ನು ಪಾಲಿಸಲು ಹಣದ ಅಗತ್ಯವಿಲ್ಲ. ಆದರೆ ಕೆಲ ವೈದಿಕ ಪರಂಪರೆಯವರ ಲಾಭಾಸಕ್ತಿಯಿಂದ ಜನರಿಗೆ ಆರ್ಥಿಕ ಹೊರೆ ತಂದೊಡ್ಡುತ್ತಿದ್ದಾರೆ. ಇದು ಖಂಡನೀಯ," ಎಂದು ಅವರು,

"ವಿಶ್ವಗುರು ಬಸವಣ್ಣನವರು ತನ್ನ ಕಾಲದಲ್ಲೇ ಧರ್ಮದ ಹೆಸರಲ್ಲಿ ನಡೆಯುತ್ತಿದ್ದ ಶೋಷಣೆಯ ವಿರುದ್ಧ ಧ್ವನಿ ಎತ್ತಿದ್ದರು.

ಆಗಿನ ವೈದಿಕ ಪರಂಪರೆಯವರು ಜನರ ಮೇಲೆ ಆರ್ಥಿಕ ಹೊರೆ ಹೇರಿಕೊಂಡು ಹೊಟ್ಟೆ ತುಂಬಿಸಿಕೊಂಡಿದ್ದನ್ನು ಪ್ರಶ್ನಿಸಿದಾಗ ಅವರಿಗೆ ಹೊಟ್ಟೆನೋವು ಶುರುವಾಯಿತಿತ್ತು. ಅದು ಇಂದಿಗೂ ಬಡವರು ತಮ್ಮ ಮಕ್ಕಳ ಶಿಕ್ಷಣ ಮತ್ತು ಆರೋಗ್ಯ ಕಡೆ ಗಮನಕೊಡದೇ ಸಾಲ ಮಾಡಿ ಧಾರ್ಮಿಕ ಆಚರಣೆಗಳನ್ನು ನೆರವೇರಿಸುತ್ತಿರುವುದು ವಿಪರ್ಯಾಸ," ಎಂದು ವಿಷಾದ ವ್ಯಕ್ತಪಡಿಸಿದರು.

"ಮೂಢನಂಬಿಕೆ ಮತ್ತು ಧರ್ಮದ ನಡುವಿನ ಅಂತರವನ್ನು ತಿಳಿಯಪಡಿಸುವ ಜವಾಬ್ದಾರಿ ಪ್ರಜ್ಞಾವಂತ, ವಿದ್ಯಾವಂತ ಯುವಕರ ಮೇಲಿದೆ. ತಮ್ಮ ಕುಟುಂಬ ಮತ್ತು ಸುತ್ತಮುತ್ತಲಿನ ಜನರಲ್ಲಿ ಜಾಗೃತಿ ಮೂಡಿಸಬೇಕು," ಎಂದು ಯುವಜನರಿಗೆ ಸಂದೇಶ ನೀಡಿದರು.

ಇದೇ ವೇಳೆ ಮಲೆಬೆನ್ನೂರು ಬಸವ ಮಂಟಪದ ಅಧ್ಯಕ್ಷ ನಾರೇಶಪ್ಪ ಮಾತನಾಡಿ,"ಅರಿವನ್ನೇ ಗುರುವನ್ನಾಗಿ,ಆಚಾರವನ್ನೇ ಲಿಂಗವನ್ನಾಗಿ, ಪ್ರಮಾಣಿಕತೆ, ದಯೆ, ಕಾಯಕ ಶ್ರದ್ಧೆ, ಏಕದೇವ ನಿಷ್ಠೆ, ದಾಸೋಹ ಪ್ರಜ್ಞೆ, ಸತ್ಯ, ನೀತಿಯೇ ಬಸವ ಪಥವಾಗಿದೆ.ಈ ಕುರಿತು ಸಮಾಜ ದಲ್ಲಿ ಅರಿವು ಮೂಡಿಸಲು ಸೆಪ್ಟೆಂಬರ್ 1ರಿಂದ ಬಸವನ ಬಾಗೇವಾಡಿಯಿಂದ ಈ ಅಭಿಯಾನ ಪ್ರಾರಂಭವಾಗಿದ್ದು, ಅಕ್ಟೋಬರ್ 5 ರಂದು ಬೆಂಗಳೂರಿನಲ್ಲಿ ಸಮಾರೋಪವಾಗಲಿದೆ," ಎಂದು ತಿಳಿಸಿದರು.

ಸಾಮಾಜಿಕ ಕಾರ್ಯಕರ್ತ ಬಿ.ಮಗ್ದುಮ್ ಮಾತನಾಡಿ,"ಬಸವಣ್ಣ ನವರು ಕುಲ ಕಸಬನ್ನು ಆಧರಿಸಿ ಜಾತಿ ವ್ಯವಸ್ಥೆ ರೂಪಿಸಿದವರನ್ನು ವಿರೋಧಿಸಿದರು. ಅವರ ತತ್ವಗಳು ಎಲ್ಲಾ ಧರ್ಮೀಯರಿಗೆ ಮಾದರಿಯಾಗಿವೆ," ಎಂದರು.

ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣ) ತಾಲ್ಲೂಕು ಘಟಕ ಅಧ್ಯಕ್ಷ ರಮೇಶ್ ಮಾನೆ ಮಾತನಾಡಿ,"800 ವರ್ಷಗಳ ಹಿಂದೆ ಬಸವಣ್ಣನವರು ಶೋಷಿತ ಸಮುದಾಯದವರಿಗೆ ಲಿಂಗ ಧಾರಣೆ ಮಾಡಿಸಿ ವೈಚಾರಿಕ ಕ್ರಾಂತಿ ತಂದರು. ಅವರ ತತ್ವ ಇಂದಿಗೂ ಸಮಾನವಾಗಿ ಪ್ರಸ್ತುತವಾಗಿದೆ," ಎಂದು ಅಭಿಪ್ರಾಯ ಪಟ್ಟರು.

ಈ ಸಮಯದಲ್ಲಿ ಹನಗವಾಡಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಅಮರಾವತಿ ಪರಮೇಶ್ವರಪ್ಪ, ಕರವೇ ನಗರ ಘಟಕ ಅಧ್ಯಕ್ಷ ಪ್ರೀತಮ್ ಬಾಬು, ಕಡ್ಲೆಬಾಳು ಪ್ರಕಾಶ್, ವಿ.ಟಿ. ಮಂಜುನಾಥ್, ಕುಂದೂರು ಬಸವರಾಜ್, ಮಲೆಬೆನ್ನೂರು ಬಸವರಾಜ್, ಕಲಕೋಟಿ ಶಿವಬಸಮ್ಮ, ಕುಂಬಳೂರು ಸದಾಶಿವ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮದ್ದೂರು ಪಟ್ಟಣದ ಕಲ್ಲು ತೂರಾಟ ಘಟನೆ ಪೂರ್ವನಿಯೋಜಿತ ಕೃತ್ಯ: ಎಂ.ಪಿ.ಆರ್.

**ದಾವಣಗೆರೆ.ಸೆ.10:** ಮಂಡ್ಯ ಜಿಲ್ಲೆ ಮದ್ದೂರು ಪಟ್ಟಣದಲ್ಲಿ ಹಿಂದೂ ಗಣಪತಿ ಮೂರ್ತಿ ವಿಸರ್ಜನೆ ವೇಳೆ ಕಲ್ಲು ತೂರಾಟ ನಡೆಸಿರುವುದು ಪೂರ್ವನಿಯೋಜಿತ ಕೃತ್ಯವಾಗಿದ್ದು, ಘಟನೆಗೆ ಕಾರಣರಾದವರನ್ನು ಈ ಕೂಡಲೇ ಬಂಧಿಸಿ, ರಾಜ್ಯ ಸರ್ಕಾರ ಅವರನ್ನು ಗಡಿಪಾರು ಮಾಡಬೇಕೆಂದು ಬಿಜೆಪಿ ಮುಖಂಡ, ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮದ್ದೂರಿನಲ್ಲಿ ಅಹಿತಕರ ಘಟನೆ ನಡೆಸಲೆಂದೇ ಒಂದು ವಾರದ ಹಿಂದೆಯೇ ಮಸೀದಿಯಲ್ಲಿ ಮತಾಂಧ ಜಿಹಾದಿ ಶಕ್ತಿಗಳು ಕಲ್ಲು ಸಂಗ್ರಹಿಸಿಟ್ಟುಕೊಂಡಿದ್ದಾರೆ. ಇದಲ್ಲದೇ ಚನ್ನಪಟ್ಟಣದ ಇರ್ಫಾನ್ ಎಂಬ ಮದ್ದೂರಿನಲ್ಲಿ ಯುವಕರ ತಲೆಕೆಡಿಸಿ ಗಣಪತಿ ಉತ್ಸವದಲ್ಲಿ ಕಲ್ಲು ಎಸೆಯುವಂತೆ ಪ್ರೇರೇಪಣೆ ನೀಡಿದ್ದಾನೆ. ತಕ್ಷಣವೇ ದುಷ್ಕರ್ಮಿಯನ್ನು ಬಂಧಿಸಬೇಕು, ಈ ಪ್ರಕರಣದ ಮಾಸ್ಟರ್ ಮೈಂಡ್ ಜಾಫರ್‌ನನ್ನು ಬಂಧಿಸಬೇಕು. ಇದು ಪೂರ್ವ ನಿಯೋಜಿತ ಕೃತ್ಯವಾಗಿರುವುದರಿಂದ ಎನ್‌ಐಎಗೂ ವಹಿಸಬೇಕು ಎಂದು ಆಗ್ರಹಿಸಿದರು.

ಕಾಂಗ್ರೆಸ್ ಸರ್ಕಾರದಲ್ಲಿ ಓಲೈಕೆ ರಾಜಕಾರಣದ ಪರಿಣಾಮ ರಾಜ್ಯದಲ್ಲಿ ಪದೇಪದೇ ಇಂತಹ ಗಲಭೆಗಳು ನಡೆಯುತ್ತಿವೆ. ಸಂಭವಿಸಿದೆ. ಈ ಹಿಂದೆ ವಿಧಾನಸೌಧದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಎಂದಿದ್ದವರನ್ನು ಜೈಲಿಗೆ ಕಳಿಸಿದ್ದರೆ, ಮದ್ದೂರಿನಲ್ಲಿ ಈ ಮತಾಂಧ ಶಕ್ತಿಗಳು ಗಣೇಶ ಮೆರವಣಿಗೆ ಮೇಲೆ ಕಲ್ಲು ಎಸೆಯುತ್ತಿರಲಿಲ್ಲ. ಮಂಡ್ಯ ಜಿಲ್ಲೆ ಗಲಭೆ ಪ್ರಕರಣವನ್ನು ಸರ್ಕಾರ ಗಂಭೀರವಾಗಿ ತೆಗೆದುಕೊಂಡು ಮ್ಯಾಜಿಸ್ಟ್ರೇಟ್ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು. ರಾಜ್ಯದಲ್ಲಿ ಪ್ರಜಾಪ್ರಭುತ್ವ ಸರ್ಕಾರವಿದೆಯೋ, ಅಥವಾ ಪಾಕಿಸ್ತಾನಿ, ಅಫ್ಘಾನಿಸ್ತಾನದ ಸರ್ಕಾರವಿದೆಯೋ ಎಂದು ತಿಳಿಯುತ್ತಿಲ್ಲ ಎಂದು ಕಿಡಿಕಾರಿದರು.

ಪೊಲೀಸರ ಕರ್ತವ್ಯಕ್ಕೆ ಅಡ್ಡಿಪಡಿಸಿದ ಆರೋಪದ ಮೇಲೆ ಗಿರೀಶ್, ಸೌಮ್ಯ, ರಮ್ಯ, ಪಲ್ಲವಿ ಸೇರಿದಂತೆ 500 ಮಂದಿ ವಿರುದ್ಧ ಎಫ್‌ಐಆರ್ ಹಾಕಿರುವ ಉದ್ದೇಶವಾದರೂ ಏನು, ಹಿಂದೂಗಳ ಪ್ರಚೋದನಾಕಾರಿಯಿಂದ ಗಲಭೆ ನಡೆದಿದೆ ಎಂದು ಪರಮೇಶ್ವರ್ ಯಾವ ಆಧಾರದ ಮೇಲೆ ಹೇಳಿದ್ದಾರೆ. ಈಗ ಬಂಧನವಾಗಿರುವ 21 ಮಂದಿ ಶಾಂತಿಧೂತರೇ ಎಂದು ಪ್ರಶ್ನಿಸಿದರು.

ಈ ಹಿಂದೆ ರಾಜ್ಯದಲ್ಲಿ ನಡೆದ ವಿವಿಧ ಅಹಿತಕರ ಘಟನೆಗಳಲ್ಲಿ ಪಾಲ್ಗೊಂಡವರ ವಿರುದ್ಧ ದಾಖಲಾದ ಪ್ರಕರಣಗಳನ್ನು ಹಿಂತೆಗೆದುಕೊಂಡ ಪರಿಣಾಮವೇ ಕಿಡಿಗೇಡಿಗಳು ಈ ಸರ್ಕಾರ ನಮ್ಮನ್ನೇನೂ ಮಾಡಲ್ಲ ಎನ್ನುವ ಮನೋಭಾವಕ್ಕೆ ಬಂದು, ಇಂತಹ ದುಷ್ಕೃತ್ಯಗಳನ್ನು ನಡೆಸುತ್ತಿದ್ದಾರೆ. ಪದೇಪದೇ ಹಿಂದೂಗಳ ಸಹನೆಯನ್ನು ಸರ್ಕಾರ ಪರೀಕ್ಷೆ ಮಾಡುವುದು ಬೇಡ. ನಾವು ಸಿಡಿದೆದ್ದರೆ ಕಾಂಗ್ರೆಸ್ ಸರ್ಕಾರದ ಬುಡವೇ ಅಲುಗಾಡಲಿದೆ ಎಂದು ಎಚ್ಚರಿಕೆ ನೀಡಿದರು.

ಇನ್ನು ಭದ್ರಾವತಿಯ ಶಾಸಕ ಬಿ.ಕೆ.ಸಂಗಮೇಶ್ ಮುಂದಿನ ಜನದಲ್ಲಿ ನಾನು ಮುಸ್ಲಿಮನಾಗಿ ಹುಟ್ಟಬೇಕು ಎಂದು ಹೇಳಿರುವುದಕ್ಕೆ ನಾಚಿಕೆಯಾಗಬೇಕು. ಚುನಾವಣೆ ಬಂದಾಗ ಗೆಲ್ಲಲು ಹಿಂದೂಗಳ ಮತ ಬೇಕು. ಓಲೈಕೆ ಮಾಡಲು ಮಾತ್ರ ಮುಸ್ಲಿಮರ ಮತ ಬೇಕು. ನಿಮ್ಮಂತವರು ಹಿಂದೂ ಸಮಾಜದಲ್ಲಿ ಹುಟ್ಟಿದ್ದೇ ಅವಮಾನ. ತಕ್ಷಣವೇ ಸಂಗಮೇಶ್ ಬೇಷರತ್ ಕ್ಷಮಾಪಣೆ ಕೇಳಬೇಕು. ಇಲ್ಲದಿದ್ದರೆ ಮುಂದಿನ ಚುನಾವಣೆಯಲ್ಲಿ ಭದ್ರಾವತಿ ಜನರು ನಿಮಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ರಾಜುವೀರಣ್ಣ, ಪ್ರವೀಣ್ ಜಾಧವ್, ಪಂಜುಪೈಲ್ವಾನ್, ಜಿ.ದಯಾನಂದ, ಅಜಯ್ ಕುಮಾರ್, ಚೇತನ್, ರವಿಗೌಡ ಇತರರು ಇದ್ದರು.

# ವಿವಿಧ ಬೇಡಿಕೆಗಳ ಪರಿಹಾರಕ್ಕಾಗಿ ಆಗ್ರಹಿಸಿ ಎಸ್.ಎಫ್.ಐ ರಾಜ್ಯ ಮಟ್ಟದ ಸಮಾವೇಶ

**ದಾವಣಗೆರೆ.ಸೆ.10:** ಹಾಸ್ಟೆಲ್ ಹಾಗೂ ವಸತಿ ಶಾಲಾ-ಕಾಲೇಜು ವಿದ್ಯಾರ್ಥಿಗಳ ಆಹಾರ ಭತ್ಯೆ ಹೆಚ್ಚಳಕ್ಕಾಗಿ, ಖಾಲಿ ಇರುವ ವಾರ್ಡನ್, ಪ್ರಾಂಶುಪಾಲರು, ಸಿಬ್ಬಂದಿ ಸೇರಿದಂತೆ ವಿವಿಧ ಹುದ್ದೆಗಳ ನೇಮಕಾತಿಗಾಗಿ, ವಸತಿ ನಿಲಯಗಳಿಗೆ ಸ್ವಂತ ಕಟ್ಟಡ, ಕನಿಷ್ಠ ಮೂಲಭೂತ ಸೌಕರ್ಯಗಳಿಗಾಗಿ ಆಗ್ರಹಿಸಿ ಹಾವೇರಿಯಲ್ಲಿ ಹಾಸ್ಟೆಲ್ ವಿದ್ಯಾರ್ಥಿಗಳ ರಾಜ್ಯ ಮಟ್ಟದ ಸಮಾವೇಶ ನಡೆಯಲಿದೆ ಎಂದು ಎಸ್.ಎಫ್.ಐ ರಾಜ್ಯ ಉಪಾಧ್ಯಕ್ಷ ಬಸವರಾಜ ಎಸ್ ಹೇಳಿದರು.

ರಾಜ್ಯ ಮಟ್ಟದ ಹಾಸ್ಟೆಲ್ ವಿದ್ಯಾರ್ಥಿಗಳ ಸಮಾವೇಶದ ಲೋಗೋವನ್ನು ದಾವಣಗೆರೆ ಪರಿವೀಕ್ಷಣಾ ಮಂದಿರ(ಐಬಿ)ಯಲ್ಲಿ ಬಿಡುಗಡೆ ಮಾಡಿ ಮಾತನಾಡಿದ ಅವರು, 4-5 ಅಕ್ಟೋಬರ್ 2025 ಎರಡು ದಿನಗಳ ಕಾಲ ನಡೆಯುವ ಸಮಾವೇಶದಲ್ಲಿ ರಾಜ್ಯದಲ್ಲಿರುವ ಹಾಸ್ಟೆಲ್ ವಿದ್ಯಾರ್ಥಿಗಳ ಸಮಸ್ಯೆಗಳು, ಮೂಲಸೌಕರ್ಯಗಳ ಕುರಿತು ಚರ್ಚಿಸಲಾಗುವುದು. ಈಗಾಗಲೇ ರಾಜ್ಯದಲ್ಲಿರುವ ಎಸ್ಸಿ 3.5ಲಕ್ಷ ವಿದ್ಯಾರ್ಥಿಗಳು ಪೈಕಿ 2400 ವಸತಿ ನಿಲಯಗಳು, ಎಸ್.ಟಿ 1.5ಲಕ್ಷ ವಿದ್ಯಾರ್ಥಿಗಳು ಪೈಕಿ 1200 ವಸತಿ ನಿಲಯಗಳು, ಒಬಿಸಿ 2.5 ವಿದ್ಯಾರ್ಥಿಗಳು ಪೈಕಿ 2500 ನಿಲಯಗಳು ಒಟ್ಟು 7.5 ವಿದ್ಯಾರ್ಥಿಗಳು ಮತ್ತು 6000ಕ್ಕೂ ಅಧಿಕ ನಿಲಯಗಳಿವೆ.

ವಲಯಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಸಾಧ್ಯವಾಗುತ್ತಿಲ್ಲ. ನೇಮಕಾತಿಗಳು ವಿಳಂಬದ ಕಾರಣದಿಂದಾಗಿ ನಿಲಯ ಪಾಲಕರ, ಸ್ವಚ್ಛತಾ ಸಿಬ್ಬಂದಿ ಕೊರತೆ ಹೆಚ್ಚಿದೆ. ಟೆಂಡರ್‌ಗಳ ಮೂಲಕ ಆಹಾರ ಸರಬರಾಜು ಮಾಡಲಾಗುತ್ತಿದೆ. ವಿದ್ಯಾರ್ಥಿಗಳನ್ನು ಜೈಲಿನಲ್ಲಿರುವ ಕೈದಿಗಳಿಗಿಂತ ಕಡೆಯಾಗಿ ಕಾಣಲಾಗುತ್ತದೆ. ರಾಜ್ಯ ಸರ್ಕಾರಕ್ಕೆ ಸಮಾಜ ಕಲ್ಯಾಣ ಇಲಾಖೆ 14 ಕೋಟಿ ಹಣ ಕೇಳಿದೆ ಆದರೆ ಸರ್ಕಾರ ನೀಡುತ್ತಿಲ್ಲ ಎಂದರು.

ಮೆಟ್ರಿಕ್ ವಿದ್ಯಾರ್ಥಿಗಳಿಗೆ 1750 ರೂ ಮತ್ತು ಪೋಸ್ಟ್ ಮೆಟ್ರಿಕ್ ವಿದ್ಯಾರ್ಥಿಗಳಿಗೆ 1850 ರೂ ಆಹಾರ ಭತ್ಯೆಯನ್ನು ನೀಡಲಾಗುತ್ತಿದೆ. ಇದರಿಂದ ಉತ್ತಮ ಗುಣಮಟ್ಟದ ಪೌಷ್ಟಿಕ ಆಹಾರ ಕೊಡಲು ಸಾಧ್ಯವಾಗುತ್ತಿಲ್ಲ. ಹಾಗಾಗಿ ಸರ್ಕಾರ ಪ್ರತಿ ವಿದ್ಯಾರ್ಥಿಗೆ 4.500ರೂ ಆಹಾರ ಭತ್ಯಯನ್ನು ಹೆಚ್ಚಿಸಬೇಕು. ಇದರ ಭಾಗವಾಗಿ ಹಾವೇರಿಯಲ್ಲಿ ಎರಡು ದಿನಗಳ ಕಾಲ ರಾಜ್ಯಮಟ್ಟದ ಸಮಾವೇಶವನ್ನು ಮಾಡಿ ಸರ್ಕಾರಕ್ಕೆ ಮನವರಿಕೆ ಮಾಡಿಕೊಡಲು ಮುಂದಾಗಿದೆ ಎಂದು ಬಸವರಾಜ ಎಸ್ ಹೇಳಿದರು.

# ತೋಂಟದಾರ್ಯ ಸ್ವಾಮೀಜಿ ಬಸವಣ್ಣನವರ ಹೆಸರಲ್ಲಿ ಸಮಾಜ ಒಡೆಯುವ ಕೆಲಸ ಮಾಡುತ್ತಿದ್ದಾರೆ

**ಹುಬ್ಬಳ್ಳಿ:** ಗದಗ ತೋಂಟದಾರ್ಯ ಮಠದ ಸಿದ್ಧರಾಮ ಸ್ವಾಮೀಜಿ ನೇತೃತ್ವದ 'ಬಸವ ಸಂಸ್ಕೃತಿ ಯಾತ್ರೆ' ವೀರಶೈವರು ಮತ್ತು ಲಿಂಗಾಯತರ ನಡುವೆ ಒಡಕು ಮೂಡಿಸುವ ಪ್ರಯತ್ನವಾಗಿದೆ ಎಂದು ಶಿರಹಟ್ಟಿ ಫಕೀರ ಮಠದ ಪೀಠಾಧ್ಯಕ್ಷ ದಿಂಗಾಲೇಶ್ವರ ಸ್ವಾಮೀಜಿ ಹೇಳಿದ್ದಾರೆ.



ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಅವರು, 2017-18ರಲ್ಲಿ ಲಿಂಗಾಯತ ಪ್ರತ್ಯೇಕ ಧರ್ಮ ಹೋರಾಟ ಸಮಿತಿಯ ಬ್ಯಾನರ್ ಅಡಿಯಲ್ಲಿ ಆಂದೋಲನ ಆರಂಭವಾಗಿತ್ತು. ಈಗ, ಅವರೇ ತಮ್ಮ ಧರ್ಮವನ್ನು ಬಸವ ಧರ್ಮ ಎಂದು ಗುರುತಿಸುವಂತೆ ಕೇಳುತ್ತಾ ಸಮುದಾಯಗಳಲ್ಲಿ ಬಿರುಕು ಮೂಡಿಸಲು ಪ್ರಯತ್ನ ನಡೆಸುತ್ತಿವೆ ಎಂದು ಕಿಡಿಕಾರಿದರು.

ಕಳೆದ ಬಾರಿ ಕಾಂಗ್ರೆಸ್ ಸರ್ಕಾರ ಇದ್ದಾಗಲೇ ಪ್ರತ್ಯೇಕ ಲಿಂಗಾಯತ ಧರ್ಮ ಹೋರಾಟ ಆರಂಭವಾಗಿತ್ತು. ಈಗಲೂ ಕಾಂಗ್ರೆಸ್ ಸರ್ಕಾರ ಇದೆ. ಈಗ ಮತ್ತೆ ಪ್ರತ್ಯೇಕ ಧರ್ಮ ಹೋರಾಟ ಆರಂಭಗೊಂಡಿದೆ. ಹೆಸರಿಗೆ ಬಸವ ಸಂಸ್ಕೃತಿ ಯಾತ್ರೆ, ವೇದಿಕೆ ಮೇಲೆ ಪ್ರತ್ಯೇಕ ಲಿಂಗಾಯತ ಧರ್ಮದ ಬಗ್ಗೆ ಮಾತ್ರ ಮಾತನಾಡುತ್ತಾರೆ. ಕಾಂಗ್ರೆಸ್ ಅಧಿಕಾರದಲ್ಲಿದ್ದಾಗಲೆಲ್ಲಾ ಲಿಂಗಾಯತರಿಗೆ ಪ್ರತ್ಯೇಕ ಧರ್ಮದ ಸ್ಥಾನಮಾನದ ವಿಷಯ ಮುನ್ನೆಲೆಗೇಕೆ ಬರುತ್ತದೆ ಎಂದು ಪ್ರಶ್ನಿಸಿದರು.

ಬಸವ ಸಂಸ್ಕೃತಿ ಯಾತ್ರೆ ಹೆಸರಲ್ಲಿ ಸಮಾಜ ಒಡೆಯೋ ಕೆಲಸ ಮಾಡುತ್ತಿದ್ದಾರೆ. ಬಸವಣ್ಣನ ಹೆಸರಲ್ಲಿ ಕೆಲವರಿಂದ ಸಮಾಜ ಒಡೆಯೋ ಕೆಲಸ ನಿರಂತರವಾಗಿ ನಡೆದಿದೆ. ಬಸವಣ್ಣ ಹೆಸರು ಬಳಸಿಕೊಂಡು, ಮನಬಂದಂತೆ ಮಾತನಾಡುತ್ತಿದ್ದಾರೆ. ಬಸವೇಶ್ವರ ವಿಚಾರಧಾರೆಗಳನ್ನು ಬಿತ್ತುವುದಾಗಿರಬೇಕಿತ್ತು, ಆದರೆ ಅಲ್ಲಿ ಬಸವಣ್ಣ ಆಚಾರ-ವಿಚಾರಗಳಿಗೆ ತದ್ವಿರುದ್ಧವಾಗಿ ನಡೆದುಕೊಳ್ಳುತ್ತಿದೆ.

ಸಿದ್ಧರಾಮ ಸ್ವಾಮೀಜಿ ಬಸವಣ್ಣನವರ ತತ್ವಗಳಿಗೆ ವಿರುದ್ಧವಾಗಿ ಹೋಗುತ್ತಿದ್ದಾರೆ. ಗದಗ ಮಠವು ವೈದಿಕ ಪದ್ಧತಿಗಳನ್ನು ಕಲಿಸುವ ಮೂರು ಶಾಲೆಗಳನ್ನು ನಡೆಸುತ್ತಿದೆ. ಒಬ್ಬ ಶ್ರೀಗಳು ಬಸವ ಸಂಸ್ಕೃತಿಯನ್ನು ಬೋಧಿಸುತ್ತಿರುವಾಗ ಅದರ ತತ್ವಗಳಿಗೆ ವಿರುದ್ಧವಾಗಿ ಅಭ್ಯಾಸ ಮಾಡಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು.

ಇದೇ ವೇಳೆ ಸಮುದಾಯಗಳ ನಡುವಿನ ಏಕತೆಗಾಗಿ ವೀರಶೈವ ಲಿಂಗಾಯತ ಏಕತಾ ಸಮಾವೇಶವನ್ನು ಸೆಪ್ಟೆಂಬರ್ 19 ರಂದು ಹುಬ್ಬಳ್ಳಿಯಲ್ಲಿ ನಡೆಸಲಾಗುವುದು ಎಂದು ಅವರು ಹೇಳಿದರು.

ಸಿದ್ಧರಾಮ ಸ್ವಾಮೀಜಿ ಬಸವಣ್ಣನವರ ತತ್ವಗಳಿಗೆ ವಿರುದ್ಧವಾಗಿ ಹೋಗುತ್ತಿದ್ದಾರೆ. ಗದಗ ಮಠವು ವೈದಿಕ ಪದ್ಧತಿಗಳನ್ನು ಕಲಿಸುವ ಮೂರು ಶಾಲೆಗಳನ್ನು ನಡೆಸುತ್ತಿದೆ. ಒಬ್ಬ ಶ್ರೀಗಳು ಬಸವ ಸಂಸ್ಕೃತಿಯನ್ನು ಬೋಧಿಸುತ್ತಿರುವಾಗ ಅದರ ತತ್ವಗಳಿಗೆ ವಿರುದ್ಧವಾಗಿ ಅಭ್ಯಾಸ ಮಾಡಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು.

ಇದೇ ವೇಳೆ ಸಮುದಾಯಗಳ ನಡುವಿನ ಏಕತೆಗಾಗಿ ವೀರಶೈವ ಲಿಂಗಾಯತ ಏಕತಾ ಸಮಾವೇಶವನ್ನು ಸೆಪ್ಟೆಂಬರ್ 19 ರಂದು ಹುಬ್ಬಳ್ಳಿಯಲ್ಲಿ ನಡೆಸಲಾಗುವುದು ಎಂದು ಅವರು ಹೇಳಿದರು.

# ಜಾತಿ ಗಣತಿಯಲ್ಲಿ ಹಿಂದೂ ಬೇಡ

## 'ಇತರೆ'ಯಲ್ಲಿ ವೀರಶೈವ- ಲಿಂಗಾಯತ ಧರ್ಮ ಎಂದು ನಮೂದಿಸಲು ಮಹಾಸಭಾ ಕರೆ

**ಬೆಂಗಳೂರು:** ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ನಡೆಸಲಿರುವ ಜಾತಿ ಗಣತಿಯಲ್ಲಿ ವೀರಶೈವ ಲಿಂಗಾಯತರು 'ಹಿಂದೂ' ಎಂದು ಧರ್ಮದಲ್ಲಿ ಗುರುತಿಸಿಕೊಳ್ಳಬಾರದು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಕರೆ ನೀಡಿದೆ.



ಈ ಬಗ್ಗೆ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿರುವ ಮಹಾಸಭಾದ ಪ್ರಧಾನ ಕಾರ್ಯದರ್ಶಿ ಹಾಗೂ ಅರಣ್ಯ ಸಚಿವ ಈಶ್ವರ್ ಖಂಡ್ರೆ, ಸಮೀಕ್ಷೆಯಲ್ಲಿನ ಧರ್ಮದ ಕಾಲಂನಲ್ಲಿ 'ಇತರೆ' ಎಂದು ಬರೆಸುವಂತೆ ತಿಳಿಸಿದ್ದಾರೆ.

ಸನಾತನ ಹಿಂದೂ ಮತ್ತು ವೀರಶೈವ-ಲಿಂಗಾಯತ ಧರ್ಮಗಳ ನಡುವೆ ಯಾವುದೇ ಸಂಬಂಧವಿಲ್ಲ. ನಮ್ಮ ಸಮುದಾಯದ ಸದಸ್ಯರು ಪ್ರತ್ಯೇಕ ಧರ್ಮವಾಗಿ ದಾಖಲಾಗಬೇಕು. ಇದನ್ನು ಮಹಾಸಭಾ ಬಹಳ ದಿನಗಳಿಂದ ಪ್ರಸ್ತಾಪಿಸುತ್ತಿದೆ. ಉಪ-ಜಾತಿ ಕಾಲಂನಲ್ಲಿ, ನೀವು ಅದಕ್ಕೆ ಅನುಗುಣವಾಗಿ ನಮೂದಿಸಬಹುದು ಎಂದವರು ಹೇಳಿದ್ದಾರೆ. ಧರ್ಮದ ಕಾಲಂನಲ್ಲಿ 'ಇತರರು' ಎಂದಿರುವ ಕಡೆ 'ವೀರಶೈವ ಲಿಂಗಾಯತ' ಎಂದು ನಮೂದಿಸಬೇಕು. ಜಾತಿ ಕಾಲಂನಲ್ಲಿ 'ಲಿಂಗಾಯತ' ಅಥವಾ 'ವೀರಶೈವ' ಅಥವಾ 'ವೀರಶೈವ ಲಿಂಗಾಯತ' ಎಂದು ಬರೆಸಬೇಕು. ಉಪಜಾತಿ ಕಾಲಂನಲ್ಲಿ ಕೋಡ್ ಸಂಖ್ಯೆಯನ್ನು ದೃಢೀಕರಿಸಿ ಬರೆಯಬೇಕು ಎಂದು ಖಂಡ್ರೆ ಹೇಳಿದ್ದಾರೆ.

ಮೀಸಲಾತಿಗಾಗಿ ನೀಡಲಾಗುವ ಜಾತಿ ಪ್ರಮಾಣಪತ್ರಕ್ಕೂ ಸಮೀಕ್ಷೆಯ ಸಮಯದಲ್ಲಿ ನೀಡಲಾದ ಮಾಹಿತಿಗೂ ಯಾವುದೇ ಸಂಬಂಧವಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಜಾತಿ, ಶಾಲಾ ನೋಂದಣಿ ಮತ್ತು ಇತರ ದಾಖಲೆಗಳನ್ನು ಪರಿಶೀಲಿಸಿದ ನಂತರ ಜಾತಿ ಪ್ರಮಾಣಪತ್ರವನ್ನು ನೀಡಲಾಗುತ್ತದೆ. ಸಮೀಕ್ಷೆಯಲ್ಲಿ, ಪ್ರತಿಯೊಬ್ಬರೂ ತಮ್ಮ ಜಾತಿಯನ್ನು ಬರೆಯಬೇಕು ಅದು ನಮ್ಮ ಸಮುದಾಯದ ನಿಜವಾದ ಸಂಖ್ಯೆಯನ್ನು ಬಹಿರಂಗಪಡಿಸುತ್ತದೆ ಎಂದು ಅವರು ಹೇಳಿದರು.

ನಿವೃತ್ತ ಐಪಿಎಸ್ ಅಧಿಕಾರಿ ಮತ್ತು ಮಹಾಸಭಾ ರಾಜ್ಯ ಘಟಕದ ಅಧ್ಯಕ್ಷ ಶಂಕರ್ ಬಿದರಿ ಮಾತನಾಡಿ, ಹಿಂದಿನ ಸಮೀಕ್ಷೆಗಳಲ್ಲಿ ವೀರಶೈವರು ಮತ್ತು ಲಿಂಗಾಯತರನ್ನು ಒಂದು ಜಾತಿ ಎಂದು ಪರಿಗಣಿಸಲಾಗಿತ್ತು ಎಂದು ಹೇಳಿದರು.

ಪ್ರತ್ಯೇಕ ಧರ್ಮವನ್ನು ಅಧಿಕೃತವಾಗಿ ಗುರುತಿಸಲಾಗಿಲ್ಲ. ಹೀಗಾಗಿ ಅದನ್ನು ಪರಿಗಣಿಸಬೇಕಾಗಿದೆ. ನಮ್ಮ ಸಮುದಾಯದಲ್ಲಿ ಹಿಂದುಳಿದವರು, ಬಹಳ ಹಿಂದುಳಿದವರು ಮತ್ತು ಅತ್ಯಂತ ಹಿಂದುಳಿದವರು ಇದ್ದಾರೆ ಎಂದು ಅವರು ಹೇಳಿದರು.

ಸಮುದಾಯದಲ್ಲಿರುವವರ ಹಿಂದುಳಿದಿರುವಿಕೆಯನ್ನು ಮೌಲ್ಯಮಾಪನ ಮಾಡಿ ಬಡವರು ಮತ್ತು ಅತ್ಯಂತ ಬಡವರನ್ನು ಸೂಕ್ತವಾಗಿ ವರ್ಗೀಕರಿಸಬೇಕೆಂದು ಬಿದರಿ ಇದೇ ಸಂದರ್ಭದಲ್ಲಿ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಹಾಸಭಾದ ಕಾರ್ಯದರ್ಶಿ ಹೆಚ್.ಎಂ. ರೇಣುಕ ಪ್ರಸನ್ನ, ಉಪಾಧ್ಯಕ್ಷ ಬಿ.ಎಸ್. ಸಚ್ಚಿದಾನಂದಮೂರ್ತಿ, ಮತ್ತಿತರರು ಉಪಸ್ಥಿತರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**